ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 112 ಸಂಚಿಕೆ- 112 | PAGE-8 ಪುಟ-8 | ಮಂಗಳವಾರ 10.06.2025 | RS.2/- ಬೆಲೆ 2/-

# ಮುಜರಾಯಿ ದೇವಾಲಯಗಳಲ್ಲಿ ಪ್ಲಾಸ್ಟಿಕ್ ಬಳಕೆ ಸಂಪೂರ್ಣ ಬ್ಯಾನ್:ಸಚಿವ ರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.9: ಆಗಸ್ಟ್15ರಿಂದ ರಾಜ್ಯದ ಮುಜರಾಯಿ ಇಲಾಖೆ ವ್ಯಾಪ್ತಿಯ ದೇವಾಲಯಗಳಲ್ಲಿ ನೀರಿನ ಬಾಟಲ್ ಸೇರಿದಂತೆ ಎಲ್ಲಾ ಬಗೆಯ ಪ್ಲಾಸ್ಟಿಕ್ ಬಳಕೆಯನ್ನು ನಿಷೇಧ ಮಾಡಲಾಗುತ್ತದೆ ಎಂದು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.

ವಿಕಾಸಸೌಧದಲ್ಲಿ ಮುಜರಾಯಿ ಇಲಾಖೆ ಪ್ರಗತಿ ಪರಿಶೀಲನಾ ಸಭೆ ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಆಗಸ್ಟ್ 15 ರಿಂದ ಪ್ಲಾಸ್ಟಿಕ್ ಮುಕ್ತ ದೇವಾಲಯ ಪ್ರಾರಂಭ ಮಾಡುತ್ತಿದ್ದೇವೆ. ದೇವಾಲಯಗಳಲ್ಲಿ ಯಾವುದೇ ಕಾರಣಕ್ಕೂ ಪ್ಲಾಸ್ಟಿಕ್ ಬಳಕೆ ಮಾಡಬಾರದು ಎಂದು ಸೂಚಿಸಿದರು.

ಈ ಆದೇಶ ಜಾರಿಗೆ 2 ತಿಂಗಳು ಸಮಯ ಕೊಡಲಾಗಿದ್ದು, ಈಗಾಗಲೇ ಪ್ಲಾಸ್ಟಿಕ್ ಪದಾರ್ಥಗಳು ತೆಗೆದು-ಕೊಂಡಿದ್ದರೆ ಅದನ್ನು ಬಳಕೆ ಮಾಡಬಹುದು. ಆಗಸ್ಟ್ 15 ರಿಂದ ದೇವಾಲಯಗಳಲ್ಲಿ ಪ್ಲಾಸ್ಟಿಕ್ ಬಳಕೆಗೆ ಅವಕಾಶ ಇರುವುದಿಲ್ಲ ಎಂದು ಹೇಳಿದರು. ಮುಜರಾಯಿ ವ್ಯಾಪ್ತಿಯ ದೇವಾಲಯಗಳ ಮಾಹಿತಿಯನ್ನು 3 ತಿಂಗಳ ಒಳಗೆ ಕೊಡಬೇಕು. 3 ತಿಂಗಳ ಒಳಗೆ ಬಾಕಿ ಇರುವ 20 ಸಾವಿರ ಎಕರೆ ದೇವಾಲಯ ಜಮೀನು ಇಂಡೀಕರಣ ಆಗಬೇಕು.

ಗ್ರಾಮಾಂತರ ಮತ್ತು ನಗರ ಭಾಗದಲ್ಲಿ ಇರುವ ಮುಜರಾಯಿ ದೇವಾಲಯಗಳ ಆಸ್ತಿಗಳನ್ನ ಪ್ರತ್ಯೇಕ ಸರ್ವೆ ಮಾಡಬೇಕು. ದೇವಸ್ಥಾನ ಹೆಸರಿನಲ್ಲಿ ಖಾತೆ, ಆಸ್ತಿ ಪತ್ರ ದಾಖಲೆಗಳು ಸರಿಯಾಗಿ ಇರದಿದ್ದರೆ ಎಲ್ಲಾ ದೇವಾಲಯದ ಜಾಗ 3 ತಿಂಗಳ ಒಳಗಡೆ ಸರ್ವೆ ಮಾಡಿ ನೋಟಿಫಿಕೇಶನ್ ಮಾಡಲು ಸೂಚನೆ. ಅರ್ಚಕರಿಗೆ ತಸ್ತಿಕ್ ನೇರ ವರ್ಗಾವಣೆ ಮೂಲಕ ನೀಡಲು ಕ್ರಮ. ಈಗ 25 ಸಾವಿರ ಅರ್ಚಕರ ಪೈಕಿ 14 ಸಾವಿರ ಅರ್ಚಕರು ಮಾಹಿತಿ ಕೊಟ್ಟಿದ್ದಾರೆ. ಉಳಿದವರು ಬೇಗ ಮಾಹಿತಿ ಕೊಟ್ಟರೆ ಅವರಿಗೂ ನೇರ ವರ್ಗಾವಣೆ ಮೂಲಕ ತಸ್ತಿಕ್ ನೀಡಲು ಕ್ರಮ ಕೈಗೊಳ್ಳಲಾಗುವುದು.

31 ಜಿಲ್ಲೆಗಳಲ್ಲಿ ಧಾರ್ಮಿಕ ಪರಿಷತ್ ರಚನೆಗೆ ಕ್ರಮಕ್ಕೆ ಸೂಚನೆ ನೀಡಲಾಗಿದೆ. 8 ಜಿಲ್ಲೆಯಲ್ಲಿ ಮಾತ್ರ ಧಾರ್ಮಿಕ ಪರಿಷತ್ ರಚನೆಯಾಗಿದ್ದು ಉಳಿದ ಕಡೆ ಶೀಘ್ರವೇ ಮಾಡಬೇಕು.

ಬೇರೆ ಬೇರೆ ರಾಜ್ಯದಲ್ಲಿ ಇರೋ ಮುಜರಾಯಿ ಇಲಾಖೆ ವಸತಿ ಭವನಗಳಲ್ಲಿ 3 ಸ್ಟಾರ್ ಸೌಲಭ್ಯಗಳನ್ನು ನೀಡಲು ನಿರ್ಧಾರ. ತಿರುಪತಿ, ತುಳಿಜಾಪುರ, ಪಂಡರಾಪುರ, ಸೇರಿ ಹಲವು ಕಡೆ ಭವನಗಳನ್ನು ನಿರ್ಮಾಣಕ್ಕೆ ಅಗತ್ಯ ಕ್ರಮ ತೆಗೆದುಕೊಳ್ಳುವುದು. ಬೇರೆ ರಾಜ್ಯದಲ್ಲಿ ಇರುವ ಭವನಗಳ ರೂಮ್ ಬುಕ್ಕಿಂಗ್ ಅನ್ನು ಆನ್‌ಲೈನ್ ಮೂಲಕ ಜಾರಿ ಮಾಡಲು ವ್ಯವಸ್ಥೆ ರೂಪಿಸಲು ಸೂಚನೆ ನೀಡಲಾಗಿದೆ.

ಹೊಸ ಪ್ರಾಧಿಕಾರಗಳ ಸಮಗ್ರ ಯೋಜನೆಗೆ ಕ್ರಮವಹಿಸಲಾಗಿದೆ. ಹುಲಿಗೆಮ್ಮ, ಮಲೆ ಮಹದೇಶ್ವರ, ಘಾಟಿ ಸುಬ್ರಮಣ್ಯ, ರೇಣುಕಾ ಎಲ್ಲಮ್ಮ, ಚಾಮುಂಡೇಶ್ವರಿ ದೇವಾಲಯ ಅಭಿವೃದ್ಧಿ ಪ್ರಾಧಿಕಾರ ಮಾಸ್ಟರ್ ಪ್ಲಾನ್ ಮಾಡಲು ನಿರ್ಧಾರ ಮಾಡಲಾಗಿದೆ.

ಚಾಮುಂಡೇಶ್ವರಿ ಬೆಟ್ಟದಲ್ಲಿ ಒತ್ತುವರಿ ಆಗಿದ್ದ 11 ಎಕರೆ ಜಾಗವನ್ನು ತೆರವು ಮಾಡಲಾಗಿದೆ. ಉಳಿದ ಜಾಗ ತೆರವುಗೊಳಿಸಲು ಸೂಚನೆ ನೀಡಲಾಗಿದೆ ಎಂದರು.

## ಮೋದಿ 3.0 ಸರ್ಕಾರಕ್ಕೆ ಒಂದು ವರ್ಷ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಜೂ.9: ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರವು ಸತತ ಮೂರನೇ ಅವಧಿಗೆ ಅಧಿಕಾರಕ್ಕೆ ಮರಳಿ ಇಂದಿಗೆ ಒಂದು ವರ್ಷ ತುಂಬಿದೆ. ಒಂದು ವರ್ಷದ ಅವಧಿಯಲ್ಲಿ ಮೋದಿ ನೇತೃತ್ವದ ಸರ್ಕಾರ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ಸುಧಾರಣಾ ಕ್ರಮಗಳನ್ನು ಕೈಗೊಂಡಿದೆ.

ಲೋಕಸಭಾ ಚುನಾವಣೆಯಲ್ಲಿ ಮತ್ತೊಂದು ನಿರ್ಣಾಯಕ ಗೆಲುವಿನ ನಂತರ 2024ರ ಜೂನ್ 9 ರಂದು ಮೋದಿ ಮೂರನೇ ಬಾರಿಗೆ ಪ್ರಧಾನ ಮಂತ್ರಿಯಾಗಿ ಅಧಿಕಾರ ವಹಿಸಿಕೊಂಡರು. ದೇಶವನ್ನು ವಿಕಸಿತ ಭಾರತ (ಅಭಿವೃದ್ಧಿ ಹೊಂದಿದ ಭಾರತ) ಆಗಿ ಪರಿವರ್ತಿಸುವ ಮತ್ತು ಜಾಗತಿಕ ವೇದಿಕೆಯಲ್ಲಿ ತನ್ನ ಪಾತ್ರವನ್ನು ಪ್ರತಿಪಾದಿಸುವತ್ತ ನಿರಂತರ ಗಮನ ಹರಿಸಲಾಗಿದೆ. ಕಾರ್ಯತಂತ್ರದ ಮಿಲಿಟರಿ ಕ್ರಮ ಮತ್ತು ಸಾಮಾಜಿಕ ಕಲ್ಯಾಣ ಸುಧಾರಣೆಗಳಿಂದ ಹಿಡಿದು ಗಮನಾರ್ಹ ಆರ್ಥಿಕ ಪರಿಹಾರ ಮತ್ತು ಪೂರ್ವಭಾವಿ ಜಾಗತಿಕ ರಾಜತಾಂತ್ರಿಕತೆಯವರೆಗೆ ಗಮನ ಕೇಂದ್ರೀಕರಿಸಲಾಗಿದೆ. ಮೋದಿ ಸರ್ಕಾರದ 3.0 ರ ಮೊದಲ ವರ್ಷದ ನಿರ್ಣಾಯಕ ಕ್ಷಣಗಳಲ್ಲಿ ಆಪರೇಷನ್ ಸಿಂಧೂರ ಪ್ರಮುಖವಾದ ಬೆಳವಣಿಗೆ. ಏಪ್ರಿಲ್ 22 ರಂದು 26 ಜೀವಗಳನ್ನು ಬಲಿ ಪಡೆದ ವಿನಾಶಕಾರಿ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತ್ಯುತ್ತರವಾಗಿ 2025ರ ಮೇ 7 ರಂದು ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ಉಗ್ರರ ಶಿಬಿರಗಳನ್ನು ಭಾರತ ಧ್ವಂಸಗೊಳಿಸಿತು. ಕೇಂದ್ರ ಸರ್ಕಾರದ ದಿಟ್ಟ ನಿರ್ಧಾರಗಳಲ್ಲಿ ಇದು ಒಂದು. ಬ್ರಿಟಿಷ್ ಕಾಲದ ಕಾನೂನಿಗೆ ಇತಿಶ್ರೀ ಹಾಡಿ ಹೊಸ ಮೂರು ಕ್ರಿಮಿನಲ್ ಕಾನೂನುಗಳ ಪರಿಚಯ, ಒಂದು ದೇಶ, ಒಂದು ಚುನಾವಣೆ ಪರಿಕಲ್ಪನೆ ಪರಿಚಯ, ಕಾಶ್ಮೀರದಲ್ಲಿ ಐತಿಹಾಸಿಕ ವಿಧಾನಸಭಾ ಚುನಾವಣೆ, ಆಯುಷ್ಮಾನ್ ಅಡಿ 70 ವರ್ಷ ಮೇಲ್ಪಟ್ಟವರಿಗೆ ಉಚಿತ ಚಿಕಿತ್ಸೆ, ಮುಂಬೈ ದಾಳಿ ಮಾಸ್ಟರ್‌ಮೈಂಡ್ ಉಗ್ರ ರಾಣಾ ಭಾರತಕ್ಕೆ ಹಸ್ತಾಂತರ, ಆಡಳಿತದ ಪಾರದರ್ಶಕತೆಗೆ ವಕ್ಫ್ ತಿದ್ದುಪಡಿ ಕಾಯ್ದೆ, ವಿಶ್ವದಾಖಲೆಯ ಕುಂಭಮೇಳ ಅಭೂತಪೂರ್ವ ಯಶಸ್ಸು ಮೊದಲಾದ ಸುಧಾರಣಾ ಕ್ರಮಗಳೊಂದಿಗೆ ಮೋದಿ ಸರ್ಕಾರ ಗಮನ ಸೆಳೆದಿದೆ. 12 ಲಕ್ಷದ ತನಕ ಆದಾಯ ತೆರಿಗೆಯಲ್ಲಿ ವಿನಾಯ್ತಿ ನೀಡುವ ಮೂಲಕ ಮಧ್ಯಮ ವರ್ಗದ ಜನರಿಗೆ ಅನುಕೂಲ ಮಾಡಿಕೊಡಲಾಯಿತು. ದೆಹಲಿ, ಮಹಾರಾಷ್ಟ್ರ, ಹರಿಯಾಣ ಚುನಾವಣೆಯಲ್ಲಿ ಅಭೂತಪೂರ್ವ ಜಯವನ್ನು ಎನ್‌ಡಿಎ ಮೈತ್ರಿಕೂಟ ಸಾಧಿಸಿತು.

## ಮೋದಿ ಸರ್ಕಾರಕ್ಕೆ ಶೂನ್ಯ ಅಂಕ:ಸಿಎಂ



ಮಲ್ಲಮ್ಮನುಡಿವಾರ್ತೆ

ಬೆಂಗಳೂರು:ಜೂ.9: ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಬದುಕಿರುವುದು ಪ್ರಚಾರದಿಂದ. 11 ವರ್ಷ ಪೂರೈಸಿದ ಅವರ ಸರ್ಕಾರ-ಕ್ಕೆ ಶೂನ್ಯ ಅಂಕ ಕೊಡುತ್ತೇನೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ಮೋದಿ ಅವರು ಪ್ರಚಾರದಿಂದಷ್ಟೇ ಬದುಕಿದ್ದಾರೆ. ನೋಟು ಅಮಾನ್ಯೀಕರಣದಿಂದ ಯಾರಿಗೆ ಅನುಕೂಲವಾಗಿದೆ? ಅಚ್ಛೆ ದಿನ್ ಆಯೇಗಾ ಎಂದರು, ಪ್ರತಿ ವರ್ಷ ಎರಡು ಕೋಟಿ ಉದ್ಯೋಗ ಕೊಡುತ್ತೇನೆ ಎಂದರು, ರೈತರ ಸಮಸ್ಯೆ ಬಗೆಹರಿಸುತ್ತೇನೆ ಎಂದರು, ಇವೆಲ್ಲಾ ಆಗಿದೆಯಾ? ಕೊನೆಗೆ ಕೇಂದ್ರ ಸರ್ಕಾರದ ವಿರುದ್ಧ ರೈತರೇ ಒಂದು ವರ್ಷ ಕಾಲ ಚಳುವಳಿಯನ್ನು ಮಾಡಿದರು ಎಂದು ಹೇಳಿದರು.

ಮೋದಿಯವರು ಪ್ರಮುಖವಾಗಿ ಏನು ಹೇಳಿದ್ದರೋ ಅದನ್ನೇ ಮಾಡಿಲ್ಲ. ತಮ್ಮ ಸರ್ಕಾರಕ್ಕೆ ಹನ್ನೊಂದು ವರ್ಷ ತುಂಬಿಸಿದ್ದಾರೆ ಅಷ್ಟೇ. ಮಾಧ್ಯಮಗಳು ಅವರಿಗೆ ಹೆಚ್ಚಿನ ಪ್ರಚಾರ ನೀಡುತ್ತಿವೆ. ಅವುಗಳ ಮೂಲಕ ಸುಳ್ಳು ವಿಚಾರಗಳಿಗೆ ಅವರು ಪ್ರಚಾರ ನೀಡುತ್ತಿದ್ದಾ

(2ನೇ ಪುಟ ನೋಡಿ)

## ಮೋದಿ ಸರ್ಕಾರದಿಂದ ಪ್ರಜಾಪ್ರಭುತ್ವ, ಆರ್ಥಿಕತೆ, ಸಾಮಾಜಿಕ ರಚನೆ ಮೇಲೆ ದೊಡ್ಡ ಹೊಡೆತ: ಮಲ್ಲಿಕಾರ್ಜುನ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಜೂ.9: ಕಳೆದ 11 ವರ್ಷಗಳಲ್ಲಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ದೇಶದ ಪ್ರಜಾಪ್ರಭುತ್ವ, ಆರ್ಥಿಕತೆ ಮತ್ತು ಸಾಮಾಜಿಕ ರಚನೆ ಮೇಲೆ ಆಳವಾದ ಹೊಡೆತ ನೀಡಿದೆ ಎಂದು ಕಾಂಗ್ರೆಸ್ ಸೋಮವಾರ ಹೇಳಿದೆ.

ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಈ 11 ವರ್ಷಗಳಲ್ಲಿ ಸರ್ಕಾರವು ಸಂವಿಧಾನದ ಪ್ರತಿಯೊಂದು ಪುಟದಲ್ಲಿ 'ಸರ್ವಾಧಿಕಾರದ ಶಾಯಿಯನ್ನು ಮಾತ್ರ ಬಳಿದಿದೆ'. ಬಿಜೆಪಿ-ಆರ್‌ಎಸ್‌ಎಸ್ ಪ್ರತಿಯೊಂದು ಸಾಂವಿಧಾನಿಕ ಸಂಸ್ಥೆಯನ್ನು ದುರ್ಬಲಗೊಳಿಸಿದೆ ಮತ್ತು ಅವುಗಳ ಸ್ವಾಯತ್ತತೆಯ ಮೇಲೆ ದಾಳಿ ಮಾಡಿದೆ ಎಂದು ಆರೋಪಿಸಿದ್ದಾರೆ.

ಸಾರ್ವಜನಿಕ ಅಭಿಪ್ರಾಯದ ವಿರುದ್ಧ ಹೋಗುವುದು ಮತ್ತು ಸರ್ಕಾರಗಳನ್ನು ಹಿಂಬಾಗಿಲಿನಿಂದ ಉರುಳಿಸುವುದು ಅಥವಾ ಏಕಪಕ್ಷೀಯ ಸರ್ವಾಧಿಕಾರವನ್ನು ಬಲವಂತವಾಗಿ ಹೇರುವುದು ನಡೆದಿದೆ. ಈ ಅವಧಿಯಲ್ಲಿ, ರಾಜ್ಯಗಳ ಹಕ್ಕುಗಳನ್ನು ನಿರ್ಲಕ್ಷಿಸಲಾಗಿದೆ ಮತ್ತು ಒಕ್ಕೂಟ ವ್ಯವಸ್ಥೆ ರಚನೆಯು ದುರ್ಬಲಗೊಂಡಿದೆ' ಎಂದು ಖರ್ಗೆ ಹೇಳಿದರು.

'ದ್ವೇಷ, ಬೆದರಿಕೆ ಮತ್ತು ಭಯ'ದ ವಾತಾವರಣವನ್ನು ಹರಡಲು ನಿರಂತರವಾಗಿ ಪ್ರಯತ್ನಗಳು ನಡೆಯುತ್ತಿವೆ. ದಲಿತರು, ಬುಡಕಟ್ಟು ಜನಾಂಗದವರು, ಹಿಂದುಳಿದವರು, ಅಲ್ಪಸಂಖ್ಯಾತರು ಮತ್ತು ದುರ್ಬಲ ವರ್ಗಗಳ ಮೇಲಿನ ಶೋಷಣೆ ನಿರಂತರವಾಗಿ ಹೆಚ್ಚುತ್ತಿದೆ. ಅವರಿಗೆ ಮೀಸಲಾತಿ ಮತ್ತು ಸಮಾನ ಹಕ್ಕುಗಳನ್ನು ಕಸಿದುಕೊಳ್ಳುವ ಪಿತೂರಿ ಮುಂದುವರೆದಿದೆ. ಮಣಿಪುರದಲ್ಲಿ ನಡೆಯುತ್ತಿರುವ ಹಿಂಸಾಚಾರವು ಬಿಜೆಪಿಯ ಆಡಳಿತ ವೈಫಲ್ಯಕ್ಕೆ ದೊಡ್ಡ ಪುರಾವೆಯಾಗಿದೆ' ಎಂದು ಅವರು ಪೋಸ್ಟ್ ಮಾಡಿದ್ದಾರೆ.

'ಯುಪಿಎ ಅವಧಿಯಲ್ಲಿ ಸರಾಸರಿ ಶೇ 8ರಷ್ಟಿದ್ದ ದೇಶದ ಜಿಡಿಪಿ ಬೆಳವಣಿಗೆ ದರವನ್ನು ಶೇ 5-6ರಲ್ಲಿ ಕಾಯ್ದುಕೊಳ್ಳುವುದನ್ನು ಬಿಜೆಪಿ-ಆರ್‌ಎಸ್‌ಎಸ್ ಅಭ್ಯಾಸವನ್ನಾಗಿ ಮಾಡಿಕೊಂಡಿದೆ. ವಾರ್ಷಿಕವಾಗಿ 2 ಕೋಟಿ ಉದ್ಯೋಗಗಳ ಭರವಸೆ ಈಡೇರಿಸುವ ಬದಲು, ಯುವಕರಿಂದ ಕೋಟ್ಯಂತರ ಉದ್ಯೋಗಗಳನ್ನು ಕಸಿದುಕೊಳ್ಳಲಾಯಿತು.

(2ನೇ ಪುಟ ನೋಡಿ)

## ಮಹಿಳೆ ಕೊಲೆಗೈದು ಶವ ಸುಟ್ಟ ಆರೋಪಿಗಳ ಬಂಧನ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.9:ವಾಡಿ ಪೊಲೀಸ್ ಠಾಣೆ ವ್ಯಾಪ್ತಿಯ ಹಲಕರ್ಟಿ ಗ್ರಾಮದಿಂದ ಲಾಡ್ಲಾಪುರಗೆ ಹೋಗುವ ರಸ್ತೆಯಲ್ಲಿರುವ ಜಮೀನಿನಲ್ಲಿ ಮಹಿಳೆ ಶವ ಸುಟ್ಟು ಹಾಕಿದ ಪ್ರಕರಣವನ್ನು ಬೇಧಿಸಿ ಇಬ್ಬರು ಆರೋಪಿಗಳನ್ನು ಬಂಧಿಸುವಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಯಶಸ್ವಿಯಾಗಿದ್ದಾರೆ ಎಂದು ಎಸ್‌ಪಿ ಅಡ್ಡೂರು ಶ್ರೀನಿವಾಸಲು ತಿಳಿಸಿದರು.

ನಗರದ ಪೊಲೀಸ್ ಭವನದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಕರಣಕ್ಕೆ ಸಂಬಂಧಿಸಿದಂತೆ ವಿಜಯಪುರ ಜಿಲ್ಲೆಯ ಸಿಂದಗಿ ತಾಲ್ಲೂಕಿನ ಗಣಿಯಾರದ ಸೋಮಲು ತಂದೆ ಠಾಕ್ರು ಪವಾರ (53) ಮತ್ತು ಹಾಮು ಅಲಿಯಾಸ್ ಪಪ್ಪು ತಂದೆ ಲಾಲು ರಾಠೋಡ್ (35) ಎಂಬುವವರನ್ನು ಬಂಧಿಸಿ ಅವರು ಕೃತ್ಯಕ್ಕೆ ಬಳಸಿದ ಒಡನಿ, ಟವಲ್ ಹಾಗೂ ಶವ ಸಾಗಿಸಲು ಬಳಸಿದ ಹೂಂಡೈ ವೆನ್ಯೂ ಕಾರು ಮತ್ತು ಮೃತಳ ತಾಳಿ ಗುಂಡುಗಳನ್ನು ಜಪ್ತಿ ಮಾಡಿ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದರು.

ಸಾಕ್ಷಿ ನಾಶಪಡಿಸಲು ಗುರುತು ಸಿಗದ ಹಾಗೆ ಪೆಟ್ರೋಲ್ ಹಾಕಿ ಮಹಿಳೆಯ ಶವವನ್ನು ಸಂಪೂರ್ಣವಾಗಿ ಸುಟ್ಟು ಹಾಕಲಾಗಿತ್ತು. ಇದರಿಂದಾಗಿ ಪ್ರಕರಣವನ್ನು ಬೇಧಿಸುವುದು ಸವಾಲಾಗಿತ್ತು. ಈ ಸಂಬಂಧ ಹೆಚ್ಚುವರಿ ಎಸ್‌ಪಿ ಮಹೇಶ ಮೇಘಣ್ಣನವರ, ಶಹಾಬಾದ ಡಿಎಸ್‌ಪಿ ಶಂಕರಗೌಡ ಪಾಟೀಲ ಅವರ ಮಾರ್ಗದರ್ಶನದಲ್ಲಿ ಚಿತ್ತಾಪುರ ಸಿಪಿಐ ಚಂದ್ರಶೇಖರ ತಿಗಡಿ ನೇತೃತ್ವದಲ್ಲಿ ವಾಡಿ ಪಿಎಸ್‌ಐ ತಿರುಮಲೇಶ, ಸಿಬ್ಬಂದಿಗಳಾದ ಎಎಸ್‌ಐ ಗುಂಡಪ್ಪ, ಶರಣಪ್ಪ ಜಾಂಜಿ, ಲಾಲ್ ಅಹ್ಮದ್, ಚಂದ್ರಶೇಖರ, ವೀರಭದ್ರ, ಲಕ್ಷ್ಮಣ, ಆನಂದ ರಮಣಯ್ಯ, ಬಲರಾಮ, ರವೀಂದ್ರ, ಆರೀಫ್, ರಮೇಶ, ಸುನೀಲ, ದೇವು ಅವರನ್ನು ಒಳಗೊಂಡ ತಂಡ ರಚಿಸಲಾಗಿತ್ತು. ಈ ತಂಡ ಎಲ್ಲಾ ಆಯಾಮಗಳಿಂದ ತನಿಖೆ ನಡೆಸಿ ಪ್ರಕರಣವನ್ನು ಬೇಧಿಸುವಲ್ಲಿ ಯಶಸ್ವಿಯಾಗಿದೆ ಎಂದರು.

ದೇವಿಬಾಯಿ ಕೊಲೆಯಾದ ಮಹಿಳೆ:ಆರೋಪಿಗಳು ಪೆಟ್ರೋಲ್ ಹಾಕಿ ಮಹಿಳೆಯ ಶವವನ್ನು

(2ನೇ ಪುಟ ನೋಡಿ)

## ತಲಾ ಆದಾಯದಲ್ಲಿ ಬೀದರ್ ಬಹಳ ಹಿಂದೆ: ಪ್ರೊ. ಎಂ. ಗೋವಿಂದರಾವ್




ಮಲ್ಲಮ್ಮನುಡಿ ವಾರ್ತೆ ಬೀದರ. ಜೂ. 09: 'ರಾಜ್ಯದ ಒಟ್ಟು ಸರಾಸರಿ ತಲಾ ಆದಾಯವನ್ನು ಲೆಕ್ಕ ಹಾಕಿ ನೋಡಿದರೆ ಬೀದರ್ ಜಿಲ್ಲೆಯ ತಲಾ ಆದಾಯ ಅರ್ಧದಷ್ಟಿದ್ದು, ಜಿಲ್ಲೆ ಎಷ್ಟು ಹಿಂದುಳಿದಿದೆ ಎಂಬುದನ್ನು ಇದರಿಂದ ತಿಳಿಯಬಹುದು' ಎಂದು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಅಧ್ಯಕ್ಷ ಪ್ರೊ. ಎಂ. ಗೋವಿಂದರಾವ್ ತಿಳಿಸಿದರು.

ನಗರದ ಜಿಲ್ಲಾ ಪಂಚಾಯಿತಿಯಲ್ಲಿ ಸೋಮವಾರ ನಡೆದ ಸಮಿತಿ ಸಭೆಯ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬೀದರ್ ಜಿಲ್ಲೆ ಬಹಳ ಹಿಂದುಳಿದಿದೆ. ಕೈಗಾರಿಕೆಗಳು, ನೀರಾವರಿ ಸೌಲಭ್ಯ, ಕೃಷಿ ಕ್ಷೇತ್ರದಲ್ಲಿ ಸಾಕಷ್ಟು ಬದಲಾವಣೆ ಆಗಬೇಕಿದೆ. ಉತ್ತಮ ಸಂಪರ್ಕ ವ್ಯವಸ್ಥೆ ಬರಬೇಕಿದೆ ಎಂದು ಹೇಳಿದರು.

2002ರಲ್ಲಿ ಡಾ. ಡಿ.ಎಂ. ನಂಜುಂಡಪ್ಪ ವರದಿ ಸರ್ಕಾರಕ್ಕೆ ಸಲ್ಲಿಕೆಯಾಗಿತ್ತು. 114 ತಾಲ್ಲೂಕುಗಳು ಹಿಂದುಳಿದವು. 39 ಅತ್ಯಂತ ಹಿಂದುಳಿದರೆ, 40 ಅತಿ ಹಿಂದುಳಿದ ತಾಲ್ಲೂಕುಗಳು ಸೇರಿವೆ. ಹಿಂದುಳಿದ ತಾಲ್ಲೂಕುಗಳಲ್ಲಿ ಮೂಲಸೌಕರ್ಯ ಹೆಚ್ಚಿಸಿ, ಅಭಿವೃದ್ಧಿಪಡಿಸುವ ಉದ್ದೇಶದಿಂದ ಸರ್ಕಾರ ನನ್ನ ಅಧ್ಯಕ್ಷತೆಯಲ್ಲಿ 2024ರ ಅಕ್ಟೋಬರ್‌ನಲ್ಲಿ ಸಮಿತಿ ರಚಿಸಿದೆ. ಸರ್ಕಾರಕ್ಕೆ ವರದಿ ಸಲ್ಲಿಸಲು ಒಂದು ವರ್ಷ ಕಾಲಾವಕಾಶ ನಿಗದಿಪಡಿಸಲಾಗಿದ್ದು, ಈಗಾಗಲೇ 28 ಜಿಲ್ಲೆಗಳಲ್ಲಿ ಸಭೆ ನಡೆಸಿ, ಮಾಹಿತಿ ಕ್ರೋಢೀಕರಿಸಲಾಗಿದೆ ಎಂದು ವಿವರಿಸಿದರು.

?31 ಸಾವಿರ ಕೋಟಿ ಅನುದಾನ ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗೆ ವಿನಿಯೋಗಿಸಬೇಕಿದೆ. ಇದರಲ್ಲಿ ಶೇ

(2ನೇ ಪುಟ ನೋಡಿ)

## ಕಮಲನಗರದಲ್ಲಿ ಗೋಹತ್ಯೆ: ನಾಲ್ವರ ಬಂಧನ



ಮಲ್ಲಮ್ಮನುಡಿ ವಾರ್ತೆ

ಬೀದರ. ಜೂ. 06 : ಕಮಲನಗರ ಪಟ್ಟಣ ಹೊರವಲಯದ ರಾಂಪೂರ ರಸ್ತೆಯಲ್ಲಿರುವ ಶೆಡ್‌ವೊಂದರಲ್ಲಿ ಭಾನುವಾರ ನಡೆದ ಗೋಹತ್ಯೆಗೆ ಸಂಬಂಧಿಸಿದಂತೆ ಪೊಲೀಸರು ನಾಲ್ವರನ್ನು ವಶಕ್ಕೆ ಪಡೆದು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಎಮ್ಮೆ ಮತ್ತು ನಾಲ್ಕು ಕರುಗಳನ್ನು ವಶಕ್ಕೆ ಪಡೆದು ಗೋಶಾಲೆಗೆ ಸಾಗಿಸಿದ್ದಾರೆ.

ಘಟನೆ ಖಂಡಿಸಿ ಬಜರಂಗ ದಳ, ವಿಶ್ವ ಹಿಂದೂ ಪರಿಷತ್ ಹಾಗೂ ಬಿಜೆಪಿ ಕಾರ್ಯಕರ್ತರು ಪಟ್ಟಣದಲ್ಲಿ ಪ್ರತಿಭಟನೆ ನಡೆಸಿ, ಅಂಗಡಿ ಮುಂಗಟ್ಟುಗಳನ್ನು ಬಂದ್ ಮಾಡಿಸಿದರು. ರಸ್ತೆ ಮೇಲೆ ಟೈರ್ ಸುಟ್ಟು ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ವಾಹನದಲ್ಲಿ ಗೋವಿನ ಕಳೇಬರವನ್ನು ಮೆರವಣಿಗೆಯಲ್ಲಿ ಕೊಂಡೊಯ್ದು ಅಂತ್ಯಕ್ರಿಯೆ ಮಾಡಿದರು. 'ಶೆಡ್‌ವೊಂದರಲ್ಲಿ ಗೋವಿನ ಹತ್ಯೆಯಾಗಿದ್ದು, ವಿಷಯ ಗೊತ್ತಾಗುತ್ತಿದ್ದಂತೆ ನಾಲ್ವರನ್ನು ಬಂಧಿಸಲಾಗಿದೆ. ಆರೋಪಿಗಳ ಬಂಧನದ ಬಳಿಕವೂ ಪ್ರತಿಭಟನೆ ನಡೆಸಲಾಗಿದೆ' ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ತಿಳಿಸಿದ್ದಾರೆ.

## ಮೋದಿ ಸರ್ಕಾರದ 11 ವರ್ಷ' ಸುವರ್ಣಾಕ್ಷರ'ಗಳಲ್ಲಿ ಬರೆದಿಡುವಂತಹದ್ದು: ಜೆಪಿ ನಡ್ಡಾ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಜೂ.9: ಪ್ರಧಾನಿ ನರೇಂದ್ರ ಮೋದಿಯವರ 11 ವರ್ಷಗಳ ಅಧಿಕಾರಾವಧಿಯನ್ನು ಶ್ಲಾಘಿಸಿದ ಭಾರತೀಯ ಜನತಾ ಪಕ್ಷದ ಅಧ್ಯಕ್ಷ ಜೆ.ಪಿ. ನಡ್ಡಾ ಅವರು, ಮೋದಿ ನಾಯಕತ್ವದಲ್ಲಿ ಸರ್ಕಾರ ಮಾಡಿದ ಕೆಲಸಗಳನ್ನು 'ಸುವರ್ಣಾಕ್ಷರಗಳಲ್ಲಿ' ಬರೆಯಲ್ಪಡಬೇಕು ಎಂದು ಹೇಳಿದರು. ಪ್ರಧಾನಿ ಮೋದಿ ಅವರು ದೇಶದ ರಾಜಕೀಯ ಸಂಸ್ಕೃತಿಯನ್ನು ಬದಲಾಯಿಸಿದರು. ಜವಾಬ್ದಾರಿಯುತ ಸರ್ಕಾರವನ್ನು ಒದಗಿಸುವ ಮೂಲಕ ಉತ್ತಮ ಆಡಳಿತದ ರಾಜಕೀಯವನ್ನು ಪ್ರಾರಂಭಿಸಿದರು ಎಂದು ನಡ್ಡಾ ಹೇಳಿದರು. ಆದರೆ ಕಾಂಗ್ರೆಸ್ ನೇತೃತ್ವದ ಹಿಂದಿನ ಯುಪಿಎ ಸರ್ಕಾರ 'ಭ್ರಷ್ಟಾಚಾರ, ಹಗರಣಗಳು ಮತ್ತು ಸಮಾಧಾನ'ದ ರಾಜಕೀಯಕ್ಕೆ ಹೆಸರುವಾಸಿಯಾಗಿತ್ತು ಎಂದರು.

ಬಿಜೆಪಿ ಪ್ರಧಾನ ಕಚೇರಿಯಲ್ಲಿ ನಡೆದ ಸಮ್ಮೇಳನವನ್ನುದ್ದೇಶಿಸಿ ಮಾತನಾಡಿದ ನಡ್ಡಾ, ಪ್ರಧಾನಿ ಮೋದಿ ಜವಾಬ್ದಾರಿಯುತ ಮತ್ತು ಬಲಿಷ್ಠ ಸರ್ಕಾರವನ್ನು ಒದಗಿಸಿದ್ದಾರೆ ಎಂದು ಬಿಜೆಪಿ ಅಧ್ಯಕ್ಷರು ಹೇಳಿದರು. ಮೋದಿ ಸರ್ಕಾರ ತೆಗೆದುಕೊಂಡ ದಿಟ್ಟ ನಿರ್ಧಾರಗಳಲ್ಲಿ 370ನೇ ವಿಧಿ ರದ್ದತಿ, ತ್ರಿವಳಿ ತಲಾಖ್ ರದ್ದತಿ, ವಕ್ಫ್ ತಿದ್ದುಪಡಿ, ನೋಟು ರದ್ದತಿ, ಮಹಿಳಾ ಮೀಸಲಾತಿ ಮಸೂದೆ ಸೇರಿವೆ ಎಂದು ನಡ್ಡಾ ಉಲ್ಲೇಖಿಸಿದರು. ಪ್ರಧಾನಿ ಮೋದಿ ಜೂನ್ 9, 2024 ರಂದು ಮೂರನೇ ಅವಧಿಗೆ ಪ್ರಮಾಣವಚನ ಸ್ವೀಕರಿಸಿದರು. ಮೋದಿ ಸರ್ಕಾರವು ತನ್ನ ಮೂರನೇ ಅವಧಿಯ ಮೊದಲ ವಾರ್ಷಿಕೋತ್ಸವ ಮತ್ತು ಸೋಮವಾರ ಒಟ್ಟಾರೆ-ಯಾಗಿ 11ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿದೆ.

ಕೇಂದ್ರ ಸರ್ಕಾರದ ವಿದೇಶಾಂಗ ನೀತಿ ಮತ್ತು ಆಪರೇಷನ್ ಸಿಂಧೂರ್ ಬಗ್ಗೆ ಟೀಕಿಸಿದ್ದಕ್ಕಾಗಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಟೀಕಿಸಿದ ಅವರು, ಅವರು

(2ನೇ ಪುಟ ನೋಡಿ)

**ಒಂದನೇ ಪುಟದಿಂದ**

# ಶೂನ್ಯ ಅಂಕ:ಸಿಎಂ

ರೆಂದು ತಿಳಿಸಿದರು.ನಮ್ಮ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಘೋಷಣೆ ಮಾಡಿದಾಗ ಇದನ್ನು ಅನುಷ್ಠಾನ ಮಾಡಲಾಗುವುದಿಲ್ಲ, ರಾಜ್ಯ ಸರ್ಕಾರ ದಿವಾಳಿಯಾಗುತ್ತದೆ ಎಂದವರು ಅದನ್ನೇ ನಕಲು ಮಾಡಿ ರಾಜಸ್ಥಾನ, ಉತ್ತರ ಪ್ರದೇಶ, ದೆಹಲಿಯಲ್ಲಿ ಜಾರಿ ಮಾಡಿದರು.

ಗುಜರಾತ್ ಮುಖ್ಯಮಂತ್ರಿಗಳಾಗಿದ್ದ ಸಂದರ್ಭದಲ್ಲಿ ಶೇ.50ರಷ್ಟು ತೆರಿಗೆ ಹಂಚಿಕೆ ಮಾಡಿ ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದರು. ಅವರೇ ಪ್ರಧಾನಿಗಳಾದಾಗ ಏನು ಮಾಡಿದರು? ನಿರ್ಮಲಾ ಸೀತಾರಾಮನ್ ಅವರು ರೂ.5,300 ಕೋಟಿಗಳನ್ನು ರಾಜ್ಯಕ್ಕೆ ಕೊಡುವುದಾಗಿ ಘೋಷಿಸಿ ಕೊಡಲಿಲ್ಲ. 15ನೇ ಹಣಕಾಸು ಆಯೋಗದವರು ಕರ್ನಾಟಕಕ್ಕೆ ರೂ.11,495 ಕೋಟಿ ಕೊಡಬೇಕು ಎಂದು ಶಿಫಾರಸ್ಸು ಮಾಡಿದರೂ ಕೊಡಲಿಲ್ಲ. ರಾಜ್ಯ ಬಿಜೆಪಿ ಕೇಂದ್ರ ಸರ್ಕಾರದಿಂದ ಕರ್ನಾಟಕಕ್ಕೆ ಆಗುತ್ತಿರುವ ಅನ್ಯಾಯಗಳನ್ನು ಪ್ರಶ್ನೆ ಮಾಡುವುದನ್ನು ಬಿಟ್ಟು, ಅಪಪ್ರಚಾರ ಮಾಡುತ್ತಿದೆ ಎಂದು ಕಿಡಿಕಾರಿದರು.

## ರಚನೆ ಮೇಲೆ ದೊಡ್ಡ ಹೊಡೆತ: ಮಲ್ಲಿಕಾರ್ಜುನ ಖರ್ಗೆ

ಹಣದುಬ್ಬರದಿಂದಾಗಿ, ಸಾರ್ವಜನಿಕ ಉಳಿತಾಯವು 50 ವರ್ಷಗಳಲ್ಲಿ ಅತ್ಯಂತ ಕಡಿಮೆಯಾಗಿದೆ ಮತ್ತು ಆರ್ಥಿಕ ಅಸಮಾನತೆಯು 100 ವರ್ಷಗಳಲ್ಲಿಯೇ ಅತ್ಯಧಿಕವಾಗಿದೆ' ಎಂದು ಅವರು ಹೇಳಿದರು.

'ನೋಟು ಅಮಾನ್ಯೀಕರಣ, ಜಿಎಸ್‌ಟಿ, ಯೋಜಿತವಲ್ಲದ ಲಾಕ್‌ಡೌನ್ ಮತ್ತು ಅಸಂಘಟಿತ ವಲಯದ ಮೇಲೆ ಹೇರಿದ ಹೊಡೆತಗಳು ಕೋಟ್ಯಂತರ ಜನರ ಭವಿಷ್ಯವನ್ನು ಹಾಳು ಮಾಡಿವೆ. ಮೇಕ್ ಇನ್ ಇಂಡಿಯಾ, ಸ್ಟಾರ್ಟಪ್ ಇಂಡಿಯಾ, ಸ್ಟ್ಯಾಂಡ್ ಅಪ್ ಇಂಡಿಯಾ, ಡಿಜಿಟಲ್ ಇಂಡಿಯಾ, ನಮಾಮಿ ಗಂಗೆ ಮತ್ತು 100 ಸ್ಮಾರ್ಟ್ ಸಿಟಿಗಳಂತಹ ಕಾರ್ಯಕ್ರಮಗಳು ವಿಫಲವಾಗಿವೆ' ಎಂದು ಅವರು ಆರೋಪಿಸಿದರು.

'ರೈಲ್ವೆಗಳು ಹಾಳಾಗಿವೆ. ಕಾಂಗ್ರೆಸ್–ಯುಪಿಎ ಅವಧಿಯಲ್ಲಿ ನಿರ್ಮಿಸಲಾದ ಅಥವಾ ಯೋಜಿಸಲಾದ ಮೂಲಸೌಕರ್ಯ ಯೋಜನೆಗಳನ್ನು ಮಾತ್ರ ಉದ್ಘಾಟಿಸಿದೆ. ಸಂವಿಧಾನದ ಪ್ರತಿಯೊಂದು ಪುಟದ ಮೇಲೆ ಸರ್ವಾಧಿಕಾರದ ಶಾಯಿಯನ್ನು ಬಳಿಯುವಲ್ಲಿಯೇ ಮೋದಿ ಸರ್ಕಾರ ಕಳೆದ 11 ವರ್ಷಗಳನ್ನು ವ್ಯರ್ಥ ಮಾಡಿದೆ' ಎಂದು ಖರ್ಗೆ ಆರೋಪಿಸಿದರು.

# ಶವ ಸುಟ್ಟ ಆರೋಪಿಗಳ ಬಂಧನ

ಸಂಪೂರ್ಣ ಸುಟ್ಟು ಹಾಕಿದ್ದರಿಂದ ಕೊಲೆಯಾದ ಮಹಿಳೆ ಯಾರು ಎಂಬುವುದು ಗುರುತಿಸುವುದು ಕಷ್ಟವಾಗಿತ್ತು. ಕೊನೆಗೆ ಮಹಿಳೆ ಹೆಸರು ಪತ್ತೆ ಹಚ್ಚಲಾಗಿದ್ದು, ಕೊಲೆಯಾದ ಮಹಿಳೆಯನ್ನು ವಿಜಯಪುರ ಜಿಲ್ಲೆಯ ಸಿಂದಗಿ ತಾಲ್ಲೂಕಿನ ಗಣಿಯಾರ ತಾಂಡಾದ ದೇವಿಬಾಯಿ ಗಂಡ ಲಾಲಸಿಂಗ್ ಜಾಧವ್ (42) ಎಂದು ಗುರುತಿಸಲಾಗಿದೆ ಎಂದರು.

ದೇವಿಬಾಯಿ ಜೊತೆಗೆ ಸಹ ಜೀವನ ನಡೆಸುತ್ತಿದ್ದ ಅದೇ ಗ್ರಾಮದ ಸೋಮಲು ಪವಾರ ಮತ್ತು ಹಾಮು ಅಲಿಯಾಸ್ ಪಪ್ಪು ರಾಠೋಡ್ ಕೂಡಿ ಕೊಲೆ ಮಾಡಿ ಸುಮಾರು 11 ಗಂಟೆಗಳ ಕಾಲ ಶವನನ್ನು ಕಾರಿನಲ್ಲಿ ಇಟ್ಟುಕೊಂಡು ಸುತ್ತಾಡಿ ಯಾವುದಾದರು ನದಿಯಲ್ಲಿ ಹಾಕಬೇಕೆಂದು ಬೇರೆ ಬೇರೆ ಸ್ಥಳಗಳಲ್ಲಿ ತಿರುಗಾಡಿ ಕೊನೆಗೆ ಲಾಡ್ಲಾಪುರ ರಸ್ತೆಯಲ್ಲಿರುವ ಜಮೀನಿನಲ್ಲಿ ಪೆಟ್ರೋಲ್ ಹಾಕಿ ಗುರುತು ಸಿಗದಂತೆ ಮಹಿಳೆ ಶವವನ್ನು ಸುಟ್ಟು ಹಾಕಿದ್ದರು ಎಂದು ವಿವರಿಸಿದರು.

ಕೊಲೆ ರಹಸ್ಯವನ್ನು ಬೇಧಿಸಿ ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸುವಲ್ಲಿ ಯಶಸ್ವಿಯಾಗಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ಅವರು ಶ್ಲಾಘಿಸಿದರು.

ಸುದ್ದಿಗೋಷ್ಠಿಯಲ್ಲಿ ಹೆಚ್ಚುವರಿ ಎಸ್‌ಪಿ ಮಹೇಶ ಮೇಘಣ್ಣನವರ, ಶಹಾಬಾದ ಡಿಎಸ್‌ಪಿ ಶಂಕರಗೌಡ ಪಾಟೀಲ,ಚಿತ್ತಾಪುರ ಸಿಪಿಐ ಚಂದ್ರಶೇಖರ ತಿಗಡಿ, ವಾಡಿ ಪಿಎಸ್‌ಐ ತಿರುಮಲೇಶ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ಅಪರಾಧ ಪ್ರಕರಣ ಬೇಧಿಸಿದ ಸಿಬ್ಬಂದಿಯ ಕಾರ್ಯವನ್ನು ಎಸ್.ಪಿ ಅಡ್ಡೂರು ಶ್ರೀನಿವಾಸಲು ಪ್ರಶಂಸಿಸಿದ್ದಾರೆ.

# ಹಿಂದೆ: ಪ್ರೊ. ಎಂ. ಗೋವಿಂದರಾವ್

40ರಷ್ಟು ಅನುದಾನ ಕಲ್ಯಾಣ ಕರ್ನಾಟಕದ ಹಿಂದುಳಿದ ತಾಲ್ಲೂಕುಗಳಿಗೆ, ಶೇ 25ರಷ್ಟು ಬೆಂಗಳೂರು ವಿಭಾಗದ ತಾಲ್ಲೂಕುಗಳು, ಶೇ 20ರಷ್ಟು ಬೆಳಗಾವಿ, ಶೇ 15ರಷ್ಟು ಮೈಸೂರು ವಿಭಾಗಕ್ಕೆ ಹಂಚಿಕೆ ಮಾಡಬೇಕಿದೆ ಎಂದರು.

2011ರ ನಂತರ ದೇಶದಲ್ಲಿ ಜನಗಣತಿ ನಡೆದಿಲ್ಲ. ಆರೋಗ್ಯ ಇಲಾಖೆ ಸೇರಿದಂತೆ ಇತರೆ ಅಧಿಕೃತ ಅಂಕಿ ಅಂಶಗಳನ್ನು ಆಧರಿಸಿ ವಿಶ್ಲೇಷಿಸಿ ವರದಿ ಸಿದ್ಧಪಡಿಸಲಾಗುತ್ತಿದೆ. ರಾಜ್ಯದ ಎಲ್ಲ ಜಿಲ್ಲೆಗಳು ಅಭಿವೃದ್ಧಿ ಹೊಂದಿಲ್ಲ. ಉದಾಹರಣೆಗೆ ಮಂಗಳೂರಿನ ಸುಳ್ಯ ತಾಲ್ಲೂಕಿನ ಪರಿಸ್ಥಿತಿ ಬಹಳ ಕೆಟ್ಟದಾಗಿದೆ. ಇನ್ನು, ಚಾಮರಾಜನಗರದ ಕೊಳ್ಳೇಗಾಲದಲ್ಲೂ ಸಾಕಷ್ಟು ಸಮಸ್ಯೆಗಳಿವೆ. ಸೇವಾ ಕ್ಷೇತ್ರ, ಶಿಕ್ಷಣ ಮತ್ತು ಶಿಕ್ಷಣ ಕ್ಷೇತ್ರದಲ್ಲಿನ ಸುಧಾರಣೆಗೆ ಏನೇನು ಮಾಡಬಹುದು ಎಂಬುದರ ಬಗ್ಗೆ ಮಾಹಿತಿ ಕಲೆ ಹಾಕಿ ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕವು ಶಿಕ್ಷಣ, ಆರೋಗ್ಯ ಕ್ಷೇತ್ರದಲ್ಲಿ ಬಹಳ ಹಿಂದುಳಿದಿದೆ. ಸಂಪರ್ಕ ವ್ಯವಸ್ಥೆ ಬಲಪಡಿಸುವುದು ಸೇರಿದಂತೆ ಪ್ರತಿಯೊಂದರಲ್ಲೂ ಹಿಂದುಳಿದ ತಾಲ್ಲೂಕುಗಳು ಪ್ರಗತಿ ಕಾಣಬೇಕೆಂಬುದು ಸರ್ಕಾರದ ಆಶಯವಾಗಿದೆ. ಆದಕಾರಣ ಆಯಾ ಜಿಲ್ಲೆಗಳಿಗೆ ಹೋಗಿ, ಸ್ಥಳೀಯ ಜನಪ್ರತಿನಿಧಿಗಳು, ಅಧಿಕಾರಿಗಳಿಂದ ಮಾಹಿತಿ ಸಂಗ್ರಹಿಸಲಾಗುತ್ತಿದೆ ಎಂದರು.

ಪರಿಸರ, ಅರಣ್ಯ ಖಾತೆ ಸಚಿವ ಈಶ್ವರ ಬಿ. ಖಂಡ್ರೆ ಮಾತನಾಡಿ, ನಮ್ಮ ಭಾಗ ಕೂಡ ಅಭಿವೃದ್ಧಿ ಆಗುತ್ತಿದೆ. ಅದಕ್ಕೆ ವೇಗ ಸಿಗಬೇಕಾದರೆ ಏನೇನು ಮಾಡಬೇಕು ಎನ್ನುವುದರ ಬಗ್ಗೆ ಸಮಿತಿಯ ಗಮನಕ್ಕೆ ತಂದಿದ್ದೇನೆ. ಈ ಭಾಗದಲ್ಲಿ 20 ಸಾವಿರ ಖಾಲಿ ಹುದ್ದೆಗಳಿದ್ದು, ಅವುಗಳನ್ನು ಭರ್ತಿ ಮಾಡಬೇಕು ಎಂದರು.

ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ದೊಡ್ಡ ಸುಧಾರಣೆ ಆಗಬೇಕಿದೆ. ಕ್ಯಾಥ್‌ಲ್ಯಾಬ್ ಆರಂಭಗೊಂಡಿದೆ. ಆದರೆ, ಅದಕ್ಕೆ ತಜ್ಞ ವೈದ್ಯರು, ಟೆಕ್ನಿಶಿಯನ್‌ಗಳು ಬೇಕು. ನಿರುದ್ಯೋಗ ಸಮಸ್ಯೆ ಕೂಡ ದೊಡ್ಡ ಮಟ್ಟದಲ್ಲಿದ್ದು, ಯುವಕರಿಗೆ ಕೌಶಲ ತರಬೇತಿ ಕೊಡಬೇಕು. ಐಟಿಐಗಳನ್ನು ಬಲವರ್ಧನೆಗೊಳಿಸಬೇಕು. ಹೂಡಿಕೆದಾರರು ಕೈಗಾರಿಕೆ ಆರಂಭಿಸಲು ವಿಶೇಷ ಪ್ರೋತ್ಸಾಹ ಕೊಡಲು ಕೇಳಿಕೊಂಡಿದ್ದೇನೆ ಎಂದು ತಿಳಿಸಿದರು.

ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ರಹೀಂ ಖಾನ್, ಸಮಿತಿ ಸದಸ್ಯ ಕಾರ್ಯದರ್ಶಿ ವಿಶಾಲ್ ಆರ್., ಸಂಗೀತಾ ಕಟ್ಟಿಮನಿ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ಬದೋಲೆ, ಉಪ ಅರಣ್ಯ ಸಂರಕ್ಷಣಾಧಿಕಾರಿ ವಾನತಿ ಎಮ್.ಎಮ್. ಹಾಜರಿದ್ದರು.

## ಸುವರ್ಣಾಕ್ಷರ'ಗಳಲ್ಲಿ ಬರೆದಿಡುವಂತಹದ್ದು: ಜೆಪಿ ನಡ್ಡಾ

ಬೇಜವಾಬ್ದಾರಿ ವಿರೋಧ ಪಕ್ಷದ ಪಾತ್ರವನ್ನು ನಿರ್ವಹಿಸುತ್ತಿದ್ದಾರೆ. ದೇವರು ಅವರಿಗೆ ಬುದ್ಧಿವಂತಿಕೆಯನ್ನು ನೀಡಲಿ ಎಂದು ಹೇಳಿದರು. ಸರ್ಕಾರದ ಸ್ಥಿರತೆಯ ಪ್ರಶ್ನೆಗೆ, ಎನ್‌ಡಿಎ ಸರ್ಕಾರ ಈ ಅವಧಿಯ ಜೊತೆಗೆ ಮುಂದಿನ ಅವಧಿಯನ್ನೂ ಪೂರ್ಣಗೊಳಿಸುತ್ತದೆ ಎಂದು ನಡ್ಡಾ ಹೇಳಿದರು.

## ಅಖಿಲ ಭಾರತ 11ನೇ ದಲಿತ ಸಮ್ಮೇಳನಾಧ್ಯಕ್ಷರಾಗಿ

# ಡಾ.ಜಯದೇವಿ ಗಾಯಕವಾಡ ಆಯ್ಕೆ

ಕಲಬುರಗಿ:ಜೂ.9: ಡಾ.ಜಯದೇವಿ ಗಾಯಕವಾಡ ಅವರು ಮೂಲತಃ ಬೀದರ ಜಿಲ್ಲೆಯ ರಾಜೇಶ್ವರದವ ರು. ಎಂ.ಎ.,ಎಂಫಿಲ್., ಬಿಇಡಿ ರಾಜೇಶ್ವರದವರು.ಎಂ.ಎ.,ಎಂಫಿಲ್., ಬಿಇಡಿ ರಾಜೇಶ್ವರದವರು. ಎಂ.ಎ.,ಎಂಫಿಲ್., ಬಿಇಡಿ.,ಪಿಎಚ್.ಡಿ.ಪದವೀಧರರು. ಚಿಟಗುಪ್ಪ–ಹುಮನಾಬಾದನಲ್ಲಿ ಸೇವೆ ಸಲ್ಲಿಸಿ ಇಂದು ಯಾದಗಿರಿ ಸರಕಾರಿ ಪದವಿ ಮಹಾವಿದ್ಯಾಲಯದಲ್ಲಿ ಸಹ ಪ್ರಾಧ್ಯಾಪ ಕರಾಗಿ,ಕನ್ನಡ ವಿಭಾಗದ ಮುಖ್ಯಸ್ಥರಾಗಿ ಸೇವೆ ಸಲ್ಲಿಸುತ್ತಿ ದ್ದಾರೆ.

ಇವರು ಉತ್ತಮ ಭಾಷಣಕಾರ್ತಿ. ಕವಯಿತ್ರಿಯಾಗಿ ಕಾವ್ಯ,ಗಜಲ್,ಹಾಯಿಕು,ತಾಂಕಾ,ಆಧುನಿಕ ವಚನ,ರುಬಾಯಿಗ ಳಂತಹ ಪ್ರಯೋಗ ಮಾಡಿದವರು.

## 3 ತಿಂಗಳಲ್ಲಿ ಸರಕಾರಕ್ಕೆ ಪ್ರಾದೇಶಿಕ ಅಸಮತೋಲನ ವರದಿ ಸಲ್ಲಿಕೆ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.9: ರಾಜ್ಯದ ಎಲ್ಲ ಜಿಲ್ಲೆಗಳಲ್ಲಿನ ಶಿಕ್ಷಣ, ಆರೋಗ್ಯ, ತಲಾ ಆದಾಯ, ಕೃಷಿ,ಹೈನುಗಾರಿಕೆ,ಕೈಗಾರಿಕೆ, ಸೇವಾ ಕ್ಷೇತ್ರ ಹಾಗೂ ಸಾಮಾಜಿಕ ವಲಯಗಳ ಒಟ್ಟು 45 ಮಾನದಂಡಗಳ ಆಧಾರದ ಮೇಲೆ ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗೆ ಅಗತ್ಯವಿರುವ ಸೌಲಭ್ಯಗಳನ್ನು ಒದಗಿಸಲು ರಾಜ್ಯಾದ್ಯಂತ ಅಧ್ಯಯನ ಕೈಗೊಂಡಿರುವ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಮೂರು ತಿಂಗಳಲ್ಲಿ ಸರಕಾರಕ್ಕೆ ತನ್ನ ವರದಿಯನ್ನು ಸಲ್ಲಿಸಲಿದೆಯೆಂದು ಸಮಿತಿಯ ಅಧ್ಯಕ್ಷರಾದ ಪ್ರೊ. ಗೋವಿಂದರಾವ್ ಇಂದಿಲ್ಲಿ ತಿಳಿಸಿದರು.

ಬೀದರ ಜಿಲ್ಲಾ ಪಂಚಾಯತನಲ್ಲಿಂದು ಈ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬೀದರ ಸೇರಿ ಈಗಾಗಲೇ 28 ಜಿಲ್ಲೆಗಳಲ್ಲಿ ಅಧ್ಯಯನ ಪೂರ್ಣಗೊಂಡಿದೆ. ಡಾ.ಡಿ.ಎಂ. ನಂಜುಂಡಪ್ಪ ವರದಿ ಅನುಷ್ಠಾನದಲ್ಲಿ ಆದ ಅಭಿವೃದ್ಧಿ ಹಾಗೂ ಬದಲಾವಣೆಗಳ ಹಿನ್ನೆಲೆಯಲ್ಲಿ ಅಧ್ಯಯನ ಮಾಡಿ ಅದಕ್ಕೆ ಪೂರಕವಾಗಿ ಅಸಮತೋಲನ ನಿವಾರಣೆಗೆ ಅಗತ್ಯವಿರುವ ಅಂಶಗಳ ವರದಿಯನ್ನು ಸರಕಾರಕ್ಕೆ ಶಿಫಾರಸ್ಸು ಮಾಡಲಾಗುವುದೆಂದು ಅವರು ತಿಳಿಸಿದರು. ರಾಜ್ಯದಲ್ಲಿ 153 ಹಿಂದುಳಿದ ತಾಲ್ಲೂಕುಗಳಿವೆ. ನೀರಾವರಿ, ಮೂಲಸೌಕರ್ಯ, ಕೈಗಾರಿಕೆ, ತಲಾ ಆದಾಯ, ಉದ್ಯೋಗ, ಕೃಷಿ ಮುಂತಾದ ಐದು ಪ್ರಮುಖ ವಲಯಗಳನ್ನು ಗುರುತಿಸಿ ವಾಸ್ತವಾಂಶ ಆಧರಿಸಿ ವರದಿ ಸಿದ್ಧಪಡಿಸಲಾಗುದೆಂದರು. ಉದ್ಯೋಗಾವಕಾಶಗಳ ಸೃಷ್ಠಿ, ಉತ್ತಮ ಶಿಕ್ಷಣ, ಕೌಶಲ್ಯ ಅಭಿವೃದ್ಧಿ, ಮಹಿಳಾ ಆಧಾರಿತ ಘಟಕಗಳು, ತಂತ್ರಜ್ಞಾನ, ಕೈಗಾರಿಕೆಗಳ ಸ್ಥಾಪನೆಯಂತಹ ಸಲಹೆಗಳು, ಇಂದು ಜನಪ್ರತಿನಿಧಿಗಳಿಂದ ಹಾಗೂ ತಜ್ಞರಿಂದ ಬಂದಿವೆಂದರು. ರಾಜ್ಯದ ಹಿಂದುಳಿದ ಪ್ರದೇಶಗಳ ಅಭಿವೃದ್ಧಿಗೆ 2007 ರಿಂದ 2023 ರವರೆಗೆ 43456 ಕೋಟಿ ಶಿಫಾರಸ್ಸು ಮಾಡಲಾಗಿತ್ತು. ಅದರಲ್ಲಿ 35380 ಕೋಟಿ ಬಿಡುಗಡೆ ಆಗಿ 32610 ಕೋಟಿ ಖರ್ಚಾಗಿದೆ ಎಂದರು. ರಾಜ್ಯದ ನಾಲ್ಕು ವಿಭಾಗಗಳ ಪೈಕಿ ಕಲ್ಯಾಣ ಕರ್ನಾಟಕದಲ್ಲಿ ಹೆಚ್ಚು ಹಿಂದುಳಿದ ಪ್ರದೇಶಗಳಿವೆ. ತಾಲ್ಲೂಕಾ ಮಟ್ಟದಲ್ಲಿ ಹೋಗಿ ಅಧ್ಯಯನ ಮಾಡಿ ಸರಕಾರಕ್ಕೆ ವರದಿ ಸಲ್ಲಿಸಲಾಗುವುದೆಂದರು. ರಾಜ್ಯದ ಕಿರೀಟಪ್ರಾಯವಾಗಿರುವ ಬೀದರ ಜಿಲ್ಲೆಯಲ್ಲಿ 4 ಅತ್ಯಂತ ಹಿಂದುಳಿದ ತಾಲ್ಲೂಕುಗಳಿವೆ. 2014–15ರ ಜಿಲ್ಲಾ ಮಾನವ ಅಭಿವೃದ್ಧಿ ವರದಿಯಂತೆ ಬೀದರ ಜಿಲ್ಲೆಯು ರಾಜ್ಯದಲ್ಲಿ 22ನೇ ಸ್ಥಾನದಲ್ಲಿರುತ್ತದೆ. 2025ನೇ ಅಂಕಿ ಅಂಶಗಳ ಪ್ರಕಾರ ಬೀದರ ಜಿಲ್ಲೆಯ 2022ನೇ ಸಾಲಿನ ಜಿಡಿಡಿಪಿ 2844018.00 ಲಕ್ಷಗಳಾಗಿವೆ ಎಂದರು.

ಬೀದರ ಜಿಲ್ಲೆಯಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಅಭಿವೃದ್ಧಿ, ಸಂಪರ್ಕ ಸುಧಾರಣೆ, ಕೌಶಲ್ಯ ಅಭಿವೃದ್ಧಿ, ಶಿಕ್ಷಕರ ಭರ್ತಿ ಹಾಗೂ ತರಬೇತಿ, ಉನ್ನತ ಹಾಗೂ ತಂತ್ರಜ್ಞಾನ ಆಧಾರಿತ ಶಿಕ್ಷಣ, ಪ್ರವಾಸೋದ್ಯಮ ಅಭಿವೃದ್ಧಿ, ವಲಸೆ, ಕೃಷಿ ತೋಟಗಾರಿಕೆ ಆಧಾರಿತ ಕೈಗಾರಿಕೆಗಳು ಮುಂತಾದ ಸಲಹೆಗಲನ್ನು ಸಮಿತಿಯು ಆಲಿಸಿತು.

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮಾತನಾಡಿ, ರಾಜ್ಯ ಸರ್ಕಾರ 2024 ರಲ್ಲಿ ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ ಆರ್ಥಿಕ ತಜ್ಞರನ್ನೊಳಗೊಂಡ ಸಮಿತಿ ರಚಿಸಿದ್ದು, ಈ ಸಮಿತಿಯು ಕೃಷಿ, ಕೈಗಾರಿಕೆ, ಆರ್ಥಿಕ ಮೂಲ ಸೌಲಭ್ಯ, ಸಾಮಾಜಿಕ ಸೌಲಭ್ಯ, ಹಣಕಾಸಿನ ಮತ್ತು ತಾಂತ್ರಿಕ ಮೂಲ ಸೌಲಭ್ಯ ಮುಂತಾದ ವಲಯಗಳ ಅಭಿವೃದ್ಧಿಯನ್ನು ಗುರುತಿಸಿ ಸೂಚ್ಯಂಕ ನಿಗದಿಪಡಿಸಲಿದೆ. ಸಮಿತಿಯು 3 ತಿಂಗಳಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸುತ್ತದೆ ಎಂದರು.ತಲಾ ಆದಾಯ ಒಂದೇ ಸೂಚ್ಯಂಕ ಆಗಬಾರದು ವಾಸ್ತವಾಂಶದ ಆಧಾರದ ಮೇಲೆ ಅಧ್ಯಾಯನದ ವರದಿ ನಡೆಸುವಂತೆ ಸಲಹೆ ನೀಡಿದರು. ಹೋಬಳಿವಾರು, ತಾಲೂಕಾವಾರು ನೀರಾವರಿ, ಕೃಷಿ, ಉದ್ಯೋಗ ಸಮಸ್ಯೆ, ಶಿಕ್ಷಣ ಸಮಸ್ಯೆ ಅಪೌಷ್ಟಿಕತೆ ಸಮಸ್ಯೆ, ವಲಸೆ ಸಮಸ್ಯೆ ಸಹ ಅಧ್ಯಾಯನ ಮಾಡುವಂತೆ ತಿಳಿಸಿದರು. ಪ್ರಾಥಮಿಕ, ಪ್ರೌಢ, ಪದವಿ ಶಿಕ್ಷಣ ಸುಧಾರಣೆ ಮಾಡುವ ಜೋತೆಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕೆಂದರು. ನಮ್ಮ ಸರ್ಕಾರ ಬಂದ ಮೇಲೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಗೆ 5000 ಕೋಟಿ ನೀಡಿದ್ದವೆ ಹಾಗೂ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ 15 ಸಾವಿರ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ

# ಗುಣಮಟ್ಟದ ಬಿತ್ತನೆ ಬೀಜ ಸರಬರಾಜು ಮಾಡುವಂತೆ ಡಾ.ಸಿಂಧೆ ಮನವಿ

ಮಲ್ಲಮ್ಮ ನುಡಿ ವಾರ್ತೆ ಔರಾದ: ಜೂ.9:ಡಾ.ಸಿಂಧೆ ಭೀಮಸೇನ್ ರಾವ್ ಅವರು ಸೋಮವಾರ ರಾಜ್ಯ ಕೃಷಿ ಸಚಿವರಾದ ಎನ್. ಚೆಲುವರಾಯಸ್ವಾಮಿ ಅವರಿಗೆ ಭೇಟಿ ಮಾಡಿ ಔರಾದ ಮತ್ತು ಕಮಲನಗರ ತಾಲ್ಲೂಕುಗಳ ರೈತರಿಗೆ ಅಗತ್ಯವಿರುವಷ್ಟು ಪ್ರಮಾಣದಲ್ಲಿ ಗುಣಮಟ್ಟದ ಸೋಯಾಬೀನ್ ಬಿತ್ತನೆ ಬೀಜಗಳನ್ನು ಸರಬರಾಜು ಮಾಡುವಂತೆ ಮನವಿ ಪತ್ರ ಸಲ್ಲಿಸಿದರು.

ರಾಜ್ಯಾದಾದ್ಯಂತ ಮುಂಗಾರು ಮಳೆ ಪ್ರಾರಂಭವಾಗಿದ್ದು, ಬೀದರ್ ಜಿಲ್ಲೆಯ ಔರಾದ (ಬಿ) ಮತ್ತು ಕಮಲನಗರ ತಾಲ್ಲೂಕುಗಳಲ್ಲಿ ರೈತರು ಹೊಲಗಳನ್ನು ಹಸನು ಮಾಡಿಕೊಂಡು ರೈತರ ಪ್ರಮುಖ ಬೆಳೆಯಾದ ಸೋಯಾ ಬೀನ್ ಬಿತ್ತನೆ ಮಾಡಲು ಉತ್ತಮ ಗುಣಮಟ್ಟದ ಸೋಯಬೀನ್ ಬಿತ್ತನೆ ಬೀಜಕ್ಕಾಗಿ ರೈತರು ಕಾಯುತ್ತಿದ್ದಾರೆ.

ರೈತರಿಗೆ ಬಿತ್ತನೆಗೆ ಅಗತ್ಯವಿರುವಷ್ಟು ಪ್ರಮಾಣದಲ್ಲಿ ಕೃಷಿ ಇಲಾಖೆಯಿಂದ ತ್ವರಿತವಾಗಿ ಹಾಗೂ ಸಮರ್ಪಕ ಪ್ರಮಾಣದಲ್ಲಿ ಉತ್ತಮ ಗುಣಮಟ್ಟದ ಸೋಯಾ ಬೀಜದ ಲಭ್ಯತೆ ಅವಶ್ಯಕವಾಗಿರುತ್ತದೆ. ಆದರೆ ಪ್ರಸ್ತುತ ಈ ಭಾಗದಲ್ಲಿ ಹಲವಾರು ರೈತರು ಬೀಜದ ಕೊರತೆಯಿಂದ ತೀವ್ರ ಸಮಸ್ಯೆ ಎದುರಿಸುತ್ತಿದ್ದಾರೆ.ಆದುದರಿಂದ ಕೃಷಿ ಇಲಾಖೆಯ ಮೂಲಕ ಶಾಶ್ವತವಾಗಿ ಮತ್ತು ಸಾಕಷ್ಟು ಪ್ರಮಾಣದಲ್ಲಿ ಸೋಯಾ ಬೀಜಗಳನ್ನ, ಸರಕಾರದಿಂದ ಅನುಮೋದಿತ, ಪ್ರಮಾಣಿತ ಹಾಗೂ ತಪಾಸಣೆಯಾದ ಬೀಜಗಳನ್ನು, ಸರ್ಕಾರದ ವತಿಯಿಂದ ಸೂಕ್ತ ಸಬ್ಸಿಡಿ ವ್ಯವಸ್ಥೆಯನ್ನು ಜಾರಿಗೊಳಿಸಿ, ರೋಗನಿರೋಧಕ ಕ್ರಮ, ಹಾಗೂ ಜೈವಿಕ ಪದ್ಧತಿಗಳ ಬಗ್ಗೆ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರೊಂದಿಗೆ ರೈತರಿಗೆ ಅಗತ್ಯವಿರುವಷ್ಟು ಉತ್ತಮ ಗುಣಮಟ್ಟದ ಸೋಯಾ ಬೀನ್ ಬಿತ್ತನೆ ಬೀಜಗಳನ್ನು ಸರಬಾಜು ಮಾಡಿದಲ್ಲಿ ರೈತರು ಸಮಯಕ್ಕೆ ತಕ್ಕಂತೆ ಬೆಳೆ ಬಿತ್ತಲು ಸಾಧ್ಯವಾಗುತ್ತದೆ. ಇದರಿಂದಾಗಿ ರೈತರ ಆದಾಯವನ್ನೂ ಹೆಚ್ಚಿಸುತ್ತದೆ ಮತ್ತು "ರೈತರ ಬಾಳಿಗೆ ಬೆಳಕು" ಎಂಬ ದೃಷ್ಟಿ ಕೋನವನ್ನು ಪೂರೈಸುವಲ್ಲಿ ಸಹಕಾರಿಯಾಗುತ್ತದೆ ಎಂದು ಮನವಿ ಪತ್ರದಲ್ಲಿ ಉಲ್ಲೇಖಿಸಿದರು.



# ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

ಬೀದರ, ಜೂ.9: ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದಿಂದ ಬೆಸ್ತ, ಅಂಬಿಗ/ಅಂಬಿ, ಗಂಗಾಮತ, ಕಬ್ಬಲಿಗೆ, ಕೋಲಿ, ಮತ್ತು ಇದರ ಉಪಜಾತಿಗಳ ಅಭಿವೃದ್ಧಿಗಾಗಿ 2025–26ನೇ ಸಾಲಿಗೆ ಅನುಷ್ಠಾನಗೊಳಿಸುತ್ತಿರುವ ಅರಿವು ಶೈಕ್ಷಣಿಕ ಸಾಲ ಯೋಜನೆ, (ಹೊಸದು /ನವೀಕರಣ), ಗಂಗಾ ಕಲ್ಯಾಣ ನೀರಾವರಿ ಯೋಜನೆ, ಸ್ವಯಂ ಉದ್ಯೋಗ ನೇರ ಸಾಲ ಸಹಾಯಧನ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸಹಾಯಧನ/ಸಾಲ ಸೌಲಭ್ಯಕ್ಕಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹರು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್, ಅಟಲ್ ಜಿ, ಜನಸ್ನೇಹಿ ಕೇಂದ್ರ ಮತ್ತು ನಾಗರೀಕ ಸೇವಾ ಕೇಂದ್ರಗಳಲ್ಲಿ ಕೇಂದ್ರಗಳಲ್ಲಿ ಅನ್‌ಲೈನ್‌ನಲ್ಲಿ ಅರ್ಜಿಗಳನ್ನು ದಿನಾಂಕ: 04–07–2025 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ http://ambigaradevelopment.karnataka.gov.in ದಲ್ಲಿ ಅಥವಾ ನಿಗಮದ ದೂರವಾಣಿ ಸಂಖ್ಯೆ 080–22864099 ಗೆ ಸಂಪರ್ಕಿಸುವುದು. ಅಥವಾ ಜಿಲ್ಲಾ ವ್ಯವಸ್ಥಾಪಕರು, ಅ/ಠ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಬೀದರ ಜಿಲ್ಲಾ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಆಧುನಿಕ ಕೋಳಿ ಸಾಕಾಣಿಕೆ ತರಬೇತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಜೂ.9:ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ ಬೀದರ, ಕೇಂದ್ರಗ್ರಂಥಾಲಯ ಹಿಂಭಾಗ ಜನವಾಡ ರಸ್ತೆ, ಬೀದರನಲ್ಲಿ ಎರಡು ದಿವಸ ಆಧುನಿಕ ಕೋಳಿ ಸಾಕಾಣಿಕೆ ತರಬೇತಿಗಾಗಿ(ಜೂ.12 ರಿಂದ 13 ರವರೆಗೆ) ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದ ಮುಖ್ಯ ಪಶುವೈದ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಆಸಕ್ತ ರೈತರು ತರಬೇತಿಗೆ ಹಾಜರಾಗುವ ಸಮಯದಲ್ಲಿ ಆಧಾರಕಾರ್ಡ್ ಪ್ರತಿ ಹಾಗೂ ಇತ್ತೀಚಿನ ಎರಡು ಭಾವಚಿತ್ರ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟಪಂಗಡದವರಾಗಿದ್ದಲ್ಲಿ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು,ಆಸಕ್ತರು ಮುಂಚಿತವಾಗಿ ವಾಟ್ಸ್‌ಮೂಲಕ ತಮ್ಮ ಹೆಸರು ಮತ್ತು ಮೊಬೈಲ ಸಂಖ್ಯೆಯೊಂದಿಗೆ ನೋಂದಾಯಿಸಬೇಕು. 40 ರೈತರಿಗೆ ತರಬೇತಿಗೆ ಅವಕಾಶವಿದ್ದು, ಮೊದಲು ಬಂದವರಿಗೆ ಆದ್ಯತೆ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9902561957 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಇಂದು ಜೇವರ್ಗಿ ತಾಲೂಕು ಪಂಚಾಯತ್ ಸಾಮಾನ್ಯ ಸಭೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.09:ಜೇವರ್ಗಿ ತಾಲೂಕು ಪಂಚಾಯತ್ ಸಾಮಾನ್ಯ ಸಭೆಯು ಕಲಬುರಗಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಜಂಟಿ ನಿರ್ದೇಶಕರು ಹಾಗೂ ಜೇವರ್ಗಿ ತಾಲೂಕು ಪಂಚಾಯತ್ ಆಡಳಿತಾಧಿಕಾರಿಗಳಾದ ಸುರೇಖಾ ಮುನೊಳಿ ಇವರ ಅಧ್ಯಕ್ಷತೆಯಲ್ಲಿ ಇದೇ ಜೂನ್ 10 ರಂದು ಬೆಳಿಗ್ಗೆ 11 ಗಂಟೆಗೆ ಜೇವರ್ಗಿ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಜರುಗಲಿದೆ ಎಂದು ಜೇವರ್ಗಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರಿತವರ ಸಹವಾಸದಿಂದ ಮನಸ್ಸು ಪ್ರಸನ್ನ:ಪ್ರದೀಪ ಗುರೂಜಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,9–ಒಳ್ಳೆಯವರ ಸಹವಾಸ ಮಾಡುವುದರಿಂದ ಬುದ್ಧಿಯ ಜಡತ್ವ ಮರೆಯಾಗಿ ಮನಸ್ಸು ಪ್ರಸನ್ನಗೊಳ್ಳುತ್ತದೆ. ಸತ್ಯದ ಅರ್ಥ ನಮಗಾಗುತ್ತದೆ ಎಂದು ಆಧ್ಯಾತ್ಮಿಕ ಚಿಂತಕ ಪ್ರದೀಪ ಗುರೂಜಿ ಹೇಳಿದರು.

ತಾಲೂಕಿನ ಅಮಲಝರಿ ಗ್ರಾಮದಲ್ಲಿ ಶನಿವಾರ ಬೆನಕಟ್ಟಿಯ ಹೇಮ ವೇಮನ ಸದ್ಬೋಧನ ಪೀಠ ಹಾಗೂ ಸ್ಥಳೀಯ ಹೇಮ ವೇಮ ಸಮೀತಿಯ ಸಹಯೋಗದಲ್ಲಿ ಜರುಗಿದ ಹೇಮರಡ್ಡಿ ಮಲ್ಲಮ್ಮಳ 603 ನೇ ಜಯಂತಿ ಹಾಗೂ ಮನೆ ಮನದಲ್ಲಿ ವೇಮನರ 181 ನೇ ಮಾಸಿಕ ತತ್ವ ಚಿಂತನ ಕಾರ್ಯಕ್ರಮದಲ್ಲಿ ಮಹಾಯೋಗಿ ವೇಮನರ 'ಹಾಲುಗೂಡಿ ನೀರು ಹಾಲಾಗಿ ಬೆಳಗಿತು...,ಎನ್ನುವ ವಚನ ಕುರಿತು ಮಾತನಾಡಿದರು.

ಒಳ್ಳೆಯವರು, ಅರಿತವರು, ಸಾಧು–ಸಜ್ಜನರ ಸಹವಾಸದಿಂದ ಬದುಕು ಸುಂದರವಾಗುತ್ತದೆ. ಕೆಟ್ಟವರ ಸಂಗ ನಮ್ಮನ್ನು ಪ್ರಪಾತಕ್ಕೆ ತಳ್ಳುತ್ತದೆ ಎಂದ ಪ್ರದೀಪ ಗುರೂಜಿ, ಅದಕ್ಕಾಗಿಯೇ ವೇಮನರು ನೀರು ಹಾಲಿನ ಜೊತೆಗೂಡಿ ಅದು ಕೂಡ ಹಾಲಾಗಿ ಬೆಳಗುತ್ತದೆ ಎಂಬ ದೃಷ್ಟಾಂತ ನೀಡಿದ್ದಾರೆ. ಇದನ್ನರಿತು ಮಕ್ಕಳಿಗೆ ಒಳ್ಳೆಯ ಸಂಸ್ಕಾರ ನೀಡಿ ಬೆಳೆಸಬೇಕು ಎಂದರು.

ಅತಿಥಿಗಳಾಗಿದ್ದ ಉಪನ್ಯಾಸಕಿ ಅನಿತಾ ಪಾಟೀಲ ಮಾತನಾಡಿ, ಪ್ರತಿಯೊಬ್ಬ ಮಹಿಳೆ ಹೇಮರಡ್ಡಿ ಮಲ್ಲಮ್ಮಳ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು, ದಾನ–ಧರ್ಮದ ಗುಣಗಳಿಂದ ಪರೋಪಕಾರಿಯಾಗಿ ಆದರ್ಶ ನಾರಿಯಾಗಿ ಬದುಕಬೇಕು. ಅಂದಾಗಲೇ ಹೇಮರಡ್ಡಿ ಮಲ್ಲಮ್ಮಳ ಜಯಂತಿ ಆಚರಣೆ ಅರ್ಥಪೂರ್ಣವಾಗುತ್ತದೆ ಎಂದು ಹೇಳಿದರು.

ನೇತೃತ್ವ ವಹಿಸಿದ್ದ ಸುಜ್ಞಾನ ಕುಟಿರದ ಶರೀಫ ಶಿವಯೋಗಿಗಳು ಹಾಗೂ ರನ್ನ ಬೆಳಗಲಿಯ ಸಿದ್ರಾಮ ಶಿವಯೋಗಿಗಳು ಮಾತನಾಡಿ, ಹೇಮರಡ್ಡಿ ಮಲ್ಲಮ್ಮಳ ಬದುಕು ಹಾಗೂ ಮಹಾಯೋಗಿ ವೇಮನರ ಪದ್ಯಗಳು ಮನುಷ್ಯ ಹೇಗೆ ಬದುಕಬೇಕು ಎಂಬುದನ್ನು ತಿಳಿಸುತ್ತವೆ ಎಂದರು. ನಿವೃತ್ತ ಶಿಕ್ಷಕ ಬಸಯ್ಯ ಹಿರೇಮಠ ಮಾತನಾಡಿದರು.

ಸಾನಿಧ್ಯ ವಹಿಸಿದ್ದ ಜ್ಞಾನ ಮಂಟಪಾನಂದ ಸ್ವಾಮೀಜಿ ಆಶೀರ್ವಚನ ನೀಡಿ, ಹೊಂದಾಣಿಕೆಯ ಬದುಕು, ಸಂತಸದ ಕುಟುಂಬ ನಮ್ಮದಾಗಬೇಕಾದರೆ ಹೇಮರಡ್ಡಿ ಮಲ್ಲಮ್ಮಳ ಚರಿತ್ರೆಯನ್ನು ಎಲ್ಲರೂ ಓದಬೇಕು. ಓದಿ ತಿಳಿದು ಮಕ್ಕಳಿಗೆ ಒಳ್ಳೆಯ ಸಂಸ್ಕಾರ ಕೊಟ್ಟು ಸಂಸ್ಕೃತಿಯನ್ನು ಪರಿಚಯಿಸಬೇಕು ಎಂದು ಹೇಳಿದರು.

ಹೇಮ ವೇಮನ ಸದ್ಬೋಧನ ಪೀಠದ ಕಾರ್ಯದರ್ಶಿ ಟಿ.ಎಚ್.ಸನ್ನಪ್ಪನವರ, ಹನಮಪ್ಪ ಬೆಣ್ಣೂರ, ವಿನಾಯಕ ಪಾಟೀಲ, ಶಂಕರ ಯಡಹಳ್ಳಿ, ರಮೇಶ ಅಣ್ಣಿಗೇರಿ, ಮಾಲತೇಶ ಅಮಾತೆಪ್ಪನವರ, ಗದಿಗೆಪ್ಪ ಅರಕೇರಿ, ಯಮನಪ್ಪ, ರಾಮಚಂದ್ರ ದಾಸಪ್ಪನವರ, ಕೃಷ್ಣಾ ಪಾಟೀಲ ಇದ್ದರು.

ಬೆನಕಟ್ಟಿಯ ಹೇಮರಡ್ಡಿ ಮಲ್ಲಮ್ಮ ಭಜನಾ ತಂಡದವರು ವೇಮನ ವಚನ ಪಠಣ ಮಾಡಿದರು. ಲತಾ ಪಾಟೀಲ ಸ್ವಾಗತಿಸಿದರು. ವೆಂಕಟೇಶ ಕೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಜು ಬಾಗಲವರ ನಿರೂಪಿಸಿದರು. ಡಿ.ಎಂ.ಬೆಣ್ಣೂರ ವಂದಿಸಿದರು.

# ಜನಪದ ಮತ್ತು ಹಳ್ಳಿ ಸಂಸ್ಕೃತಿ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜೂ 9 ನಮ್ಮ ಹಳ್ಳಿಗಾಡಿನ ಪಾರಂಪರಿಕ ಸಂಸ್ಕೃತಿ ಉಳಿಸಿ ಬೆಳೆಸಿಕೊಂಡು ಬರಬೇಕೆಂದು ಪ್ರಾಧ್ಯಾಪಕರಾದ ಡಾ. ಭುವನೇಶ್ವರಿ ಶ್ರೀವಾಸ್ತವ ತಿಳಿಸಿದರು. ಇಲ್ಲಿನ ಅಕ್ಕಮಹಾದೇವಿ ಮಹಿಳಾ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ, ಎನ್‌ಎಸ್‌ಎಸ್ ವಾರ್ಷಿಕ ವಿಶೇಷ ಶಿಬಿರದ ಕಾರ್ಯಕ್ರಮದಲ್ಲಿ, ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು ಯುವಕರು ನಗರದ ಬದುಕಿಗೆ ಹೋಂದಲಾಗದೆ ಮತ್ತೆ ಮರಳಿ ತಮ್ಮ ಊರಿಗೆ ಬರುತ್ತಿರುವ ದೃಶ್ಯ



ಸಾಮಾನ್ಯವಾಗಿದೆ ಎಂದರು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಚಾರ್ಯರಾದ ಮಾಯಾ ಮುರಾಳೆ ವಹಿಸಿದರು. ಎನ್‌ಎಸ್‌ಎಸ್ ಎ ಮತ್ತು ಬಿ ಘಟಕದ ಅಧಿಕಾರಿಗಳಾದ ದಶರಥ ಟಿ. ಹಳ್ಳಿಖೆಡೆ, ಜಗನಾಥ್ ರೆಡ್ಡಿ ಕಲ್ಲೂರೆ ಹಾಗೂ ಸಿಬ್ಬಂದಿ ವರ್ಗದವರು ಸೆರಿದಂತೆ ಅನೇಕರು ಉಪಸ್ಥಿತರಿದ್ದರು, ಕು. ಸಾಕ್ಷಿತಾ. ಡಿ ನಿರೂಪಿಸಿದರು ಕು. ಪ್ರಿಯಾಂಕ ಪಿ ವಂದಿಸಿದರು.




ಬಸವಕಲ್ಯಾಣ :– ಭಾಲ್ಕಿ ತಾಲೂಕಿನ ಭಾತಂಬ್ರಾದ ಜಗದ್ಗುರು ನಿರಂಜನ ಸಂಸ್ಥಾನ ಮಠದ ಪೂಜ್ಯ ಶ್ರೀ ಜಗದ್ಗುರು ಶಿವಯೋಗಿಶ್ವರ ಮಹಾಸ್ವಾಮಿಗಳು ಪತ್ರಕರ್ತರಾದ ಡಿ. ಕೆ. ಪ್ರಹ್ಲಾದ ಯವರಿಗೆ ತಾವು ರಚಿಸಿದ ಗ್ರಂಥ ಗಳನ್ನು ಗೌರವ ಕಾಣಿಕೆಯನ್ನಾಗಿ ನೀಡುತ್ತಿರುವ ದೃಶ್ಯ ಕಾಣಬಹುದು.

# ಅಂತರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಹೆಚ್ಚಿನ ಸಂಖ್ಯೆಯ ಜನರು ಭಾಗಿಯಾಗುವಂತೆ ನೋಡಿಕೊಳ್ಳಿ – ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಅಂತರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಎಲ್ಲರ ಸಹಭಾಗೀತ್ವಬಹುಮುಖ್ಯವಾಗಿದ್ದು, ಸೂಕ್ತ ಪ್ರಚಾರ ಕೈಗೊಂಡು ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಭಾಗಿಯಾಗುವಂತೆ ನೋಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು. ಅವರು ಶುಕ್ರವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸುವ ಕುರಿತಂತೆ ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.



ಜೂನ್ 21ರಂದು ಕೊಪ್ಪಳದ ತಾಲ್ಲೂಕು ಕ್ರೀಡಾಂಗಣದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಏರ್ಪಡಿಸಲಾಗುವುದು. ಅಂದು ಬೆಳಿಗ್ಗೆ 6.30 ಗಂ–ಟೆಗೆ ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ಹಾಗೂ ವಿವಿಧ ಯೋಗ ಸಂಸ್ಥೆಗಳ ಸಹಯೋಗದೊಂದಿಗೆ ಯೋಗಭ್ಯಾಸ ನಡೆಯಲಿದೆ. ಕ್ರೀಡಾಂಗಣದಲ್ಲಿ ವಿದ್ಯಾರ್ಥಿಗಳು, ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಪಾಲ್ಗೊಳ್ಳುವಂತಾಗಲು, ಆಯುಷ್ ಅಧಿಕಾರಿಗಳು, ಶಾಲಾ ಶಿಕ್ಷಣ, ಪದವಿ ಪೂರ್ವ ಶಿಕ್ಷಣ ಮತ್ತು ವಸತಿ ಶಿಕ್ಷಣ ಇಲಾಖೆ ಹಾಗೂ ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಕ್ರಮ ವಹಿಸಬೇಕು. ಯೋಗ ದಿನಾಚರಣೆಗೆ ಆಗಮಿಸುವ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಲಘು ಉಪಹಾರದ ವ್ಯವಸ್ಥೆ ಕೈಗೊಳ್ಳುವಂತೆ ಜಿಲ್ಲಾ ಆಯುಷ್ ಅಧಿಕಾರಿಗೆ ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ ಎಲ್ಲಾ ಇಲಾಖೆಗಳ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ಕಡ್ಡಾಯ ಪಾಲ್ಗೊಳ್ಳಬೇಕು. ಯೋಗಭ್ಯಾಸದ ನಂತರ ಪ್ರಜಾಪಿತ ಬ್ರಹ್ಮಕುಮಾರಿ ಅವರಿಂದ ಧ್ಯಾನದ ಮಹತ್ವ ಕುರಿತು ಉಪನ್ಯಾಸ ಇರಲಿದೆ. ಕಾರ್ಯಕ್ರಮ ಸ್ಥಳದಲ್ಲಿ ಅಗತ್ಯ ಕುಡಿಯುವ ನೀರು ಮತ್ತು ಯೋಗಾಸನಕ್ಕೆ ಸಂಬಂಧಿಸಿದ ಜತೆ ಅಗತ್ಯ ವ್ಯವಸ್ಥೆ ಮಾಡಬೇಕು. ಕಾರ್ಯಕ್ರಮ ದಿನದಂದು ಅಗತ್ಯ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸುವ ಕುರಿತಂತೆ ಪೊಲೀಸ್ ಇಲಾಖೆಗೆ ಪತ್ರಬರೆದು ಕ್ರಮ ಕೈಗೊಳ್ಳಬೇಕು. ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಮಾಧ್ಯಮವರು, ವಕೀಲರು, ಪೊಲೀಸರು ಹಾಗೂ ಮಾಜಿ ಸೈನಿಕರಿಗೆ ಮಾಹಿತಿ ನೀಡಬೇಕು ಎಂದು ಆಯುಷ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲಾ ಆಯುಷ್ ಅಧಿಕಾರಿ ಡಾ. ಪಿ.ಬಿ.ಹಿರೇಗೌಡರ ಅವರು ಮಾತನಾಡಿ, ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಈ ಬಾರಿ "ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ" ಎಂಬ ಘೋಷವಾಕ್ಯದೊಂದಿಗೆ ಆಚರಣೆ ಮಾಡಲಾಗುತ್ತಿದೆ. ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಯೋಗ ದಿನಾಚರಣೆ ನಡೆಸಲು ಎಲ್ಲ ರೀತಿಯ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶ ಪರಶುರಾಂ ಶೆಟ್ಟಪ್ಪನವರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಅಜ್ಜಪ್ಪ ಸೊಗಲದ, ಆಹಾರ ಇಲಾಖೆ ಉಪನಿರ್ದೇಶ ಸೋಮಶೇಖರ ಬಿರಾದಾರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ವಿಠ್ಠಲ್ ಜಾಬಗೌಡರ್, ಶಾಲಾ ಶಿಕ್ಷಣ ಇಲಾಖೆ ಜಿಲ್ಲಾ ದೈಹಿಕ ಶಿಕ್ಷಣ ಪರಿವೀಕ್ಷಕ ಎ.ಬಸವರಾಜ, ಕೊಪ್ಪಳ ಜಿಲ್ಲೆಯ ಆಯುಷ್ ವೈದ್ಯಾಧಿಕಾರಿಗಳಾದ ಡಾ.ಗುರುರಾಜ್ ಉಮಚಗಿ, ಡಾ.ಯಮನಪ್ಪ ಶಿರವಾರ, ಡಾ.ರಾಜಶೇಖರ ನಾರಿನಾಳ, ಡಾ. ಕವಿತಾ ಹೆಚ್.ಎಫ್., ಡಾ.ಶರಣಪ್ಪ ಹೈದ್ರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಆಯುಷ್ ಇಲಾಖೆ ಸಿಬ್ಬಂದಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.



ಹುಮನಾಬಾದ;ಪಟ್ಟಣದ ಕೆಎಸ್‌ಆರ್‌ಟಿಸಿ ಜಿಲ್ಲೆಯಲ್ಲಿಯೇ ಪುರಾತನ ಘಟಕವಾಗಿದೆ. ಈ ಡಿಪೋ ನೂರಾರು ಬಸ್‌ಗಳಿದ್ದು, ಡಿಪೋ ನಿಲ್ದಾಣ ಒಳ ರಸ್ತೆ ರಿಪೇರಿ ಮಾಡದೇ ಇದ್ದುದಕ್ಕಾಗಿ ಮಳೆ ಬಂದಾಗ ನೀರಿನಿಂದ ತೆಗ್ಗುಗುಂಡಿಗಳಲ್ಲಿ ನೀರು ತುಂಬಿತ್ತಿವೆ. ಈ ಘಟಕಕ್ಕೆ ತೆಗ್ಗು ಗುಂಡಿಗಳು ಮುಚ್ಚಲು ಸಾರ್ವಜನಿಕರು ಆಗ್ರಹಿಸಿದ್ದಾರೆ. (ಮಲ್ಲಮ್ಮ ನುಡಿ ಚಿತ್ರ)

# ಸರ್ಕಾರಿ ಪದವಿ ಪೂರ್ವ ಕಾಲೇಜು ಬಾಲಕರ ಪ್ರೌಢ ಶಾಲಾ ವಿಭಾಗ ಪರಿಸರ ದಿನಾಚರಣೆ.

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜೂ 9 ನಗರದಲ್ಲಿ ಅರಣ್ಯ ಇಲಾಖೆ ವತಿಯಿಂದ ಸರ್ಕಾರಿ ಪದವಿ ಪೂರ್ವ ಕಾಲೇಜು ಬಾಲಕರ ಪ್ರೌಢ ಶಾಲಾ ವಿಭಾಗ ಪರಿಸರ ದಿನಾಚರಣೆ ಆಚರಿಸಲಾಯಿತು.

ತಹಸೀಲ್ದಾರರಾದ ಡಾ. ದತ್ತಾತ್ರೇ ಗಾದಾ ಅವರು ಸಸಿ ನೆಡುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಕಾಡು ಬೆಳಸಿ ನಾಡು ಉಳಿಸಿ, ಪ್ಲಾಸ್ಟಿಕ್ ಬಳಕೆ ಸಂಪೂರ್ಣವಾಗಿ ನಿಷೇಧಿಸಬೇಕು ಎಂದು ನುಡಿದರು. .ಅಧ್ಯಕ್ಷತೆ ವಹಿಸಿದ

ಸಾಮಾಜಿಕ ವಲಯ ಅರಣ್ಯಾಧಿಕಾರಿಗಳಾದ ಪ್ರೇಮಶೇಖರ ಮಾತನಾಡಿ ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಡಬೇಕು ಇವತ್ತು ವಾಯು, ಭೂಮಿ ,ಜಲ ಕುಲಷಿತವಾಗುತ್ತಿವೆ. ಪ್ರತಿಯೊಂದು ವಿದ್ಯಾರ್ಥಿ ತಮ್ಮ ಜನ್ಮದಿನದಂದು ಒಂದು ಗಿಡ ನೆಡಬೇಕು ಎಂದರು.

ಅತಿಥಿಗಳಾದ ಹಾಗೂ ಉಪ ಪ್ರಾಂಶುಪಾಲರಾದ ಅನಿತಾ ಸಾವಳ್ಕರ ಮಾತನಾಡಿ ನಮ್ಮ ಬದುಕಿಗೆ ಪರಿಸರ ಅತಿ ಅವಶ್ಯಕವಾಗಿದೆ. ಇವತ್ತು ನಾವು ಶುದ್ಧವಾದ ಗಾಳಿ ತೆಗೆದುಕೊಳ್ಳ ಬೇಕಾದರೆ ಅತೀ



ಹೆಚ್ಚು ಗಿಡಗಳನ್ನು ನೆಡಬೇಕು ಎಂದರು.

ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ರಾಜಕುಮಾರ ಜಾಧವ , ನ್ಯಾಯವಾದಿಗಳಾದ ಜಗದೇವಿ ಚೊಂಡೆ. ಎಪಿಪಿ, ಬಾಲಾಜಿ ಅಡೆಪ್ಪಾ ಎಪಿಪಿ, ಸಿ.ಕೆ ಹಾರಕೂಡೆ, ಪ್ರಶಾಂತ ಉಪ ವಲಯ ಅರಣ್ಯಾಧಿಕಾರಿ, ಗುಂಡೆರಾವ ಉಪ ವಲಯ ಅರಣ್ಯಾಧಿಕಾರಿ ಅರಣ್ಯ ವಲಯ, ಅನೀಲ ಕುಮಾರ ಉಪ ವಲಯ ಪ್ರಾದೇಶಿಕ ಅರಣ್ಯಾಧಿಕಾರಿ, ರಾಜಕುಮಾರ್ ಡಿ.ಆರ್. ಎಫ್. ಒ.ದಯಾನಂದ ಡಿ.ಆರ್. ಎಫ್. ಒ.ಶಿವಕುಮಾರ ಗಸ್ತು ಅರಣ್ಯ ಪಾಲಕರು. ರಾಜೇಂದ್ರ ಟಿಳೆ, ಪ್ರವೀಣ ಬಸಲಿಂಗ, ರಾಮ ಪಾಟೀಲ್, ಪ್ರವೀಣ ಸೂರ್ಯವಂಶಿ, ಸಂಜು ಸೂರ್ಯವಂಶಿ, ಎಂ.ಡಿ.ಶರೀಫ ,ರಫೀಯೊದ್ದಿನ, ಎಂಡಿ ಲತೀಫ್, ಶೋಭಾ ಮಠಪತಿ, ಹಮೀದಾ ಪಠಾಣ, ನಾಜೀಯಾ , ಮಂಗಲಾ, ಮಹಾದೇವ ಅಲ್ದೇಪ್ಪ ,ಸುನೀತಾ ಕುಪ್ಪೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಸಂಜೀವಕುಮಾರ ನಡುಕರ ಸ್ವಾಗತಿಸಿದರು, ಶಿವಕುಮಾರ ಜಡಗೆ ನಿರೂಪಿಸಿದರು ಸುನೀತಾ ಚಿಂಚೋಳಿ ವಂದಿಸಿದರು.

# ಮಾನವನ ಸ್ವಾರ್ಥದಿಂದ ಪರಿಸರಕ್ಕೆ ಹಾನಿ –ಸಚಿವ ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಮಾನವನು ತನ್ನ ಸ್ವಾರ್ಥದಿಂದ ಐಷಾರಾಮಿ ಜೀವನ ನಡೆಸಿ ಪರಿಸರವನ್ನು ವಿಪರಿತವಾಗಿ ನಾಶ ಮಾಡುತ್ತಿದ್ದಾನೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಕಳವಳ ವ್ಯಕ್ತಪಡಿಸಿದರು.

ಪಟ್ಟಣದ ಹೊರವಲಯದಲ್ಲಿ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ವತಿಯಿಂದ ಪ್ರಧಾನ ಮಂತ್ರಿ ಅವಾಸ್ ಯೋಜನೆ ಅಡಿಯಲ್ಲಿ ನಿರ್ಮಾಣಗೊಂಡ ಮನೆಗಳ ಹಕ್ಕು ಪತ್ರ ವಿತರಣೆ, ಅರಣ್ಯ ಇಲಾಖೆ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪರಿಸರ ಹಾನಿಯಿಂದ ಜಗತ್ತಿನಲ್ಲಿ ನಾನಾ ಸಮಸ್ಯೆಗಳು ಉದ್ಭವ ಆಗಿವೆ. ಪ್ರಕೃತಿ ವಿಕೋಪದಿಂದ ಗುಡ್ಡ ಕುಸಿತ, ಪ್ರವಾಹ, ಅತಿವೃಷ್ಟಿ ಅನಾವೃಷ್ಟಿ ಸೇರಿದಂತೆ ಅನೇಕ ಸಮಸ್ಯೆಗಳು ಎದುರಾಗುತ್ತವೆ.

ನಮ್ಮ ಪೂರ್ವಜರು ನೈಸರ್ಗಿಕ ಸಂಪತ್ತನ್ನು ಹಿತಮಿತವಾಗಿ ಬಳಸಿಕೊಳ್ಳುತ್ತಿದ್ದರು. ಆದರೆ ಈಗಿನವರು ನೈಸರ್ಗಿಕ ಸಂಪತ್ತನ್ನು ಅತಿಯಾದ ಉಪಯೋಗಿಸಿ ನಿಸರ್ಗವನ್ನು ಮನಬಂದಂತೆ ಹಾಳು ಮಾಡುತ್ತಿದ್ದಾನೆ ಎಂದು ತಿಳಿಸಿದರು.

ಕೆಮಿಕಲ್ ಕೈಗಾರಿಕೆ, ವಾಹನ ಸಂಖ್ಯೆಗಳಲ್ಲಿ ಹೆಚ್ಚಳದಿಂದಾಗಿ ನೀರು, ಆಹಾರ, ಪರಿಸರದಲ್ಲಿ ಮಾಲಿನ್ಯ ಉಂಟಾಗುತ್ತಿದೆ.

ಏಕೆ ಬಳಕೆ ಪ್ಲಾಸ್ಟಿಕ್ ಮಣ್ಣಲ್ಲಿ ಮಣ್ಣಾಗುವುದಿಲ್ಲ. ನೀರಿನಲ್ಲಿ ಕರಗುವುದಿಲ್ಲ. ಸುಟ್ಟಿದರೆ ಹವಾಮಾನ ಮಲೀನಗೊಳಿಸುತ್ತದೆ. ಹಾಗಾಗಿ, ಏಕೆ ಬಳಕೆ ಪ್ಲಾಸ್ಟಿಕ್‌ನ್ನು ನಿಷೇಧಿಸಿದ್ದೇವೆ ಎಂದು ಹೇಳಿದರು.

ಭೂಭಾಗದ ಸರಾಸರಿ 33 ರಷ್ಟು ಅರಣ್ಯ ಪ್ರದೇಶ ಇರಬೇಕು. ನಮ್ಮ ರಾಜ್ಯದಲ್ಲಿ 21ರಷ್ಟು ಮಾತ್ರ ಅರಣ್ಯ ಪ್ರದೇಶವಿದೆ. ಕಲ್ಯಾಣ ಕರ್ನಾಟಕದಲ್ಲಿ ಹಸಿರು ಹೊದಿಕೆ ತುಂಬಾ ಕಡಿಮೆ ಇದೆ. ಬೀದರ್‌ನಲ್ಲಿ ಕೇವಲ 7ರಷ್ಟು ಹಸಿರು ಪ್ರದೇಶವಿದೆ.

ನಾನು ಸಚಿವನಾದಾಗಿನಿಂದ ಈ ವರ್ಷ ನೆಡುತ್ತಿರುವ 10ಲಕ್ಷ ಸಸಿಗಳು ಸೇರಿದಂತೆ ಸುಮಾರು 43 ಲಕ್ಷ ಸಸಿಗಳನ್ನು ಬೀದರ್ ಜಿಲ್ಲೆಯಲ್ಲಿ ನೆಡಲಾಗಿದೆ. ಪರಿಸರ ಪ್ರಕೃತಿ ಸಂರಕ್ಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಈ ಭೂಮಿಯ ಮೇಲೆ ಜೀವ ಪಡೆದಿರುವ ಎಲ್ಲ ಜೀವಿಗಳಿಗೂ ನಮ್ಮಂತೆ ಬದುಕುವ ಹಕ್ಕು ಇದೆ. ವೃಕ್ಷಗಳನ್ನು ನಾವು ರಕ್ಷಿಸಿದರೆ. ನಮ್ಮನ್ನು ವೃಕ್ಷಗಳು ರಕ್ಷಿಸುತ್ತವೆ ಎಂದು ತಿಳಿಸಿದರು.

ಪಟ್ಟಣದ ವಿವಿಧೆಡೆ, ರಸ್ತೆ ಅಕ್ಕಪಕ್ಕ ಸುಮಾರು ವರ್ಷಗಳಿಂದ ಸೂರಿಲ್ಲದೆ ಬದುಕುತ್ತಿದ್ದ ಜನರಿಗೆ ಸೂರು ಕಲ್ಪಿಸಲು ಕೊಳಚೆ ಅಭಿವೃದ್ಧಿ ಮಂಡಳಿ ವತಿಯಿಂದ ಪ್ರಧಾನ ಮಂತ್ರಿ ಅವಾಸ್ ಯೋಜನೆ ಅಡಿಯಲ್ಲಿ ರಾಜ್ಯ ಸರಕಾರ 5.75 ಲಕ್ಷ ರೂಪಾಯಿ ವೆಚ್ಚದಲ್ಲಿ 400 ಮನೆಗಳನ್ನು ನಿರ್ಮಿಸಲಾಗಿದೆ.

ಅನ್ನ, ವಸ್ತ್ರ, ವಸತಿ ನಾಗರಿಕರಿಗೆ ಕೊಡುವುದು ಸರಕಾರದ ಆದ್ಯ ಕರ್ತವ್ಯ. ನಮ್ಮ ಸರಕಾರ ಈ ಕಾರ್ಯವನ್ನು ಪರಿಪೂರ್ಣವಾಗಿ ಮಾಡುತ್ತಿದೆ.

ನಾನು ಪೌರಾಡಳಿತ ಸಚಿವನಾಗಿದ್ದಾಗ ಸುಮಾರು 25,000 ಮನೆಗಳನ್ನು ತಾಲೂಕಿನ ಅರ್ಹ ಫಲಾನುಭವಿಗಳಿಗೆ ನೀಡಿದ್ದೇನೆ ಎಂದು ತಿಳಿಸಿದರು.

ಸುಮಾರು 70 ಅಲೆಮಾರಿ ಕುಟುಂಬ ಸದಸ್ಯರಿಗೆ ಮನೆಗಳ ಹಕ್ಕುಪತ್ರಗಳನ್ನು ನೋಂದಣಿ ಮಾಡಿಕೊಂಡು ವಿತರಿಸಲಾಯಿತು.

ಈ ಮನೆಗಳನ್ನು 15 ವರ್ಷದವರೆಗೆ ಮತ್ತೊಬ್ಬರಿಗೆ ವರ್ಗಾಯಿಸಲು ಬರುವುದಿಲ್ಲ. ಅಲೆಮಾರಿ ಕುಟುಂಬದವರು ತಮ್ಮ ಮಕ್ಕಳಿಗೆ ಶಾಲೆಗೆ ಕಳಿಸಿ ಉತ್ತಮ ಶಿಕ್ಷಣ ಕೊಡಿಸಬೇಕು. ಭಿಕ್ಷಾಟನೆ ನಿಲ್ಲಿಸಬೇಕು ಎಂದು ತಿಳಿಸಿದರು. ಪರಿಸರವಾದಿ ಶೈಲೇಂದ್ರ ಕಾವಡಿ ವಿದ್ಯಾರ್ಥಿಗಳಿಗೆ ವಿಶ್ವ ಪರಿಸರ ದಿನಾಚರಣೆ ವಿಶೇಷ ಉಪನ್ಯಾಸ ನೀಡಿ ವಿದ್ಯಾರ್ಥಿಗಳು ಕಡ್ಡಾಯವಾಗಿ ಪ್ಲಾಸ್ಟೀಕ್ ನಿಷೇಧಿಸಲು ಮನವಿ ಮಾಡಿದರು. ಪರಿಯೊಬ್ಬರ ಮನೆ ಅಂಗಳದಲ್ಲಿ ತುಳಸಿ ಗಿಡಗಳು ನೆಡಲು ಮನವಿ ಮಾಡಿದರು.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ವಾನತಿ ಎಂ, ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ, ಪುರಸಭೆ ಅಧ್ಯಕ್ಷೆ ಶಶಿಕಲಾ, ಉಪಾಧ್ಯಕ್ಷ ವಿಜಯ ಕುಮಾರ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ, ಪುರಸಭೆ ಮುಖ್ಯಾಧಿಕಾರಿ ಸಂಗಮೇಶ ಕಾರಬಾರಿ, ಡಿವೈಎಸ್ಪಿ ಶಿವಾನಂದ ಪವಾಡಶೆಟ್ಟಿ,

ಗ್ಯಾರಂಟಿ ಸಮಿತಿ ಅಧ್ಯಕ್ಷ ಹಣಮಂತರಾವ್ ಚವ್ಹಾಣ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳಾದ ರಮೇಶ್ ಕಣಕಟ್ಟಿ, ಮುಜೀಬ್, ವಲಯ ಅರಣ್ಯ ಅಧಿಕಾರಿ ಪ್ರವೀಣಕುಮಾರ ಮೋರೆ, ಪ್ರಭುಲಿಂಗ ಭೊಯ್ಯಾರ ಸೇರಿದಂತೆ ಇತರರು ಇದ್ದರು.

# ಇಂದು ಎಸ್ಸಿ ಎಸ್ಟಿ ನೌಕರರ ಸಾಮಾನ್ಯ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಕೆ.ಕೆ.ಆರ್.ಟಿ.ಸಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ನೌಕರರ ಕ್ಷೇಮಾಭಿವೃದ್ಧಿ ಸಂಘ(ರಿ) ಬೀದರ್ ವಿಭಾಗದ ಸೂರ್ಯಕಾಂತ್ ಟೈಗರ್ ರವರ ಅಧ್ಯಕ್ಷತೆಯಲ್ಲಿ ದಿನಾಂಕ 10/06/2025 ರಂದು ಬೆಳಿಗ್ಗೆ 11:30 ಕ್ಕೆ ಹೊಸ ಬಸ್ ನಿಲ್ದಾಣದ ಮುಂಭಾಗದಲ್ಲಿರುವ ವಿಕ್ರಮ ಲಾಡ್ಜ್ 2 ನೇ ಮಹಡಿಯಲ್ಲಿ ಸಾಮಾನ್ಯ ಸಭೆ ಕರೆಯಲಾಗಿದೆ. ಈ ಸಭೆಯಲ್ಲಿ ಸಂಘಟನೆ ಹಿತದೃಷ್ಟಿಯಿಂದ ಪದಾಧಿಕಾರಿಗಳ (ಅವಶ್ಯಕತೆ ಇದ್ದಲ್ಲಿ)ಬದಲಾವಣೆ ಮಾಡುವುದು ನೂತನ ಪದಾಧಿಕಾರಿಗಳು ಆಯ್ಕೆ ಮಾಡುವುದು ಹಾಗೂ ನೌಕರರ ಕುಂದು ಕೊರತೆಗಳ ಸಂಗ್ರಹಣೆ/ಸಮಸ್ಯೆಗಳ ಕುರಿತು ಮತ್ತು ಅಧ್ಯಕ್ಷರ ಅಪ್ಪಣೆ ಮೇರೆಗೆ ಇನ್ನಿತರ ವಿಷಯಗಳ



ಚರ್ಚಿಸಲಾಗುವುದು ಈ ಸಭೆಗೆ ಬೀದರ ವಿಭಾಗದ ಎಲ್ಲಾ ಎಸ್ಸಿ ಎಸ್ಟಿ ನೌಕರರು ಕರ್ತವ್ಯಕ್ಕೆ ಗೈರು ಆಗದೆ ರಜೆ/ಬದಲಿ ರಜೆ ತೆಗೆದು–ಕೊಂಡು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಪ್ರಧಾನ ಕಾರ್ಯದರ್ಶಿ ಪ್ರಕಾಶ್ ಸುಲೇಪೇಟಕರ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಯಚೂರ ಜಿಲ್ಲೆಯಲ್ಲಿ ಭಾರಿ ಮಳೆ ಸಾಧ್ಯತೆಯ ಮುನ್ಸೂಚನೆ:

# ಮುಂಜಾಗ್ರತಾ ಕ್ರಮಕ್ಕೆ ಜಿಲ್ಲಾಧಿಕಾರಿ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 09– ಹವಾಮಾನ ಇಲಾಖೆಯ ವರದಿಯನ್ವಯ ಮೇ 24 ರಂದು ನೈಋತ್ಯ ಮಾನ್ಸೂನ್ ಕೇರಳ ಪ್ರವೇಶಿಸಿದ್ದು, ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಭಾರಿ ಮಳೆ ಹಾಗೂ ಪ್ರವಾಹ ಕುರಿತು ಮುಂಜಾಗೃತಾ ಕ್ರಮ ಕೈಗೊಳ್ಳುವಂತೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಂಬಮನಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲೆಯಲ್ಲಿ ಯಾವುದೇ ಸಂದರ್ಭದಲ್ಲಿ ಭಾರಿ ಮಳೆ ಹಾಗೂ ಪ್ರವಾಹ ಎದುರಾದಲ್ಲಿ ಸಮರ್ಥವಾಗಿ ಎದುರಿಸಲು ಜಿಲ್ಲಾ, ತಾಲೂಕು, ಹೋಬಳಿ ಹಾಗೂ ಗ್ರಾಮ ಪಂಚಾಯತ್ ಮಟ್ಟದ ಅಧಿಕಾರಿಗಳು ಸಿದ್ಧರಿರಬೇಕು. ಜಿಲ್ಲಾ, ತಾಲೂಕು, ಹೋಬಳಿ ಹಾಗೂ ಗ್ರಾಮ ಪಂಚಾಯತ್ ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿಯು ಕೇಂದ್ರ ಸ್ಥಾನದಲ್ಲಿದ್ದು ಪ್ರವಾಹ ಹಾಗೂ ಭಾರಿ ಮಳೆಯಿಂದ ಯಾವುದೇ ಅಹಿತಕರ ಘಟನೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ನದಿ, ಹಳ್ಳ, ಕೆರೆ ದಡದಲ್ಲಿ ಬಟ್ಟೆ ತೊಳಿಯುವುದು, ಈಜಾಡುವುದು, ದನ ಅಥವಾ ಕರುಗಳನ್ನು ಮೆಯಿಸುವುದು ಹಾಗೂ ಅಪಾಯವಿರುವ ಸೇತುವೆಗಳಲ್ಲಿ ಸಂಚರಿಸುವುದು ಮತ್ತು ಇತರೆ ಚಟುವಟಿಕೆ ನಡೆಸದಂತೆ ಕ್ರಮವಹಿಸಬೇಕು.

ನಿರಂತರ ಮಳೆಯಿಂದ ಅಪಾಯವಿರುವ ಮನೆ, ಗೋಡೆ, ಶಾಲೆಗಳು ಹಾಗೂ ಇತರೆ ಕಟ್ಟಡಗಳು ಕುಸಿಯುವ ಸಾಧ್ಯತೆ ಇರುವುದರಿಂದ ಸಾವು ನೋವುಗಳು ಸಂಭವಿಸುವ ಸಂದರ್ಭವಿರುತ್ತದೆ. ಆದ್ದರಿಂದ ಸಾರ್ವಜನಿಕರಿಗೆ ಸುರಕ್ಷತೆ–ಯ ಮುನ್ನೆಚ್ಚರಿಕೆಯ ಕ್ರಮ ತೆಗೆದುಕೊಳ್ಳವುದು ಅಥವಾ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಜಾಗೃತಿ ಮೂಡಿಸುವುದು. ನದಿ ದಡದ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರು ಅಪಾಯವಿರುವ ನದಿ ಅಥವಾ ಹಳ್ಳಗಳಲ್ಲಿ ಈ



ಜಾಡುವುದು ಮತ್ತು ಪೋ–ಟೋ, ಸೆಲ್ಫಿ ತೆಗೆಯದಂತೆ ಕ್ರಮವಹಿಸುವುದು.

ಭಾರಿ ಮಳೆ ಹಾಗೂ ಪ್ರವಾಹದಿಂದ ಯಾವುದೇ ಅಹಿತಕರ ಘಟನೆಯಾಗದಂತೆ ಪ್ರತಿ ಗ್ರಾಮಗಳಲ್ಲಿ ಡಂಗೂರ ಸಾರುವುದು, ಮೈಕ್ ಮೂಲಕ ಜಾಗೃತಿ ಮೂಡಿಸುವುದು. ಭಾರಿ ಮಳೆ ಹಾಗೂ ಪ್ರವಾಹದಿಂದ ಹಾನಿಯಾದ ಬಗ್ಗೆ ಪ್ರಾಥಮಿಕ ವರದಿಯನ್ನು ಪ್ರತಿ ದಿನ ಜಿಲ್ಲಾಡಳಿತಕ್ಕೆ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.

ಸಹಾಯವಾಣಿ: ಮಳೆ ಹಾಗೂ ಪ್ರವಾಹ ಸೇರಿದಂತೆ ಇತರೆ ಸಮಸ್ಯೆಗಳ ತುರ್ತು ಪರಿಹಾರಕ್ಕಾಗಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಸಹಾಯವಾಣಿ ಕೇಂದ್ರಗಳು ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರ:08532–226383 ಅಥವಾ ರಾಯಚೂರು ಜಿಲ್ಲಾಧಿಕಾರಿಗಳ ಕಾರ್ಯಾಲಯ: 1077, ರಾಯಚೂರು ಮಹಾನಗರಪಾಲಿಕೆ: 08532–200551, ರಾಯಚೂರು ತಹಶೀಲ್ದಾರ್ ಕಾರ್ಯಾಲಯ: 08532–200772, ಮಾನವಿ ತಹಶೀಲ್ದಾರ್ ಕಾರ್ಯಾಲಯ: 08538–220239, ಸಿಂಧನೂರು ತಹಶೀಲ್ದಾರ್ ಕಾರ್ಯಾಲಯ: 9035640154, ಲಿಂಗಸೂಗೂರು ತಹಶೀಲ್ದಾರ್ ಕಾರ್ಯಾಲಯ: 08537–275247, ದೇವದುರ್ಗ ತಹಶೀಲ್ದಾರ್ ಕಾರ್ಯಾಲಯ: 08531–200117, ಸಿರವಾರ ತಹಶೀಲ್ದಾರ್ ಕಾರ್ಯಾಲಯ: 08538–200082, ಮಸ್ಕಿ ತಹಶೀಲ್ದಾರ್ ಕಾರ್ಯಾಲಯ: 08537–295504ಗೆ ಸಾರ್ವಜನಿಕರು ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲೋಕಾಯುಕ್ತ ಪೊಲೀಸನಿಂದ ಸಾರ್ವಜನಿಕರ ಕುಂದುಕೊರತೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 09–ಜಿಲ್ಲಾ ಲೋಕಾಯುಕ್ತ ಪೊಲೀಸ್ ಇಲಾಖೆಯಿಂದ ಜೂನ್ 11ರ ಬುಧವಾರ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ಜಿಲ್ಲೆಯ ದೇವದುರ್ಗದ ತಹಶೀಲ್ದಾರ್ ಕಚೇರಿಯಲ್ಲಿ ಸಾರ್ವಜನಿಕರ ಕುಂದು–ಕೊರತೆ ಹಾಗೂ ಅಹವಾಲುಗಳ ಸಭೆ ಆಯೋಜಿಸಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ರಾಯಚೂರು ಕರ್ನಾಟಕ ಲೋಕಾಯುಕ್ತ ಪೋಲೀಸ್ ಅಧೀಕ್ಷಕರಾದ ಸತೀಶ್ ಎಸ್.ಚಿಟಗುಬ್ಬಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜ ವೈದ್ಯರಿಂದ ಸೇವೆ ಜೊತೆಗೆ ಬದ್ಧತೆ ನಿರೀಕ್ಷಿಸುತ್ತದೆ: ಚನ್ನಪ್ಪಗೌಡ



ಮಲ್ಲಮ್ಮನುಡಿವಾರ್ತೆ ಬೀದರ. ಜೂ.09: ವೈದ್ಯರಿಂದ ಸಮಾಜ ಕೇವಲ ಸೇವೆಯನ್ನಷ್ಟೇ ಅಲ್ಲದೆ ಸಂಪೂರ್ಣ ಬದ್ಧತೆಯನ್ನು ನಿರೀಕ್ಷಿಸುತ್ತಿದೆ. ವಿದ್ಯಾರ್ಥಿಗಳು ಕೇವಲ ಪುಸ್ತಕದ ಜ್ಞಾನಕ್ಕೆ ಸೀಮಿತವಾಗದೆ ವೈದ್ಯ ಸಂಪ್ರದಾಯ, ಜನಪದ ವೈದ್ಯಕೀಯ ಹಿನ್ನಲೆ ಹಾಗೂ ಮನುಕುಲ ಬೆಳೆದು ಬಂದ ದಾರಿಯನ್ನತಿಳಿದುಕೊಳ್ಳಬೇಕೆಂದು ಕರ್ನಾಟಕ ಪಶು ಪಶು ವೈದ್ಯಕೀಯ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬೀದರ ಕಾಮಧೇನು ಕನ್ನಡ ಸಂಘದ ಸಂಯೋಜಕರಾದ ಡಾ. ಚನ್ನಪ್ಪಗೌಡ ಬಿರಾದರ ತಿಳಿಸಿದರು.

ಬೀದರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಬೀದರ, ಬ್ರಿಮ್ಸ್ ಕನ್ನಡ ಸಂಘ ಬೀದರ, ಪ್ರತಿಷ್ಠಾನ-2023 ವೈದ್ಯಕೀಯ ವಿದ್ಯಾರ್ಥಿಗಳ ತಂಡದ ಸಹಯೋಗದಲ್ಲಿ ಕನ್ನಡ ಕಲಾಪರ್ವ-2025 ಕಾರ್ಯಕ್ರಮವನ್ನು ಬ್ರಿಮ್ಸ್ ಕಾಲೇಜಿನ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಇಂದು ಆರೋಗ್ಯ ಕ್ಷೇತ್ರ ಪ್ರಮುಖ ಕಾಲ ಘಟ್ಟದಲ್ಲಿದೆ. ಹಲವಾರು ಅನಿರೀಕ್ಷಿತ ಸವಾಲುಗಳು ಆರೋಗ್ಯ ಕ್ಷೇತ್ರದಲ್ಲಿರುವ ವೈದ್ಯರಾದಿಯಾಗಿ ಎಲ್ಲರ ಮುಂದೆಯೂ ಇವೆ. ಅತ್ಯಂತ ವೇಗವಾಗಿ ಹಾಳಾಗುತ್ತಿರುವ ವಾತಾವರಣ, ಜಾತಿ, ಜ್ಞಾನ ಹಾಗೂ ಶ್ರೀಮಂತಿಕೆಯ ತಾರತಮ್ಯ ತಾಂಡವಾಡುತ್ತಿರುವ ಸಮಾಜ, ಅಷ್ಟೇ ಅಲ್ಲದೆ ಯೂಟ್ಯೂಬ್ ಸೇರಿದಂತೆ ಸಾಮಾಜಿಕ ಜಾಲತಾಣದಲ್ಲಿ ಆಗಿರುವ ಕ್ರಾಂತಿಕಾರಕ ಬದಲಾವಣೆಗಳು ಭವಿಷ್ಯದಲ್ಲಿ ವೈದ್ಯರು ಎದುರಿಸಬೇಕಾಗುತ್ತದೆ.

ಇಂದು ಎಲ್ಲ ವೃತ್ತಿ ಶಿಕ್ಷಣಗಳು ಆಂಗ್ಲ ಭಾಷೆಯಲ್ಲಿ ಬೋಧಿಸುತ್ತಿವೆ. ವಿದ್ಯಾರ್ಥಿಗಳು ಅದನ್ನ ಮಾತೃಭಾಷೆಯಲ್ಲಿ ಅರ್ಥೈಸಿಕೊಂಡಾಗ ಮಾತ್ರ ಪಡೆದುಕೊಂಡಿರುವ ಮಾಹಿತಿಯು ಸಮಾಜ ಉಪಯೋಗಿ ಜ್ಞಾನ ಹಾಗೂ ಕೌಶಲ್ಯವಾಗಲಿಕ್ಕೆ ಸಾಧ್ಯವಾಗುತ್ತದೆ ಎಂದರು. ಕೋವಿಡ್ ರೋಗ ಕೇವಲ ಬಂದು ಒಂದಷ್ಟು ದಿನ ಇದ್ದು ಕೆಲವರನ್ನ ತೆಗೆದು-ಕೊಂಡು ಹೋಗಿರುವುದಷ್ಟೇ ಅಲ್ಲ ಅದು ಒಂದು ದೊಡ್ಡ ಪಾಠವನ್ನೇ ವೈದ್ಯ ಲೋಕಕ್ಕೆ ಬಿಟ್ಟು ಹೋಗಿದೆ. ಚಿಕಿತ್ಸೆಯಷ್ಟೇ ರೋಗ ತಡೆಗಟ್ಟುವಿಕೆ ಹಾಗೂ ನಿಯಂತ್ರಣ ಪ್ರಾಮುಖ್ಯತೆಯನ್ನ ಹೊಂದಿದೆ ಎಂದು ತಿಳಿದುಕೊಂಡು ಆ ದಿಶೆಯಲ್ಲಿ ಕಾರ್ಯಪ್ರವೃತ್ತರಾಗಬೇಕಾಗಿದೆ. ಈ ಹಿನ್ನೆಲೆಯಲ್ಲಿ ಯಶಸ್ವಿ ವೈದ್ಯರಾಗಲು ಮಾತೃಭಾಷೆ ಸ್ಥಳೀಯ ಸಂಸ್ಕೃತಿ ಸಾಹಿತ್ಯ ಹಾಗೂ ಮನುಕುಲ ಬೆಳೆದು ಬಂದ ದಾರಿ ಬಹಳ ಪ್ರಾಮುಖ್ಯತೆ ವಹಿಸುತ್ತದೆ ಎಂದು ಅಭಿಪ್ರಾಯಪಟ್ಟರು.

ಅನುಭವ ಮಂಟಪ ಟ್ರಸ್ಟ್ ಬಸವಕಲ್ಯಾಣ ಅಧ್ಯಕ್ಷರಾದ ಪೂಜ್ಯ ಶ್ರೀ ನಾಡೋಜ ಡಾ. ಬಸವಲಿಂಗಪಟ್ಟದೇವರು ದಿವ್ಯ ಸಾನಿಧ್ಯವಹಿಸಿ ಆಶೀರ್ವಾದ ನುಡಿಗಳನ್ನಾಡಿ ಎಲ್ಲರಿಗೂ ಕನ್ನಡದ ಬಗ್ಗೆ ಅಭಿಮಾನ ಇರಬೇಕು. ಕನ್ನಡ ಭಾಷೆಯನ್ನು ಉಳಿಸಿ ಬೆಳೆಸಬೇಕು. 12ನೇ ಶತಮಾನದಲ್ಲಿ ಅಪಘಾನಿಸ್ತಾನದಿಂದ ಮರುಳಶಂಕರದೇವರು ಮತ್ತು ಭಾರತದಲ್ಲಿ ಕಾಶ್ಮೀರದಿಂದ ಕನ್ಯಾಕುಮಾರಿವರೆಗೆ ಅನೇಕ ಶರಣ ಶರಣೆಯರು ಬಸವಕಲ್ಯಾಣಕ್ಕೆ ಬಂದು ಕನ್ನಡದಲ್ಲೇ ವಚನ ಸಾಹಿತ್ಯವನ್ನು ರಚಿಸಿದ್ದಾರೆ. ಶರಣ ಭಾಷೆ ಕನ್ನಡವಾಗಿತ್ತು ಎಂದು ನುಡಿದರು.

ಕಾರ್ಯಕ್ರಮದಲ್ಲಿ ಬ್ರಿಮ್ಸ್ ಕಾಲೇಜಿನ ಪ್ರಭಾರಿ ನಿರ್ದೇಶಕರಾದ ಡಾ.ಸುನಿಲ್ ತಪ್ಸೆ ಅಧ್ಯಕ್ಷತೆ ವಹಿಸಿದರು. ಡಾ.ಪಲ್ಲವಿ ಕೇಸರಿ ಡಾ. ವೃಶಾಲಿ, ಡಾ. ಶಮಸೋಧಿನ್, ಡಾ. ವರ್ಷ ಕಾಂಬಳೆ, ಡಾ. ಉಜೇರ್ ವೇದಿಕೆ ಮೇಲೆ ಉಪಸ್ಥಿತರಿದ್ದರು. ಜಿಲ್ಲೆಯ ಹೆಸರಾಂತ ಸಂಗೀತಗಾರರಾದ ಪ್ರಿಯಾಂಕಾ ಗುರುದೇವ್ ನಾಡಗೀತೆ ಜೊತೆಗೆ ಅದ್ಭುತವಾದ ಕನ್ನಡ ಮತ್ತು ಜಾನಪದ ಗೀತೆಗಳು ಹಾಡಿ ವೈದ್ಯಕೀಯ ವಿದ್ಯಾರ್ಥಿಗಳಿಗೆ ರಂಜಿಸಿದರು. ಬ್ರಿಮ್ಸ್ ಕನ್ನಡ ಸಂಘದ ಸಂಯೋಜಕರಾದ ಡಾ. ರಾಜಕುಮಾರ್ ಹೆಬ್ಬಾಳೆ ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು. ವೈದ್ಯಕೀಯ ವಿದ್ಯಾರ್ಥಿ ನಿಶಾಂತ್ ಮತ್ತು ಸಿಂಧೂ ನಿರೂಪಿಸಿದರೆ, ನಿತೀಶ್‌ಕುಮಾರ್ ಗಂಗಾಧರ ಮಠ ವಂದಿಸಿದರು. ನಂತರ 2023 ನೇ ಸಾಲಿನ ವೈದ್ಯಕೀಯ ವಿದ್ಯಾರ್ಥಿಗಳು ಅದ್ಭುತವಾಗಿ ಜಾನಪದ ನೃತ್ಯ ಪ್ರದರ್ಶನ ಮಾಡಿ ಎಲ್ಲರ ಗಮನ ಸೆಳೆದರು.

# ರೋಗ ಗುಣಮುಖಕ್ಕೆ ಜೀವಂತ ಮೀನು ನುಂಗುವುದು, ಏನಿದರ ವಿಶೇಷ?



ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 09 : ಬೀದರ್? ನಗರದ ಓಲ್ಡ್ ಸಿಟಿ ಹಾಗೂ ಬೀದರ್ ಜಿಲ್ಲೆಯ ಹುಮ್ನಾಬಾದ್ ಪಟ್ಟಣದಲ್ಲಿ ರವಿವಾರ (ಜೂ.08) ಜೀವಂತ ಮೀನುಗಳನ್ನು ನುಂಗುವುದಕ್ಕಾಗಿ ನೂರಾರು ಸಂಖ್ಯೆಯಲ್ಲಿ ಜನರು ಸೇರಿದ್ದರು. ಜೂನ್ 8, ಮಿರಗ ಮಳೆ ಮತ್ತು ಮುಂಗಾರು ಮಳೆ ಆರಂಭವಾಗುವ ಈ ದಿನದಂದು ಜೀವಂತ ಮೀನಿನ ಬಾಯಿಯೊಳಗೆ ಆಯುರ್ವೇದ ಔಷಧಿಯನ್ನು ಹಾಕಿ ನುಂಗಿದರೆ ಕೆಮ್ಮು, ಧಮ್ಮು, ಕಮಾಲೆ, ಅಸ್ತಮಾದಂತಹ ಖಾಯಿಲೆಗಳು ವಾಸಿಯಾಗುತ್ತದೆ ಎಂಬುವುದು ಜನರ ನಂಬಿಕೆಯಾಗಿದೆ.

ಈ ರೀತಿಯಾಗಿ ನೂರಾರು ವರ್ಷದಿಂದ ನಡೆದುಕೊಂಡು ಬರುತ್ತಿದೆ. ವರ್ಷದಲ್ಲಿ ಒಂದು ದಿನ ಮಾತ್ರ ಜಿವಂತ ಮೀನುಗಳನ್ನ ನುಂಗಲಾಗುತ್ತದೆ. ಶತಮಾನದಿಂದ ಇಲ್ಲಿ ಈ ಸಂಪ್ರದಾಯ ನಡೆದುಕೊಂಡು ಬರುತ್ತಿದೆ. ಪ್ರತಿ ವರ್ಷ ಜೂನ್ ತಿಂಗಳು ಆರಂಭದಲ್ಲಿ ಅಂದರೇ ಮಿರುಗು ಮಳೆಯಾದ ತಕ್ಷಣ, ಅಸ್ತಮಾ, ಕೆಮ್ಮು, ಕಾಮಾಲೆ ರೋಗಗಳು ಇದ್ದವರು ಇಲ್ಲಿಗೆ ಬಂದು ಜಿವಂತ ಮೀನುಗಳನ್ನ ನುಂಗಿ ತಮ್ಮ ಕಾಯಿಲೆಗಳನ್ನು ಕಡಿಮೆಮಾಡಿಕೊಂಡುಹೋಗುತ್ತಾರೆ. "ಬೀದರ್ ಜಿಲ್ಲೆ ಹುಮ್ನಾಬಾದ್ ಪಟ್ಟಣದ ಶರಣಪ್ಪ ಜಗದಾಳೆ ಕುಟುಂಬದವರು ಆಯುರ್ವೇದಿಕ ಔಷಧಿಯನ್ನು ಜೀವಂತ ಮೀನುಗಳ ಬಾಯಿಯಲ್ಲಿ ಹಾಕುತ್ತಾರೆ. ಬಳಿಕ, ಅಸ್ತಮಾ, ಕಾಮಾಲೆಯಂತ ರೋಗಳಿಂದ ಬಳಲುತ್ತಿರುವ ರೋಗಿಗಳಿಗೆ ನೀಡಿ, ಮೀನು ನುಂಗಿಸಿ ಕಾಯಿಲೆಯನ್ನು ಕಡಿಮೆ ಮಾಡುವ ಕೆಲಸ ಮಾಡುತ್ತಿದ್ದಾರೆ. ವರ್ಷದಲ್ಲಿ ಒಂದು ಸಲ ಮಾತ್ರ ಇವರು ಜನರಿಗೆ ಆಯುರ್ವೇದಿಕ ಔಷಧಿಯನ್ನು ಮೀನಿನ ಬಾಯಿಯಲ್ಲಿ ಹಾಕಿ ಜೀವಂತ ಮೀನುಗಳನ್ನ ನುಂಗಿಸುತ್ತಾರೆ. ಹೀಗೆ ಜೀವಂತ ಮೀನುಗಳನ್ನ ನುಂಗಿಸುವುದರಿಂದ ಕೆಮ್ಮು, ದಮ್ಮು, ಕಾಮಾಲೆಯಂತಹ ರೋಗಿಗಳು ಒಂದೇ ವಾರದಲ್ಲಿ ಕಡಿಮೆಯಾಗತ್ತದೆ ಎಂದು ಜನರು ಕೂಡಾ ನಂಬಿಕೊಂಡಿದ್ದಾರೆ.

ಜೀವಂತ ಮೀನುಗಳನ್ನು ನುಂಗುವ ಸಲುವಾಗಿ ಕರ್ನಾಟಕ ಸೇರಿದಂತೆ ಬೇರೆ ಬೇರೆ ರಾಜ್ಯದಿಂದ ನೂರಾರು ಜನರು ಬರುತ್ತಾರೆ. ಮೀನುಗಳನ್ನು ನುಂಗಿ ಹೋಗುತ್ತಾರೆ. ಇಲ್ಲಿ, ಚಿಕ್ಕ ಮಕ್ಕಳಿಂದ ಹಿಡಿದು ವಯೋವೃದ್ಧರವರೆಗೂ ಮಿನುಗಳನ್ನ ನುಂಗುತ್ತಾರೆ. ಒಂದು ಇಂಚಿನ ಮೀನಿನಿಂದ ಹಿಡಿದು ಮೂರು ನಾಲ್ಕು ಇಂಚಿನ ಜೀವಂತ ಮೀನುಗಳನ್ನು ಗಂಟಲಿಗೆ ಇಟ್ಟುಕೊಂಡು ನುಂಗಿ ನೀರು ಕುಡಿಯುತ್ತಾರೆ. ಹೀಗೆ ಮಾಡುವುದರಿಂದ ಮನಷ್ಯನ ರೋಗಗಳು ವಾಸಿಯಾಗುತ್ತವೆಂದು ಆರ್ಯವೇದಿಕ ಔಷಧಿ ಕೊಡುವ ಕುಟುಂಬದವರು ಹೇಳಿದ್ದಾರೆ.

ಇಲ್ಲಿನ ಇನ್ನೊಂದು ವಿಶೇಷವೆಂದರೇ 3 ರಿಂದ 4 ಇಂಚಿನ ಮೀನುಗಳನ್ನು ನುಂಗಿದರೂ ಯಾರೊಬ್ಬರಿಗೂ ಮೀನು ಗಂಟಲಿಗೆ ಸಿಕ್ಕಿಹಾಕೊಂಡ ಉದಾಹರಣೆ ಇಲ್ಲ. ಮಕ್ಕಳು ಕೂಡ ಮೀನುಗಳನ್ನು ನುಂಗಿ ಖುಷಿಪಡುತ್ತಾರೆ. ಇನ್ನೂ ಕೆಲ ಮಕ್ಕಳು ಮೀನುಗಳನ್ನ ನೋಡಿ ಹೆದರಿಕೊಂಡು ಚಿರಾಡಿ ಅತ್ತರು ಕೂಡಾ ಪಾಲಕರು ಒತ್ತಾಯ ಪೂರ್ವಕವಾಗಿ ಮಕ್ಕಳಿಗೆ ಮೀನುಗಳನ್ನ ನುಂಗಿಸುತ್ತಾರೆ.

ಮೀನುಗಳನ್ನು ಮಾರಾಟ ಮಾಡುವ ವ್ಯಾಪರಿಗಳಿಗೂ ಕೂಡಾ ಇದು ಸುಗ್ಗಿಯಕಾಲ ಅಂತಲೇ ಹೇಳಬಹುದು. ಒಂದು ಚಿಕ್ಕ ಮೀನಿಗೆ ನೂರರಿಂದ ಎರಡು ನೂರು ರೂಪಾಯಿ ಹಣ ಪಡೆದು ಮೀನುಗಳನ್ನ ಮಾರಾಟ ಮಾಡುತ್ತಾರೆ. ಜನರು ಕೂಡ ಖಾಯಿಲೆ ಕಡಿಮೆಯಾಗುತ್ತದೆ ಅನ್ನುವ ಆಸೆಯಿಂದ ಎಷ್ಟೇ ಹಣವಾದರೂ ಕೊಟ್ಟು ಮೀನು ಖರೀದಿಸಿ, ನುಂಗಿ ತಮ್ಮ ಕಾಯಿಲೆಯನ್ನು ವಾಸಿಯಾಗುತ್ತೆ ಅಂತ ಅಂದು-ಕೊಂಡು ಮನೆಗೆ ಹೋಗುತ್ತಿದ್ದಾರೆ. ಇಲ್ಲಿಗೆ ಬಂದವರು ಜನರು ಕಾಯಿಲೆ ಕಡಿಮೆಯಾಗಿದೆ ಅಂತಲೇ ಹೇಳಿದ್ದಾರೆ.

# ಗೋಹತ್ಯೆ: ಹಿಂದೂಪರ

## ಸಂಘಟನೆಗಳಿಂದ ಕಮಲನಗರ ಬಂದ್



ಮಲ್ಲಮ್ಮ ನುಡಿ ವಾರ್ತೆ ಬೀದರ.ಜೂ.09: ಕಮಲನಗರ ಪಟ್ಟಣ ಹೊರವಲಯದ ರಾಂಪೂರ ರಸ್ತೆಯಲ್ಲಿರುವ ಶೆಡ್‌ವೊಂದರಲ್ಲಿ ಭಾನುವಾರ ಗೋಹತ್ಯೆ ಮಾಡಿರುವುದನ್ನು ವಿರೋಧಿಸಿ ವಿವಿಧ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಕಮಲನಗರ ಬಂದ್ ಮಾಡಿದರು.

ಪಟ್ಟಣದಲ್ಲಿ ಬೈಕ್ ರ್ಯಾಲಿ ನಡೆಸಿ ಅಂಗಡಿ ಮುಂಗಟ್ಟುಗಳನ್ನು ಬಂದ್ ಮಾಡಿಸಿ, ಅಲ್ಲಮಪ್ರಭು ವೃತ್ತದಲ್ಲಿ ಟೈರ್ ಸುಟ್ಟು ಆಕ್ರೋಶ ಹೊರಹಾಕಿದರು.

ಗೋವಿನ ಹತ್ಯೆ ಮಾಡಿದ ವಿಷಯ ಕಾಡ್ಗಿಚ್ಚಿನಂತೆ ಹರಡಿತು. ಕೆಲವೇ ನಿಮಿಷಗಳಲ್ಲಿ ಯುವಕರು ಜಮಾಯಿಸಿ ಘಟನೆ ಖಂಡಿಸಿದರು. ಘಟನೆಗೆ ಕಾರಣರಾದವರ ಬಂಧನಕ್ಕೆ ಒತ್ತಾಯಿಸಿದರು.

ಘಟನಾ ಸ್ಥಳಕ್ಕೆ ಧಾವಿಸಿದ ಪೊಲೀಸರು ಕತ್ತರಿಸಿದ ಗೋವಿನ ಭಾಗಗಳನ್ನು ವಶಪಡಿಸಿಕೊಂಡಿದ್ದಾರೆ. ಘಟನಾ ಸ್ಥಳದಿಂದ ನಾಲ್ಕೈದು ಆಕಳುಗಳನ್ನೂ ವಶಕ್ಕೆಪಡೆದಿದ್ದಾರೆ ಎಂದು ತಿಳಿದು ಬಂದಿದೆ. ಸ್ಥಳಕ್ಕೆ ಹಿರಿಯ ಪೊಲೀಸ್ ಅಧಿಕಾರಿಗಳು ಭೇಟಿ ಕೊಟ್ಟಿದ್ದು, ತನಿಖೆ ಪ್ರಗತಿಯಲ್ಲಿದೆ. ಇನ್ನಷ್ಟೇ

# ಅಕ್ರಮವಾಗಿ ಕಟ್ಟಿ ಹಾಕಿದ್ದ ಗೋವು ರಕ್ಷಣೆ ಮಾಡಿದ ಶಾಸಕ ಸಲಗರ ವಿರುದ್ಧವೇ ಎಫ್‌ಐಆರ್



ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 09 : ಅಕ್ರಮ ಗೋಸಾಗಣೆ ಮಾಡಿ ಗೋಹತ್ಯೆ ಮಾಡಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿ ಶುಕ್ರವಾರ ಮುಸ್ಲಿಮರಿಗೆ ಬೆದರಿಕೆ ಹಾಕಿದ ಆರೋಪದಡಿ ಶಾಸಕ ಶರಣು ಸಲಗರ, ಅವರ ವಾಹನ ಚಾಲಕ ಮಂಜು, ಬೆಂಬಲಿಗರಾದ ಕೃಷ್ಣಾ ಗೋಣೆ ಹಾಗೂ ಸಾಗರ್ ಲಾಡೆ ಸೇರಿ 7 ಜನರ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಶುಕ್ರವಾರ ಬೆಳಗ್ಗೆ ಶಾಸಕ ಶರಣು ಸಲಗರ ಅವರು ನಗರದ ಮೆಹಬೂಬ್‌ನಗರ ಬಡಾವಣೆಯಲ್ಲಿ 25ಕ್ಕೂ ಹೆಚ್ಚು ದನಕರುಗಳನ್ನು ಅಕ್ರಮವಾಗಿ ಕಟ್ಟಿ ಹಾಕಿರುವುದನ್ನು ಪತ್ತೆ ಹಚ್ಚಿದ್ದವು. ಅಲ್ಲದೆ ಅವುಗಳನ್ನು ಗೋಶಾಲೆಗೆ ರವಾನಿಸುವಂತೆ ಒತ್ತಾಯಿಸಿ ಯಶಸ್ವಿಯಾಗಿದ್ದರು.

ಈ ವೇಳೆ ಅವರು ಮಾಜಿ ವಿಧಾನ ಪರಿಷತ್ ಸದಸ್ಯ ವಿಜಯಸಿಂಗ್ ಅವರ ಬಗ್ಗೆ ಅವಹೇಳನಾಕಾರಿಯಾಗಿ ಮಾತನಾಡಿದ್ದಾರೆ ಮತ್ತು ಬೆಂಬಲಿಗರೊಂದಿಗೆ ಮುಸ್ಲಿಂ ಸಮುದಾಯದ ಅವರ ಮನೆಯಂಗಳಕ್ಕೆ ತೆರಳಿ ಬೆದರಿಕೆಯೊಡ್ಡಿದ್ದಾರೆ ಎಂದು ಆರೋಪಿಸಿ ಪೊಲೀಸರು ಅವರ ಬೆಂಬಲಿಗರ ಮೇಲೆ ದೂರು ದಾಖಲಿಸಿಕೊಂಡಿದ್ದಾರೆ.

ಗೋಹತ್ಯೆ ಕಾಯ್ದೆ ಜಾರಿಯಿದ್ದರೂ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಆಡಳಿತ ಇರುವ ಕಾರಣ ಅವ್ಯಾಹತವಾಗಿ ಗೋವುಗಳ ವಧೆ ಮಾಡಲಾಗುತ್ತಿದೆ. ಗೋಹತ್ಯೆ ಮಾಡುವವರ ವಿರುದ್ಧ ಕ್ರಮ ಜರುಗಿಸಬೇಕಾದ ಪೊಲೀಸರು. ಗೋ ರಕ್ಷಕರನ್ನ ಬಂಧಿಸುತ್ತಿರುವುದು ದುರಂತ, ಕಾನೂನು ವಿರೋಧಿ ಕ್ರಮ ಎಂದು ಹಿಂದೂಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಗಿಡಮರ ಬೆಳೆಸಿ, ಪರಿಸರ ಉಳಿಸಿ,

## ತಾಪಮಾನ ತಗ್ಗಿಸಿ: ವೀರಭದ್ರಪ್ಪ ಉಪ್ಪಿನ



ಮಲ್ಲಮ್ಮ ನುಡಿ ವಾರ್ತೆ ಬೀದರ.ಜೂ.09: ಹಿಂದಿನ ವರ್ಷಗಳಿಗೆ ಹೋಲಿಸಿದರೆ ಈ ವರ್ಷ ತಾಪಮಾನವು ಗಣನೀಯ ಪ್ರಮಾಣದಲ್ಲಿ ಹೆಚ್ಚಾಗಿದ್ದು, ಗದಗ್ ಜಿಲ್ಲೆಯಲ್ಲಿ ಉಷ್ಣಾಂಶವು ಗರಿಷ್ಠ 44.00 ಡಿಗ್ರಿಗೆ ಮುಟ್ಟಿದೆ. ಗಿಡಮರಗಳು ಕಡಿಮೆಯಾಗಿ ಪರಿಸರಕ್ಕೆ ಹಾನಿಯಾಗಿರುವುದೇ ಇದಕ್ಕೆ ಕಾರಣವಾಗಿದೆ. ಆದ್ದರಿಂದ ಮುಂಬರುವ ಮಳೆಗಾಲದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಗಿಡಗಳನ್ನು ಬೆಳೆಸಬೇಕೆಂದು ಅಖಿಲ ಭಾರತ ವಿಶ್ವವಿದ್ಯಾಲಯಗಳ ನೌಕರರ ಒಕ್ಕೂಟದ ಕಾರ್ಯಕಾರಿ ಸಮಿತಿ ಸದಸ್ಯರಾದ ವೀರಭದ್ರಪ್ಪ ಉಪ್ಪಿನರವರು ಮದು ಮಕ್ಕಳಿಗೆ ಕರೆ ನೀಡಿದರು.

ಅವರು ಇಂದು ಗದಗ ಜಿಲ್ಲೆಯ ಗಜೇಂದ್ರಗಡನಲ್ಲಿ ನಡೆದ ಮದುವೆಯಲ್ಲಿ ಮದು ಮಕ್ಕಳಿಗೆ ಹಾಗೂ ಸಾರ್ವಜನಿಕರಿಗೆ ಸಸಿ ವಿತರಣೆ ಮಾಡಿ ಮಾತನಾಡುತ್ತಿದ್ದರು. ಜಿ ಕೆ ಗಾರ್ಡನ್ನ ಕಲ್ಯಾಣ ಮಂಟಪದಲ್ಲಿ ರಘುನಾಥಿ ಮಾಡ್ ಪರಿ ವಾರದಿಂದ ಜರುಗಿದ ಡಾ. ಸಾಗರ್ ಹಾಗೂ ಡಾ. ವೈಷ್ಣವಿ ಯವರ ಮದುವೆಯ ಸಮಾರಂಭದಲ್ಲಿ ಮದು ಮಕ್ಕಳಿಗೆ ಹಾಗೂ ಸಾರ್ವಜನಿಕರಿಗೆ ಸಸಿ ವಿತರಣೆ ಮಾಡಿ ಮಾತನಾಡುತ್ತಿದ್ದರು. ಮುಂದುವರೆದು, ಗಿಡಮರಗಳನ್ನು ಕಡಿದು, ಅರಣ್ಯವನ್ನು ನಾಶ ಮಾಡಿರುವುದರಿಂದ ಮಳೆಯು ಆಗುತ್ತಿಲ್ಲ. ಭೂಮಿಯ ತಾಪಮಾನ ಹೆಚ್ಚಾಗಿ, ಸೂರ್ಯಾಘಾತ, ನಿರ್ಜಲೀಕರಣ, ಬಿಸಿಲಾಘಾತಗಳುಂಟಾಗಿ ಮನುಷ್ಯನು ಆರೋಗ್ಯದ ಸಮಸ್ಯೆ ಎದುರಿಸುತ್ತಿದ್ದಾನೆ. ಹೆಚ್ಚಿನ ಗಿಡ-ಮರಗಳನ್ನು ಬೆಳೆಸಿದರೆ ಪರಿಸರದಲ್ಲಿ ಸಮತೋಲನ ಉಂಟಾಗುತ್ತದೆ ಎಂದು ನುಡಿದರು.

ಮದು ಮಕ್ಕಳು ಹಾಗೂ ಮದುವೆ ಮಂಟಪದಲ್ಲಿ ಹಾಜರಿದ್ದವರಿಗೆ ಗಿಡ ಬೆಳೆಸುವ ಸಂಕಲ್ಪ ಮಾಡಿಸಲಾಯಿತು. ಲಕ್ಷ್ಮಣ್-ಜಯಮ್ಮ ಲಮಾಣಿ, ತಾರಾಸಿಂಗ್-ಶಾಂತಾಬಾಯಿ ರಾಠೋಡ್, ಯೂ ಎಸ್ ಜಾಧವ್, ರಾಹುಲ್, ರಾಘವೇಂದ್ರ ರಾಠೋಡ್, ಹಣಮಂತ, ಪಾಂಡಪ್ಪ, ಗಣಪತಿ, ಸೈನಮ್ಮ, ರಾಮಪ್ಪ, ಜಗನ್ನಾಥ್, ರಮೇಶ್, ಭದ್ರಾ ನಾಯಕ್ ಸೇರಿದಂತೆ ರಘುನಾಥಿ, ಖಾಟ್ರೋತ, ರಾಠೋಡ್ ಪರಿವಾರಗಳ ಸದಸ್ಯರು ಹಾಗೂ ಅನೇಕ ಬಂದು ಮಿತ್ರರು ಹಾಜರಿದ್ದರು.

# ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

ಬೀದರ,ಜೂ.9: ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿಗೆ ಅನುಷ್ಠಾನಗೊಳಿಸುತ್ತಿರುವ ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು, ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಅರಿವು ಶೈಕ್ಷನಿಕ ನೇರವಸಾಲ ಯೋಜನೆ (ಹೊಸದು/ನವೀಕರಣ), ಗಂಗಾ ಕಲ್ಯಾಣ ಯೋಜನೆ, ಸ್ವಯಂ ಉದ್ಯೋಗ ನೇರಸಾಲ, ಸ್ವಾವಲಂಬಿ ಸಾರಥಿ ಯೋಜನೆ, ವಿದೇಶಿ ವ್ಯಾಸಂಗ ಯೋಜನೆ, ಸ್ವಾತಂತ್ರ ?? ಅಮೃತ ಮುನ್ನಡೆ ಯೋಜನೆಗಳಡಿ ಸಹಾಯಧನ/ಸಾಲ ಸೌಲಭ್ಯಕ್ಕಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹರು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್, ಅಟಲ್ ಜಿ, ಜನಸ್ನೇಹಿ ಕೇಂದ್ರ ಮತ್ತು ನಾಗರೀಕ ಸೇವಾ ಕೇಂದ್ರಗಳಲ್ಲಿ ಕೇಂದ್ರಗಳಲ್ಲಿ ಅನ್‌ಲೈನ್ ಮೂಲಕ ಹಾಗೂ ಸ್ವಾತಂತ್ರ ?? ಅಮೃತ ಮಹೋತ್ಸವ ಮುನ್ನಡೆ ಯೋಜನೆಗೆ ವೆಬ್‌ಸೈಟ್ https://www.kaushalkar.com/ ನಲ್ಲಿ ಅರ್ಜಿಗಳನ್ನು ದಿನಾಂಕ: 02-07-2025ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ https://kvcdcl.karnataka.gov.in. ದಲ್ಲಿ ಅಥವಾ ನಿಗಮದ ಕೇಂದ್ರ ಕಛೇರಿಯ ದೂರವಾಣಿ ಸಂಖ್ಯೆ 080-22374848/7899899039 ಯಿಂದ ಪಡೆಯಬಹುದಾಗಿದೆ. ಹಾಗೂ ಜಿಲ್ಲೆಗಳಲ್ಲಿ ನಿಗಮದ ಅಥವಾ 8050770005 ಅಥವಾ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ನಂ. 9-8-15/5ಬಿ, ಬಿವ್ಹಿಬಿ ಕಾಲೇಜ ರಸ್ತೆ, ಮೈಲೂರ ಕ್ರಾಸ್, ಬಸವನಗರ-585403 ದೂರವಾಣಿ ಸಂ:08482-223515 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಖಾಸಗಿ ಶಿಕ್ಷಣ ಸಂಸ್ಥೆಗಳಿಂದ ಡೋನೇಷನ್ ಹೆಸರಿನಲ್ಲಿ ಸುಲಿಗೆ ತಡೆಯಲು ವಿಶ್ವರಾಜ ಪಾಟೀಲ್ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜಿಲ್ಲೆಯಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳಿಂದ ಡೋನೇಷನ್ ಹೆಸರಿನಲ್ಲಿ ಸುಲಿಗೆಯ ಧಂದೆಯಲ್ಲಿ ತೊಡಗಿದ್ದು ಇದಕ್ಕೆ ಕಡಿವಾಣ ಹಾಕಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ ವಿದ್ಯಾರ್ಥಿ ಘಟಕದ ಜಿಲ್ಲಾಧ್ಯಕ್ಷ ಒತ್ತಾಯಿಸಿದ್ದಾರೆ.



ಈ ಕುರಿತು ಹೇಳಿಕೆ ನೀಡಿರುವ ಅವರು, ಶೈಕ್ಷಣಿಕ ಫಲಿತಾಂಶದಲ್ಲಿ ಜಿಲ್ಲೆ ಸದಾ ಹಿಂದೆ ಉಳಿದಿದ್ದು ಇದಕ್ಕೆ ಒಂದೆಡೆ ಸರ್ಕಾರಿ ಶಾಲೆಗಳು ಕಾರಣವಾಗಿದ್ದರೆ ಖಾಸಗಿ ಶಾಲಾ ಕಾಲೇಜುಗಳಲ್ಲಿ ಡೋನೇಷನ್ ಹಾವಳಿಯೂ ಕಾರಣವಾಗಿದೆ. ಮೇಲಾಗಿ ಜಿಲ್ಲೆಯಲ್ಲಿ ನಾಯಿಕೊಡೆಗಳಂತೆ ಖಾಸಗಿ ಶಿಕ್ಷಣ ಸಂಸ್ಥೆಗಳು ತಲೆ ಎತ್ತಿದ್ದು ಯಾವುದೇ ಮೂಲಸೌಕರ್ಯ ಇಲ್ಲದಿದ್ದರೂ ಅನುಮತಿ ನೀಡುತ್ತಿರುವ ಶಿಕ್ಷಣ ಇಲಾಖೆಯೂ ಇದಕ್ಕೆ ಹೊಣೆಗಾರನಾಗಿದೆ ಎಂದು ಅವರು ಆರೋಪಿಸಿದರು.

ಇದಲ್ಲದೇ ಶಿಕ್ಷಣದ ಗುಣಮಟ್ಟ ಕಾಪಾಡುವ ಜವಬ್ದಾರಿ ಹೊಂದಿರುವ ಉಪ ನಿರ್ದೇಶಕರು ಮತ್ತು ಇವರ ಮೇಲೆ ಉಸ್ತುವಾರಿ ನೋಡಿಕೊಳ್ಳಬೇಕಾದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಜಿಲ್ಲಾಧಿಕಾರಿಗಳು ಹೊಣೆಗಾರಿಕೆಯಿಂದ ನುಣುಚಿಕೊಂಡಂತೆ ತೋರುತ್ತಿದೆ.

ಈ ಎಲ್ಲ ಕಾರಣಗಳಿಂದ ಖಾಸಗಿ ಶಾಲೆಗಳಲ್ಲಿ ಅಧ್ವಾನ ತಾಂಡವವಾಡುತ್ತಿದೆ, ಬಹುತೇಕ ಶಾಲೆಗಳಿಗೆ ಅನುಮತಿಯೇ ಇಲ್ಲ, ಇದ್ದರೂ ಮೂಲಸೌಕರ್ಯಗಳು ಇಲ್ಲ, ತಾಂತ್ರಿಕತೆಯ ಶಿಕ್ಷಕರು ಇಲ್ಲದೇ ಕಳಪೆ ಗುಣಮಟ್ಟದ ಬೋಧನೆ ನಡೆಯುತ್ತಿದೆ.

ಇದಲ್ಲದೇ ಖಾಸಗಿ ಶಾಲೆಗಳಲ್ಲಿ ಸಮವಸ್ತ್ರ, ಪುಸ್ತಕಗಳು ಹಾಗೂ ಲೇಖನ ಸಾಮಗ್ರಿಗಳು ಮಾರಾಟ ಮಾಡುವ ಕೇಂದ್ರಗಳಾಗಿವೆ. ರಾಜಾರೋಷವಾಗಿ ಹೆಚ್ಚಿನ ಬೆಲೆಗೆ ಮಾರುತ್ತಿದ್ದು, ಮಕ್ಕಳು ಕಡ್ಡಾಯವಾಗಿ ತಮ್ಮ ಬಳಿಯೇ ಖರೀದಿ ಮಾಡಬೇಕೆಂದು ತಾಕೀತು ಮಾಡಿ ಸುಲಿಗೆ ಮಾಡುತ್ತಿದ್ದಾರೆ.

ಒಟ್ಟಾರೆಯಾಗಿ ಜಿಲ್ಲೆಯಲ್ಲಿ ಶಿಕ್ಷಣ ದಾಸೋಹ ಆಗಬೇಕಿತ್ತು ಆದರೆ ಇದು ವ್ಯಾಪಾರವಾಗಿದೆ. ಆದರೆ ಮಿತಿಮೀರಿದ ಡೋನೇಷನ್ ಹಾವಳಿಯಿಂದಾಗಿ ಇದೊಂದು ಹಣಮಾಡುವ ಧಂದೆಯಾಗಿ ಪರಿವರ್ತನೆಯಾಗಿದೆ ಪೋಷಕರಿಗೆ ಪ್ರಾಣ ಸಂಕಟ ತಂದೊಡ್ಡಿದೆ ಎಂದು ಅವರು ಆರೋಪಿಸಿದ್ದಾರೆ.

ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ತಂತಮ್ಮ ಜವಬ್ದಾರಿಯನ್ನು ನಿಭಾಯಿಸಿ ಜಿಲ್ಲೆಯಲ್ಲಿ ಅಕ್ರಮ ಶಾಲೆಗಳು ಅಕ್ರಮವಾಗಿ ಡೋನೇಷನ್ ಹೆಸರಿನಲ್ಲಿ ಹಣ ವಸೂಲಿ ಧಂದೆಯನ್ನು ನಿಲ್ಲಿಸಬೇಕು ಮತ್ತು ಶಾಲೆಗಳಲ್ಲಿ ಮೂಲಸೌಕರ್ಯಗಳನ್ನು ಪರಿಶೀಲಿಸಬೇಕು ಶಾಲಾ ಬಸ್‌ಗಳ ದಾಖಲಾತಿಗಳನ್ನು ಪರಿಶೀಲಿಸಬೇಕು ಮಕ್ಕಳ ಹಿತಕ್ಕಾಗಿ ಎಲ್ಲ ಅಗತ್ಯ ಕ್ರಮಗಳು ಕೈಗೊಳ್ಳಬೇಕು ಇಲ್ಲವಾದಲ್ಲಿ ಕರವೇ ಜಿಲ್ಲಾದ್ಯಕ್ಷ ಟಿ.ಎನ್.ಭೀಮುನಾಯಕ ನೇತೃತ್ವದಲ್ಲಿ ಉಗ್ರ ಹೋರಾಟ ರೂಪಿಸಲಾಗುವುದು ಎಂದು ಮಲ್ಲು ಮಾಳಿಕೇರಿ, ಸಿದ್ದು ನಾಯಕ ಹತ್ತಿಕುಣಿ, ಅಂಬ್ರೇಷ್ ಹತ್ತಿಮನಿ, ಯಮನಯ್ಯ ಗುತ್ತೇದಾರ, ಪ್ರಕಾಶ ಪಾಟೀಲ್ ಜೈಗ್ರಾಮ, ಸಾಹೇಬಗೌಡ ನಾಯಕ, ಶರಣಬಸಪ್ಪ ಯಲ್ಹೇರಿ, ಅಬ್ದುಲ್ ಚಿಗಾನೂರ, ವೆಂಕಟೇಶ ಬೈರಿಮಡ್ಡಿ, ಬಸವರಾಜ ಚೆನ್ನೂರ ಇನ್ನಿತರರು ಎಚ್ಚರಿಸಿದ್ದಾರೆ.

## ಉತ್ತಮ ಜೀವನಕ್ಕಾಗಿ ಪರಿಸರ ಉಳಿಸಿ, ಬೆಳೆಸಿ ಮತ್ತು ಪ್ಲಾಸ್ಟಿಕ್ ಮುಕ್ತ ಲಿಂಗಸೂಗೂರು ಮಾಡಿ: ನ್ಯಾಯಾಧೀಶೆ ಉಂಡಿ ಮಂಜುಳಾ ಶಿವಪ್ಪ.



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ತಾಲೂಕಿನ ಹೊಸನ್ಯಾಯಾಲಯ ಆವರ್ಣದಲ್ಲಿ ಹಾಗೂ ಆದರ್ಶ ವಿದ್ಯಾಲಯ ಲಿಂಗಸುಗೂರುನಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ನ್ಯಾಯಾವಾದಿಗಳ ಸಂಘ, ತಾಲೂಕು ಆಡಳಿತ, ಅರಣ್ಯ ಇಲಾಖೆ, ತೋಟಗಾರಿಕೆ ಇಲಾಖೆ, ಶಿಕ್ಷಣ ಇಲಾಖೆ, ಪೋಲಿಸ್ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪ್ಲಾಸ್ಟಿಕ್ ಮುಕ್ತ ಲಿಂಗಸುಗೂರು ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಕಾರ್ಯಕ್ರಮದ ಉಧ್ಘಾಟನೆಯನ್ನು ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಶ್ರೀ ಮತಿ ಉಂಡಿ ಮಂಜುಳಾ ಶಿವಪ್ಪ ಇವರು ನ್ಯಾಯಾಲದ ಆವರ್ಣದಲ್ಲಿ ಸಸಿ ನೆಡುವದರ ಮೂಲಕ ಉಧ್ಘಾಟಿಸಿದರು ನಂತರ

ಮಾತನಾಡಿದ ಉತ್ತಮ ಜೀವನಕ್ಕಾಗಿ ಪರಿಸರ ಉಳಿಸಿ, ಬೆಳೆಸಿ ಮತ್ತು ಪ್ಲಾಸ್ಟಿಕ್ ಮುಕ್ತ ಲಿಂಗಸೂಗೂರು ಮಾಡಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಧಾನ ಸಿವಿಲ್ ನ್ಯಾಯಾಧೀಶರು ಅಂಬಣ್ಣ ಕೆ. ಮತ್ತು ಸಹಾಯಕ ಸರಕಾರಿ ಅಭಿಯೋಜಕರು ವಿರುಪಣ್ಣ ದುಮತಿ, ತಾಲೂಕು ವಕೀಲರ ಸಂಘದ ಅಧ್ಯಕ್ಷರು ಭೂಪನಗೌಡ ವಿ.ಪಾಟೀಲ್, ವಿದ್ಯಾಶ್ರೀ ಪ್ರಾದೇಶಿಕ ವಲಯ ಅರಣ್ಯಾಧಿಕಾರಿಗಳು, ಶ್ರೀ ಶೈಲ ವಾಗಮೋರೆ ಹಿರಿಯ ಸಹಾಯಕ ನಿರ್ದೇಶಕು ತೋಟಗಾರಿಕೆ ಇಲಾಖೆ, ಭೀಮಣ್ಣ ಸಾಮಾಜಿಕ ವಲಯ ಅರಣ್ಯಾಧಿಕಾರಿಗಳು, ರತ್ನಮ್ಮ ಪಿ ಎಸ್ ಐ, ಹಾಗೂ ಬಸವರಾಜ ಗುಡಿಹಾಳ ಶಿಕ್ಷಣ ಸಂಯೋಜ-ಕರು, ಲಿಂಗಸುಗೂರು, ಮೌನೇಶ್ ಸಿ.ಆರ್.ಪಿ ಲಿಂಗಸುಗೂರು ನಗರ, ದೊಡ್ಡನಗೌಡ ಪಾಟೀಲ್ ಮುಖ್ಯೋಪಾಧ್ಯರು ಆದರ್ಶ ವಿದ್ಯಾಲಯ, ಲಿಂಗಸುಗೂರು. ವೆಂಕೋಬ ಗುಡದನಾಳ , ನ್ಯಾಯಾಲಯದ ಸಿಬ್ಬಂದಿಗಳು, ತಾಲೂಕಿನ ವಕೀಲರುಗಳು, ಪತ್ರಕರ್ತರು, ವಿದ್ಯಾರ್ಥಿಗಳು ಇತರು ಉಪಸ್ಥಿತರಿದ್ದರು

## ವಿಶೇಷ ನೈರ್ಮಲ್ಯ ಅಭಿಯಾನ ಜಿಲ್ಲಾ ಹಾಗೂ ತಾಲೂಕು ಮಟ್ಟದ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜೂ:9–ವಿಶೇಷ ನೈರ್ಮಲ್ಯ ಅಭಿಯಾನಕ್ಕೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳಾಗಿ ನೇಮಿಸಿ ಜಿಲ್ಲಾಧಿಕಾರಿಗಳಾದ ಡಾ.ಸುಶೀಲಾ .ಬಿ ಹಾಗೂ ಜಿಲ್ಲಾ ಜಿ.ಪಂ ಮುಖ್ಯಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಅವರು ಆದೇಶಿಸಿದ್ದಾರೆ. 2025–26 ನೇ ಸಾಲಿನ ಮುಂಗಾರು ಮಳೆ ಆರಂಭ ಹಿನ್ನೆಲೆಯಲ್ಲಿ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ಮಳೆಯಿಂದ ಮಲಿನ ನೀರು ಸೇರಿ ಕುಡಿಯುವ ನೀರು ಕಲುಷಿತಗೊಳ್ಳದಿರುವ ಕುರಿತು ಮುನ್ನೆಚ್ಚರಿಕೆಯಾಗಿ ಕ್ರಮ ಕೈಗೊಳ್ಳಲು ಈ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ.

ಪ್ರಸಕ್ತ ಮುಂಗಾರು ನಲ್ಲಿ ಆಗುವ ಮಳೆಯಿಂದಾಗಿ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ನೀರು ಹರಿದು ಚರಂಡಿ, ತೆರೆದ ಬಾವಿ, ಬೋರ್‌ವೆಲ್ ಗಳಲ್ಲಿ ಸೇರಿಕೊಂಡು ಕಲುಷಿತ ಗೊಳ್ಳುವ ಸಾಧ್ಯತೆಯಿದೆ. ಆದ್ದರಿಂದ. ಕೂಡಲೇ ಗ್ರಾಮ ಗಳಲ್ಲಿ. ಇರುವ ಎಲ್ಲ ಚರಂಡಿ, ಬಾವಿ, ಬೋರ್ ವೆಲ್ ಸುತ್ತ ಮುತ್ತ ಬ್ಲೀಚಿಂಗ್ ಮತ್ತು ಕ್ಲೋರಿನೇಶನ್ ಮಾಡುವ ಮೂಲಕ ಸ್ವಚ್ಚಗೊಳಿಸಬೇಕು. ಹಾಗೂ ಚರಂಡಿ ಗಳ ಮೂಲಕ ಹಾದು ಹೋಗಿರುವ ಕುಡಿಯುವ ನೀರಿನ ಪೈಪುಗಳನ್ನು ಪರಿಶೀಲಿಸಿ ಅವುಗಳ ಬದಲಾವಣೆ ಗೆ ಮತ್ತು ಯಾವುದೇ ರೀತಿಯ ಲೀಕೇಜ್ ಇಲ್ಲ ದಂತೆ ಮುಂಜಾಗ್ರತಾ ಕ್ರಮವಹಿಸುವ ಕುರಿತು 'ವಿಶೇಷ ನೈರ್ಮಲ್ಯ ಅಭಿಯಾನ ವನ್ನು ಇದೇ ಜೂನ್ 9 ರಿಂದ ಸ್ವಚ್ಚ ಗ್ರಾಮ ವಾತಾವರಣ ನಿರ್ಮಿಸಲು ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲ ಗ್ರಾಮ ಪಂಚಾಯತ್ ಮತ್ತು ಗ್ರಾಮಗಳಲ್ಲಿ ನಿಯಮಾನುಸಾರ ಮಳೆಗಾಲ ಅಂತ್ಯದ ವರೆಗೆ ಅಭಿಯಾನ ಕೈಗೊಳ್ಳಲು ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳನ್ನು ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಸಿಇಓ.ಜಿ ಪಂ ಇವರು ಜಂಟಿಯಾಗಿ, ನೋಡಲ್ ಅಧಿಕಾರಿಗಳಾಗಿ ನೇಮಕ ಮಾಡಿದ್ದಾರೆ ಎಂದು ಯಾದಗಿರಿ ಜಿ.ಪಂ ಸಿಇಓ ಅವರು ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ಒರಾಡಿಯ ಮುಂದೆ ಸಮಸ್ಯೆಗಳ ಸುರಿಮಳೆ ಸುರಿಸಿದ ಗ್ರಾಮಸ್ಥರು..!



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಗುರುಮಿಠಕಲ್ ಮತಕ್ಷೇತ್ರದ ಯಾದಗಿರಿ ತಾಲ್ಲೂಕಿನ ಹತ್ತಿಕುಣಿ ಗ್ರಾಮಕ್ಕೆ ಸೋಮವಾರ ಬೆಳಿಗ್ಗೆ ಭೇಟಿ ನೀಡಿದ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲವೀಶ ಒರಾಡಿಯಾ ಅಲ್ಲಿನ ಸಮಸ್ಯೆಗಳನ್ನು ವಿಕ್ಷೀಸಿ, ಕೆಲ ಕಾಲ ದಂಗಾದರು, ಅದರಂತೆ ಪಂಚಾಯತ ಅಭಿವೃದ್ಧಿ ಅಧಿಕಾರಿ ಹಾಗೂ ಅಧ್ಯಕ್ಷರ ಪತಿ ಕಾರ್ಯ ವೈಖರಿ ಬಗ್ಗೆ ಎಳೆ–ಎಳೆಯಾಗಿ ಬಿಡಿಸಿ ವಿವರಿಸಿ ತಮ್ಮ ಸಮಸ್ಯೆಗಳನ್ನು ವಿವರಿಸಿ, ಇವರಿಬ್ಬರಿಂದ ಗ್ರಾಮದಲ್ಲಿ ಶಾಂತಿ, ಸಾಮರಸ್ಯ ಹಾಳಾಗಿದೆ ಎಂದು ದೂರಿದರು.

ಗ್ರಾಮ ಪಂಚಾಯತ ಕಛೇರಿಗೆ ಆಗಮಿಸುತ್ತಿದ್ದಂತೆ ಸಿಇಓ ಅವರು ಅಧ್ಯಕ್ಷರ ಪತಿ, ಅಭಿವೃದ್ಧಿ ಅಧಿಕಾರಿ ಹಾಗೂ ಕೆಲ ಸದಸ್ಯರೊಂದಿಗೆ ಮಾತನಾಡಿ, ಏಕಾಏಕಿ ಗ್ರಾಮದಲ್ಲಿ ನೈರ್ಮಲ್ಯ ಅಭಿಯಾನಕ್ಕೆ ಚಾಲನೆ ನೀಡಲು ಮುಂದಾಗಿರುವುದಕ್ಕೆ ಆಕ್ರೋಶಗೊಂಡ ಕೆಲ ಮುಖಂಡರು, ಸರ್ ಮೊದಲು ನಿಮಗೆ ನಾವೂ ಗ್ರಾಮದ ಸಮಸ್ಯೆ, ಅಧ್ಯಕ್ಷರ ಪತಿ–ಅಭಿವೃದ್ಧಿ ಅಧಿಕಾರಿ ಕಾರ್ಯ ವೈಖರಿ ಸಮಸ್ಯೆಗಳ ಬಗ್ಗೆ ದೂರು ನೀಡಿದ ಪರಿಣಾಮ ಗ್ರಾಮಕ್ಕೆ ಆಗಮಿಸಿದ್ದೀರಿ, ಮೊದಲು ಗ್ರಾಮದ ಸಮಸ್ಯೆಗಳನ್ನು ವಿಕ್ಷೀಸಿ ಎಂದು ಆಗ್ರಹಿಸಿದರು.

ಕೇವಲ ನೀವೂ ಪಂಚಾಯತನವರು, ಸ್ವಚ್ಚತೆ ಮಾಡುತ್ತಿದ್ದೇವೆ ಎಂದು ಬಿಂಬಿಸಲು ಫೋಟೊತೆಗೆಸಿಕೊಳ್ಳಬೇಡಿ, ಪಂಚಾಯತನವರು ಕಳೆದ 5 ವರ್ಷಗಳಲ್ಲಿ ಗ್ರಾಮದಲ್ಲಿ 5 ಕೆಲಸಗಳನ್ನಾದರೂ ಸಾರ್ವಜನಿಕರಿಗೆ ಅನುಕೂಲವಾಗುವ ದೃಷ್ಟಿಯಲ್ಲಿ ಮಾಡಿದ್ದಾರೆಯೇ ಎಂದು ಪ್ರಶ್ನಿಸಿ, ಅನುದಾನ ಎಲ್ಲಿ ಖರ್ಚು ಮಾಡಿದ್ದಾರೆ ಎಂದಾಗ ಆಕ್ರೋಶಗೊಂಡ ಒರಾಡಿಯಾ, ನಿಮ್ಮ ಗ್ರಾಮ ಅಭಿವೃದ್ಧಿಯಾಗಬೇಕಾದರೇ, ನೀವೂ ಸರ್ಕಾರದ ಹತ್ತಿರ ಹೋಗಿ, ಅನುದಾನ ತನ್ನಿ, ಆಗ ನಾವೂ ಕೆಲಸ ಮಾಡುತ್ತೇವೆ ಎಂದಾಗ, ಕೆರಳಿದ ಸಾರ್ವಜನಿಕರು, ಸರ್ ನಿವೋಬ್ಬರು ಐಎಎಸ್ ಅಧಿಕಾರಿ, ನಿಮ್ಮ ಜವಾಬ್ದಾರಿ ಅರಿತು ಮಾತನಾಡಿ, ಸರ್ಕಾರದ ಪ್ರತಿನಿಧಿಯಾಗಿ ಇಲ್ಲಿಗೆ ಬಂದ್ದಿದ್ದೀರಿ, ನೀವೂ ಇಲ್ಲಿನ ಸಮಸ್ಯೆಗಳ ಪಟ್ಟಿ ಮಾಡಿ, ಸರ್ಕಾರದ ಗಮನಕ್ಕೆ ತರುವುದು ನಿಮ್ಮ ಕರ್ತವ್ಯ ಎಂದು ತರಾಟೆಗೆ ತೆಗೆದುಕೊಂಡರು.

ನೀವೂ ಬಂದೀರಿ, ನಮ್ಮ ಕೆಲ ಸಮಸ್ಯೆಗಳಿಗೆ ಪರಿಹಾರ ಸಿಗುತ್ತದೆ ಎಂಬ ನಿರೀಕ್ಷೆಯಲ್ಲಿದ್ದೇವು, ಆದರೆ ಪಿಡಿಓ ಹಾಗೂ ಅಧ್ಯಕ್ಷರ ಪತಿ ಭ್ರಷ್ಟಾಚಾರ ಬಗ್ಗೆ ಹಲವಾರು ಜನರು ನಿಮ್ಮ ಗಮನಕ್ಕೆ ತಂದರು, ನೀವೂ ಒಂದು ರೀತಿಯಲ್ಲಿ ಅವರಿಗೆ ಬೆಂಬಲ ರೀತಿಯಲ್ಲಿ ಮಾತನಾಡುತ್ತಿರುವುದು ನಿಮ್ಮ ಹುದ್ದೆಗೆ ತರುವ ಗೌರವವಲ್ಲ ಎಂದು ಟೀಕಿಸಿದರು,

ಇದೇ ಸಮಯದಲ್ಲಿ ಜನರ ಗುಂಪಿನಲ್ಲಿದ್ದ ಯುವಕನೊಬ್ಬ ಆಕ್ರೋಶಗೊಂಡು, ಸರ್ಕಾರ ಹೇಳುತ್ತದೆ, ಮೊದಲು ಗ್ರಾಮಿಣಾಭಿವೃದ್ಧಿಯಾಗಲೀ, ಆದರೆ ಇಲ್ಲಿ ಸಮಸ್ಯೆಗಳಿಗೆ ಮುಕ್ತಿ ಸಿಗುತ್ತಿಲ್ಲ, ಕಲ್ಯಾಣ ಕರ್ನಾಟಕ ಭಾಗ ಹಿಂದುಳಿಯಲು ಐಎಎಸ್, ಐಪಿಎಸ್, ಎಸಿ, ತಹಸಿಲ್ದಾರ ಇನ್ನೀತರ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಭ್ರಷ್ಟ ವ್ಯವಸ್ಥೆ ಕಾರಣವೆಂದು ದೂರಿದಾಗ ಅಲ್ಲಿದ್ದ ಎಲ್ಲರೂ ಕೆಲ ಕಾಲ ಮೌನಕ್ಕೆ ಶರಣಾದರು.

ಸಾಕಷ್ಟು ಸಂಖ್ಯೆಯಲ್ಲಿ ಸೇರಿದ ಮಹಿಳೆಯರು, ತಮ್ಮ ವಾರ್ಡಗಳಲ್ಲಿ ಸೂಕ್ತ ಚರಂಡಿಗಳಿಲ್ಲ, ರಸ್ತೆಗಳಿಲ್ಲ ಎಂದು ಅವರ ಕಾರ್‌ನ್ನು ಅಡ್ಡಗಟ್ಟಿ ಸಮಸ್ಯೆಗಳನ್ನು ತೆ–ೋರಿಸಿ, ಸಾಂಕ್ರಾಮಿಕ ರೋಗ ಹರಡಿದರೇ ಯಾರು ಜವಾಬ್ದಾರಿ ಎಂದು ತಮ್ಮ ನೋವು ತೆ–ೋಡಿಕೊಂಡರು.

ಜನರ ಒತ್ತಾಯಕ್ಕೆ ಮಣಿದು ಕೆಲ ರಸ್ತೆಗಳನ್ನು, ಚರಂಡಿಗಳನ್ನು ವಿಕ್ಷೀಸಿ, ಸಮಸ್ಯೆ ಪರಿಹಾರ ಮಾಡಲು ನೋಡಲ್ ಅಧಿಕಾರಿ ಶರಣಬಸಪ್ಪ, ಪಿಡಿಓ ನಿಂಗಣ್ಣ ಅವರಿಗೆ ಸೂಚಿಸಿದರು.

ಸರ್. ನೀವೂ ಬಂದಿರೀ ಎಂದು ಪಿಡಿಓ, ಅಧ್ಯಕ್ಷರ ಪತಿ ಇಲ್ಲಿದ್ದಾರೆ, ಅವರು ಪಂಚಾಯತಗೆ ಬರುವುದೇ ಅಪರೂಪ, ಕಳ್ಳರು ಹೇಗೆ ಬಂದು ತೆರಳುತ್ತಾರೆ, ಹಾಗೇ ಅವರು ಬರುವುದು ಮಾಹಿತಿ ಯಾರಿಗೂ ಇರುವುದಿಲ್ಲ, ಅವರಿಬ್ಬರ ವ್ಯವಹಾರಗಳು ಯಾದಗಿರಿಯಲ್ಲಿ ನಡೆಯುತ್ತವೆ ಎಂದು ಅವರ ಕಾರ್ಯ ವೈಖರಿ ವಿವರಿಸಿದರು.

ಗ್ರಾಮದ ಬಡ ಕುಟುಂಬಗಳು ಬ್ಯಾಂಕ್‌ಗಳಿಂದ ಸಾಲ ಪಡೆದು, ಮನೆ ನಿರ್ಮಿಸಿಕೊಳ್ಳಲು ಪಂಚಾಯತನಿಂದ 9–11, 9–11ಬಿ ದಾಖಲಾತಿ ಪಡೆಯಲು ಪಂಚಾಯತಗೆ ಅರ್ಜಿ ಸಲ್ಲಿಸಿದರೇ, ಅಭಿವೃದ್ಧಿ ಅಧಿಕಾರಿ ನಾನಾ ಕಾರಣಗಳನ್ನು ನೀಡಿ, ಪ್ರಚತಯೊಬ್ಬರಿಂದ 15–20 ಸಾವಿರ ಲಂಚ ಪಡೆದ ನಂತರವೇ ನಮ್ಮ ನಿವೇಶನದ ದಾಖಲಾತಿಗಳನ್ನು ನೀಡಿದ್ದಾರೆ, ಇದರಂತೆ 150 ಕುಟುಂಬಗಳು ತೊಂದರೆ ಅನುಭವಿಸಿವೆ, ಇದ–ಕ್ಕೆ ಕಡಿವಾಣ ಹಾಕಬೇಕೆಂದು ಆಗ್ರಹಿಸಿದರು.

ಪಂಚಾಯತಗೆ ಸರಿಯಾಗಿ ಅನುದಾನ ಬರುತ್ತಿಲ್ಲ, ಕೆಲ ಸದಸ್ಯರು ಸಿಇಓ ಮುಂದೆ ಪ್ರಸ್ಥಾಪಿಸಿದರು, ಅದಕ್ಕೆ ಉತ್ತರಿಸಿದ ಒರಾಡಿಯಾ, ರಾಜ್ಯ ಸರ್ಕಾರದಿಂದಲೇ ಜಿಲ್ಲೆಗೆ ಬರುವ ಸ್ವಲ್ಪ ಮಟ್ಟಿನ ಅನುದಾನವನ್ನು ಎಲ್ಲಾ ಪಂಚಾಯತಗಳಿಗೆ ಹಂಚಿಕೆ ಮಾಡಲಾಗುವುದು, ನೀವೂ ಸ್ಥಳಿಯವಾಗಿ ತೆ–ರಿಗೆ ಸಂಗ್ರಹಿಸಿ, ಸಣ್ಣ–ಪುಟ್ಟ ಸಮಸ್ಯೆಗಳನ್ನು ಪರಿಹಾರ ಮಾಡಿಕೊಳ್ಳಬೇಕು ಎಂದು ತಿಳಿಸಿದಾಗ ಕೆಲ ಮುಖಂಡರು ಜಿಲ್ಲಾ ಪಂಚಾಯತನಿಂದ ಹಿಂದುಳಿದಿರುವ ಗ್ರಾಮಕ್ಕೆ ವಿಶೇಷ ಅನುದಾನ ನೀಡಿ, ಜನರಿಗೆ ತಾತ್ಕಾಲಿಕ ಪರಿಹಾರ ದೊರಕಿಸಿ ಕೊಡಿ ಎಂದು ಒತ್ತಾಯಿಸಿದರು.

## ಸರ್ಕಾರಿ ಮನೆಗಳು ಮಂಜೂರಿ, ಅಧ್ಯಕ್ಷರ ಪತಿ ವಿರುದ್ಧ ಭ್ರಷ್ಟಾಚಾರ ಆರೋಪ ಮಾಡಿದ ಗ್ರಾಮಸ್ಥರು

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ನಾವೂ ಹಲವಾರು ವರ್ಷಗಳಿಂದ ಸರ್ಕಾರಿ ಮನೆಗಳಿಲ್ಲದೇ ತೊಂದರೆಯಲ್ಲಿ ಜೀವನ ಸಾಗಿಸುತ್ತಿದ್ದೇವೆ, ನಾವೂ ಪ್ರಯತ್ನ ಮಾಡಿ, ಪ್ರಧಾನ ಮಂತ್ರಿ ಅವಾಸ್ ಯೋಜನೆಯಡಿ ಅರ್ಜಿ ಹಾಕಿ, 2–3 ವರ್ಷಗಳು ಕಳೆದಿವೆ, ಈಗ 145 ಮನೆಗಳಿಗೆ ಮಂಜೂರಾತಿ ಸಿಕ್ಕಿದೆ, ಆದರೆ ಗ್ರಾಮ ಪಂಚಾಯತ ಅಧ್ಯ–ಕ್ಷೆ ಅನ್ನಪೂರ್ಣಮ್ಮ ಅವರ ಪತಿ ಅಮೀರನರಡ್ಡಿ ಬಿಳ್ಹಾರ ಹಾಗೂ ಪಂಚಾಯತ ಅಬಿವೃದ್ಧಿ ಅಧಿಕಾರಿ ನಿಂಗಣ್ಣ ನಮ್ಮನ್ನು ಕರೆಯಿಸಿ, ಕೆಲ ದಾಖಲಾತಿಗಳನ್ನು ಪಡೆಯುವ ನೆಪದಲ್ಲಿ ಪ್ರತಿಯೊಬ್ಬ ಫಲಾನುಭವಿಗಳಿಂದ 10–15 ಸಾವಿರ ರೂ. ಲಂಚ ಪಡೆದುಕೊಳ್ಳುತ್ತಿದ್ದಾರೆ ಎಂದು ಸಾರ್ವಜನಿಕವಾಗಿಯೇ ದೂರಿದರು.



ಈ ವಿಷಯವನ್ನು ಅಧಿಕಾರಿ ಮುಂದೆ ಅಲ್ಲಗಳೆಯಲು ಯತ್ನಿಸಿದ ಬಿಳ್ಹಾರ ಅವರನ್ನು ಹಣ ಕೊಟ್ಟ ಫಲಾನುಭವಿಗಳು ನಿರ್ಭಯದಿಂದ ಹಣ ತೆಗೆದು–ಕೊಂಡಿದ್ದಾರೆ, ಇನ್ನೂ ಕೆಲವರಲ್ಲಿ ಕೇಳುತ್ತಿದ್ದಾರೆ, ಕೆಲ ದಿನಗಳ ಹಿಂದೆ ಬೆಂಗಳೂರಿಗೆ ತಮ್ಮ ಹೊಟ್ಟೆ ಪಾಡಿಗಾಗಿ ದುಡಿಯಲು ತೆರಳಿದ ಹಲವಾರು ಕುಟುಂಬಗಳಲ್ಲಿ ಕೆಲ ಕುಟುಂಬಗಳಿಗೆ ಮನೆಗಳು ಮಂಜೂರಾಗಿದ್ದು, ಬೆಂಗಳೂರಿಗೆ ತೆರಳಿ ಅಲ್ಲಿ 3 ದಿನಗಳ ಕಾಳ ತಂಗಿ, ಹಲವಾರು ಜನರಿಂದ ಹಣ ವಸೂಲಿ ಮಾಡಿದ್ದಾನೆ ಎಂದು ತರಾಟೆಗೆ ತೆಗೆದು–ಕೊಂಡರು.

ಈ ಸಂದರ್ಭದಲ್ಲಿ ತೀವ್ರನೋವು ವ್ಯಕ್ತಪಡಿಸಿದ ಮುಖಂಡರೊಬ್ಬರು ಅಮೀನರಡ್ಡಿ ಯವರೇ ನಿಮಗೆ ಹಣದ ಆಸೆ ಹೆಚ್ಚಿದೆ, ನೀನೂ ಏನು ಕೆಲಸ ಮಾಡಿಲ್ಲ, ಒಮ್ಮೆ ಗ್ರಾಮದ ಜನರಿಗೆ ನೀರು ಪೂರೈಸುವ ನೀರು ಸಂಗ್ರಹ ಘಟಕದಲ್ಲಿ ಒಂದು ಬಾಟಲ್ ವಿಷ ಹಾಕಿ, ಒಮ್ಮೆ ಎಲ್ಲರನ್ನೂ ಸಾಯಿಸಿ ಬಿಡಿ, ನಮ್ಮೆಲ್ಲರ ಆಸ್ತಿ, ನಿಮ್ಮ ಹೆಸರಿಗೆ ಮಾಡಿಕೊಂಡು ಸುಖವಾಗಿ ಬಾಳಿರೀ ಎಂದು ಚಾಟಿ ಬೀಸಿದರು.

ನೀವೂ ಪಂಚಾಯತ ಅಭಿವೃದ್ಧಿ ಅಧಿಕಾರಿ ಮೊದಲು ಜನರಿಗೆ ಗೌರವ ಕೊಡುವುದನ್ನು ಕಲಿಯುವ ಜೊತೆಗೆ ಸಮಸ್ಯೆ ಪರಿಹಾರಕ್ಕೆ ಯತ್ನಿಸಿ, ಇಲ್ಲದಿದ್ದರೇ ನಿಮಗೆ ಗ್ರಾಮದ ಜನರು ಹಾಕುವ ಶಾಪ ತಟ್ಟುತ್ತದೆ ಎಂದು ಎಚ್ಚರಿಸಿದರು.

ನಂತರ ಗ್ರಾಮದ ಪ್ರಮುಖ ಮುಖಂಡರ ನಿಯೋಗ ಯಾದಗಿರಿಗೆ ಆಗಮಿಸಿ, ಗುರುಮಿಠಕಲ್ ಮತಕ್ಷೇತ್ರದ ಶಾಸಕ ಶರ–ಣಗೌಡ ಕಂದಕೂರ ಅವರನ್ನು ಭೇಟಿಯಾಗಿ, ಗ್ರಾಮದ ಸಮಸ್ಯೆಗಳನ್ನು ಹಾಗೂ ಪಿಡಿಓ–ಅಧ್ಯಕ್ಷರ ಪತಿ ನಡೆಸಿರುವ ಭ್ರಷ್ಟಾಚಾರ ಆಡಳಿತ ವಿವರಿಸಿ, ಪಿಡಿಓ ವರ್ಗಾವಣೆಗೆ ಒತ್ತಾಯಿಸಿದರು.

ಮುಖಂಡರೊಂದಿಗೆ ಮಾತನಾಡಿದ ಶಾಸಕ ಕಂದಕೂರ, ಗ್ರಾಮದಲ್ಲಿ ಜನರು ಎದುರಿಸುತ್ತಿರುವ ಪ್ರಮುಖ ಸಮಸ್ಯೆಗಳ ಪಟ್ಟಿ ಮಾಡಿ ನನಗೆ ನೀಡಿ, ಅಗತ್ಯ ಅನುದಾನ ಬಿಡುಗಡೆ ಮಾಡಿ, ಬದಲಾವಣೆಗೆ ಸ್ಪಂದಿಸುತ್ತೇನೆ ಎಂದು ಭರವಸೆ ನೀಡಿದರು.

## ಕೊಡ್ಲಾ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಸಮಸ್ಯೆ ಗಳನ್ನು ಬಗೆಹರಿಸಿ:ಡಾ, ರಾಮಚಂದ್ರ ಗುತ್ತೇದಾರ




ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಜು, 09. ತಾಲೂಕಿನ ಕೊಡ್ಲಾ ಗ್ರಾಮದಲ್ಲಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಕುಂದು ಕೊರತೆಗಳನ್ನು ಸರಿಪಡಿಸುವಂತೆ ಮಾನ್ಯ ಸಹಾಯಕ ಆಯುಕ್ತರ ಸೇಡಂ ರವರ ಮುಕಾಂತರ ಜಿಲ್ಲಾ ಅಲ್ಪ ಸಂಖ್ಯಾತರ ಕಲ್ಯಾಣ ಅಧಿಕಾರಿಗಳಿಗೆ ಕರವೆ ತಾಲೂಕಾಧ್ಯಕ್ಷರಾದ ಡಾ. ರಾಮಚಂದ್ರ ಗುತ್ತೇದಾರ ರವರಿಂದ ಮನವಿ. ಕೊಡ್ಲಾ ಗ್ರಾಮದ ವಸತಿ ಶಾಲೆ ಪ್ರಾರಂಭವಾಗಿ ಸುಮಾರು ವರ್ಷಗಳು ಗತಿಸಿದರು. ವಿದ್ಯಾರ್ಥಿಗಳೂ ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿದ್ದಾರೆ. ಶಾಲೆಯ ಸುತ್ತ ತಡೆಗೋಡೆ ಇರುವುದಿಲ್ಲ, ಶಾಲೆಯ ಸಿಬ್ಬಂದಿಗಳ ಅಪ್ಪಣೆ ಇಲ್ಲದೆ ಪ್ರವೇಶ ಮಾಡುತ್ತಾರೆ, ವಸತಿ ಶಾಲೆಯ ಸುತ್ತಲೂ ಸಿ. ಸಿ. ಕ್ಯಾಮೆರಾ ಅಳವಡಿಸುವುದು ಅನಿವಾರ್ಯವಾಗಿದೆ ಏಕೆಂದರೆ ರಾತ್ರಿ ಹೋತ್ತು ಹೊರಗಡೆಯಿಂದ ಜನ ಬಂದು ಶಾಲೆಯ ಆವರಣದಲ್ಲಿ ಮಧ್ಯಪಾನ ಸೇವನೆ ಮಾಡುವುದು ಹಾಗೂ ಇನ್ನಿತರ ಚಟುವಟಿಕೆಗಳು ನಡೆಯುತ್ತಿವೆ. ಹೀಗೆ ಇನ್ನು ಹತ್ತು ಹಲವಾರು ಸಮಸ್ಸೆಗಳಿವೆ. ಆದ್ದರಿಂದ ಅಲ್ಪ ಸಂಖ್ಯಾತರ ಮೊರಾರ್ಜಿ ವಸತಿ ಶಾಲೆಗೆ ಸಂಬಂಧ ಪಟ್ಟಂತಹ ಅಧಿಕಾರಿಗಳು ಬೇಟಿ ನೀಡಿ ಕುಂದು ಕೊರತೆಗಳನ್ನು ಸರಿಪಡಿಸಬೇಕೆಂದು ಮಾತನಾಡಿ ಮನವಿ ಪತ್ರವನ್ನು ನಿಡಿದರು . ಈ ಸಂದರ್ಭದಲ್ಲಿ ಮಹೇಶ ಪಾಟೀಲ, ಚಂದ್ರಶೇಖರ ಪೂಜಾರಿ, ಶ್ರೀನಿವಾಸ ರೆಡ್ಡಿ, ದೇವು ಕುಮಾರ ನಾಟಿಕಾರ, ಗುಂಡು ಈಮಡಾಪುರ, ರವಿಸಿಂಗ್, ಚಂದ್ರಶೇಖರ ಮಡಿವಾಳ, ರಮೇಶ, ಪ್ರವೀಣ ಕೊಡ್ಲಾ, ನಾಗೇಂದ್ರಪ್ಪ ಕೊಡ್ಲಾ, ರಾಜು ಗುತ್ತೇದಾರ, ಮಹೇಶ ಜಾಕನಪಲ್ಲಿ, ಮುಕುಂದ, ಬಸವರಾಜ, ಕೊಡ್ಲಾ ಗ್ರಾಮದ ಬಸವರಾಜ, ಕಿರಣ, ಸಮೀರ, ಶರಣರೆಡ್ಡಿ, ರಫೀಕ್, ನಾಗ–ರೆಡ್ಡಿ, ಭೀಮರೆಡ್ಡಿ, ರಾಜು, ಶಿವಾನಂದ, ಮೋಹನ ರೆಡ್ಡಿ, ಇನ್ನಿತರರು ಉಪಸ್ಥಿತರಿದ್ದರು.

## ವಿವಿಧ ನಿಗಮಗಳ ಯೋಜನೆಯಡಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 9–: 2025–26ನೇ ಸಾಲಿನ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಜಿಲ್ಲಾ ವ್ಯವಸ್ಥಾಪಕರು ಅವರು ತಿಳಿಸಿದ್ದಾರೆ. ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ (ನಿ), ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ, ಕರ್ನಾಟಕ ಅಲೆಮಾರಿ ಅರೆ ಅಲೆಮಾರಿ ಅಭಿವೃದ್ಧಿ ನಿಗಮ, ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮ, ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮ, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ಗೊಲ್ಲ ಕಾಡುಗೊಲ್ಲ ಅಭಿವೃದ್ಧಿ ನಿಗಮ, ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮಗಳಿಂದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು ಫಲಾಪೇಕ್ಷಿಗಳಿಗೆ ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಸೇವಾ ಸಿಂಧು ಮೂಲಕ 2025ರ ಜುಲೈ 3ರ ಒಳಗೆ ಅರ್ಜಿ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ.16 ರಂದು ಅಕ್ಕಿ, ಗೋಧಿ ಬಹಿರಂಗ ಹರಾಜು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.09–ಆಹಾರ ಇಲಾಖೆ ಅಧಿಕಾರಿಗಳು ಮತ್ತು ಪೊಲೀಸ್ ಸಿಬ್ಬಂದಿಗಳೊಂದಿಗೆ ಜಂಟಿಯಾಗಿ ಕಾರ್ಯಾಚರಣೆ ನಡೆಸಿ ಜಪ್ತಿಮಾಡಲಾದ 4550.74 ಕ್ವಿಂಟಾಲ್ ಅಕ್ಕಿ ಮತ್ತು 63.20 ಕ್ವಿಂಟಾಲ್ ಗೋಧಿಯನ್ನು ಜೂ.16 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಸಗಟು ಗೋದಾಮು ಇಲ್ಲಿ ಬಹಿರಂಗ ಹರಾಜು ಮಾಡಲಾಗುತ್ತದೆ. ಆಸಕ್ತಿಯುಳ್ಳ ಬಿಡ್ಡುದಾರರು ಷರತ್ತುಗಳೊಂದಿಗೆ ಪಾಲ್ಗೊಳ್ಳಬಹುದು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

**ಷರತ್ತುಗಳು:**

ಪ್ರತಿಯೊಬ್ಬ ಬಿಡ್ಡುದಾರರು ರೂ.15,00,000/– ಮುಂಗಡ ಭದ್ರತಾ ಠೇವಣಿ ಮೊತ್ತವನ್ನು ಸಹಾಯಕ ನಿರ್ದೇಶಕರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಅನೌಪಚಾರಿಕ ಪಡಿತರ ಪ್ರದೇಶ, ಬಳ್ಳಾರಿ ಇವರ ಹೆಸರಲ್ಲಿ ಡಿಡಿಯನ್ನು ಜೂ.13 ರಂದು ಸಂಜೆ 05.30 ರೊಳಗೆ ಪಾವತಿಸಿ, ಹರಾಜಿನಲ್ಲಿ ಭಾಗವಹಿಸಬೇಕು. ನಂತರ ಬಂದ ಡಿಡಿ ಗಳನ್ನು ಸ್ವೀಕರಿಸುವುದಿಲ್ಲ.

ಈ ಹರಾಜಿನಲ್ಲಿ ಸರ್ಕಾರ ಖರೀದಿ ಮಾಡುವ ಓ.ಎಂ.ಎಸ್(ಡಿ) ದರ ನಿಗಧಿಪಡಿಸಲಾಗಿದೆ. ಈ ಮೊತ್ತಕ್ಕಿಂತ ಕಡಿಮೆ ಮೊತ್ತ ಕೂಗಿದಲ್ಲಿ ಹಾಗೂ ಹರಾಜು ಸಮಯದಲ್ಲಿ ಬಿಡ್ಡುದಾರರ ಸಂಖ್ಯೆ ಕಡಿಮೆ ಇದ್ದಲ್ಲಿ ಹರಾಜು ಮಾಡುವ ಅಥವಾ ಹರಾಜು ಮಾಡುವ ಪ್ರಕ್ರಿಯೆಯನ್ನು ಮುಂದೂಡುವ ಅಧಿಕಾರ ಹೊಂದಿರುತ್ತದೆ.

ಸವಾಲುದಾರರು ಹರಾಜಿನಲ್ಲಿ ಗೊತ್ತುಪಡಿಸಿದ ದಿನಾಂಕದಂದು ಅರ್ಧಗಂಟೆ ಮುಂಚಿತವಾಗಿ ಭಾಗವಹಿಸಬೇಕು. ಅಗತ್ಯವಸ್ತುಗಳು ಸಗಟು/ಚಿಲ್ಲರೆ ವ್ಯಾಪಾರಸ್ಥರು ಮತ್ತು ಕಮಿಷನ್ ಏಜೆಂಟರು ಹಾಗೂ ಅಕ್ಕಿ ಗಿರಣಿ ಮಾಲಿಕರು ಹಾಗೂ ದೊಡ್ಡ ಪ್ರಮಾಣದ ಬಳಿಕೆದಾರರ ಸಂಸ್ಥೆಗಳು ಹರಾಜಿನಲ್ಲಿ ಭಾಗವಹಿಸಬಹುದು.

ಪದಾರ್ಥಗಳನ್ನು ಎಲ್ಲಿದಿಯೋ ಅಲ್ಲೆ ಹಾಗೂ ಹೇಗಿವೆಯೋ ಹಾಗೇ ಷರತ್ತಿನಡಿ ಹರಾಜು ಮಾಡಲಾಗುತ್ತಿರುವದರಿಂದ ಹರಾಜಿನಲ್ಲಿ ಭಾಗವಹಿಸುವವರು ಅದಕ್ಕೂ ಮುನ್ನ

ಜೂ.16ರಂದು 10 ಗಂಟೆಗೆ ಕೆಎಫ್‌ಸಿಎಸ್‌ಸಿ ಸಗಟು ಕೇಂದ್ರ, ಬಳ್ಳಾರಿಗೆ ಭೇಟಿ ನೀಡಿ ಅಕ್ಕಿಯ ಪರಿಶೀಲನೆ ಮಾಡಿಕೊಳ್ಳಬಹುದು. ಹರಾಜಿನಲ್ಲಿ ಭಾಗವಹಿಸುವವರು ತಮ್ಮ ವ್ಯಾಪಾರ ನೋಂದಣಿ ಪತ್ರ/ಸಂಸ್ಥೆಯ ನೋಂದಣಿ ಪತ್ರ ಮತ್ತು ಆಧಾರ್/ಜಿಎಸ್‌ಟಿ ದಾಖಲೆಗಳನ್ನು ನೋಂದಣಿ ಸಮಯದಲ್ಲಿ ಹಾಜರುಪಡಿಸತಕ್ಕದ್ದು ಹಾಗೂ ಇಲಾಖೆಯ ಕಾನೂನಿಗೆ ಒಳಪಟ್ಟಿರಬೇಕು.

ಹರಾಜಿನಲ್ಲಿ ಹೆಚ್ಚಿನ ದರದಲ್ಲಿ ಕೂಗಿದ ಬಿಡ್ಡುದಾರರ ದರಗಳನ್ನು ಜಿಲ್ಲಾಧಿಕಾರಿಯವರು ಅನುಮೋದಿಸಿದ ನಂತರ ಬಿಡ್ ಒಟ್ಟು ಮೌಲ್ಯವನ್ನು ಸರ್ಕಾರದ ಲೆಕ್ಕ ಶೀರ್ಷಿಕೆಗೆ ನಿಗಧಿತ ಅವಧಿ ಒಳಗಾಗಿ ಜಮಾ ಮಾಡಿ ಚಲನ್ ನ್ನು ಹಾಜರು ಪಡಿಸಿದ ನಂತರ ಹರಾಜಾದ ಅಕ್ಕಿಯನ್ನು ಎತ್ತುವಳಿಗೆ ಅವಕಾಶ ನೀಡಲಾಗುವುದು.

ಅಂತಿಮ ಹರಾಜನ್ನು ಒಪ್ಪಿಕೊಳ್ಳುವುದು ಅಥವಾ ತಿರಸ್ಕರಿಸುವ ಹಕ್ಕನ್ನು ಅಧಿಕಾರಿಗಳು ಹೊಂದಿರುತ್ತಾರೆ. ಬಹಿರಂಗ ಹರಾಜು ಆದ ಅಕ್ಕಿಯನ್ನು ತಮ್ಮ ಸ್ವಂತ ಖರ್ಚಿನಲ್ಲಿ ಆದೇಶ ನೀಡಿದ ಮೂರು ದಿನಗಳಲ್ಲಿ ಕೆಎಫ್‌ಸಿಎಸ್‌ಸಿ, ಬಳ್ಳಾರಿ ಇವರರಿಂದ ಎತ್ತುವಳಿ ಮಾಡಬೇಕು. ಎತ್ತುವಳಿ ಮಾಡಲು ವಿಳಂಬವಾದಲ್ಲಿ ತಮ್ಮ ಇಎಂಡಿ ಮೊತ್ತವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಲಾಗುವುದು.

**ವಿಶೇಷ ಸೂಚನೆ:**

ಅಗತ್ಯವಸ್ತುಗಳ ಕಾಯ್ದೆ 1955ರ ಕಲಂ 3, 6(ಎ) ಮತ್ತು 7 ರಡಿ ಯಾವುದೇ ಬಿಡ್ಡುದಾರರ ಹೆಸರಿನಲ್ಲಿ ಪೊಲೀಸ್ ಪ್ರಕರಣ ದಾಖಲಾಗಿರಬಾರದು. ಒಂದು ವೇಳೆ ಪೊಲೀಸ್ ಪ್ರಕರಣ ದಾಖಲಾಗಿದ್ದಲ್ಲಿ ಅಂತಹ ಬಿಡ್ಡುದಾರರು(ವ್ಯಕ್ತಿ)/ಸಂಸ್ಥೆ ಹಾಗೂ ಸಾರ್ವಜನಿಕ ವಿತರಣ ವ್ಯವಸ್ಥೆಯಡಿ ಕೆಲಸ ನಿರ್ವಹಿಸುತ್ತಿರುವವರು ಹರಾಜಿನಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ. ಒಂದು ವೇಳೆ ಅಂತಹ ವ್ಯಕ್ತಿಗಳು/ಟ್ರೇಡ್‌ಗಳ ಭಾಗವಹಿಸಿದ್ದು ಕಂಡು ಬಂದಲ್ಲಿ ಅಂತವರ ಇಎಂಡಿ ಮೊತ್ತವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಣೆಯಾದ ವ್ಯಕ್ತಿ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.09–ನಗರದ ದೇವಿನಗರ ಬಡಾವಣೆಯ ಕುರುಬರ ಹಾಸ್ಟೆಲ್ ಹತ್ತಿರದ ನಿವಾಸಿಯಾದ ಹೈದರಾಲಿ ಎನ್ನುವ 28 ವರ್ಷದ ವ್ಯಕ್ತಿಯು ಜೂ.03 ರಂದು ಕಾಣೆಯಾಗಿರುವ ಕುರಿತು ಕೌಲ್‌ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

ಚಹರೆ: ಅಂದಾಜು 5.2 ಅಡಿ ಎತ್ತರ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಬಲಗೈ ಭುಜದ ಹತ್ತಿರ ಓಂ, ಶಿಲುಬೆ, ಅರ್ಧಚಂದ್ರ ಹಚ್ಚೆ ಮತ್ತು ಬಲ ಎದೆಯ ಮೇಲೆ ಅಮ್ಮ ಎಂದು ಹಾಕಿಸಿಕೊಂಡಿರುತ್ತಾನೆ.

ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ಟಿ–ಶರ್ಟ್, ಕಂದು ಬಣ್ಣದ ಜರ್ಕಿನ್, ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ.

ಮೇಲ್ಕಂಡ ಚಹರೆ ಗುರುತುಗಳುಳ್ಳ ವ್ಯಕ್ತಿ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕೌಲ್ ಬಜಾರ್ ಪೊಲೀಸ್ ಠಾಣೆಯ ದೂ.08392–240731, 244145, ಪಿಐ ಮೊ.9480803047, ಪಿಎಸ್‌ಐ ಮೊ.94808203085 ಮತ್ತು ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ.08392–258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈನಿಂಗ್ ಮತ್ತು ಸ್ಟೀಲ್ ಇಂಡಸ್ಟ್ರೀಸ್ ಹಾಗೂ ಪಾಲುದಾರರ ಜೊತೆ ಸಮಾಲೋಚನಾ ಸಭೆ

# ಕೌಶಲ್ಯಾಭಿವೃದ್ಧಿಗೆ ಕೈಗಾರಿಗೆಗಳ ಸಹಭಾಗಿತ್ವ ಇರಲಿ: ಡಾ.ಇ.ವಿ ರಮಣ ರೆಡ್ಡಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.09–ಈ ಭಾಗದ ಕೈಗಾರಿಕೆವಲಯಗಳಲ್ಲಿ ಉದ್ಯೋಗ ಸೃಷ್ಟಿಸುವುದರ ಜೊತೆಗೆ ಯುವ ಸಮುದಾಯದಲ್ಲಿ ಕೌಶಲ್ಯಾಭಿವೃದ್ಧಿ ಹೆಚ್ಚಿಸಬೇಕು. ಇದಕ್ಕೆ ಕೈಗಾರಿಕೆಗಳೂ ಸಹ ಕೈಜೋಡಿಸಬೇಕು ಎಂದು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಪ್ರಾಧಿಕಾರದ ಅಧ್ಯಕ್ಷ ಡಾ.ಇ.ವಿ ರಮಣ ರೆಡ್ಡಿ ಅವರು ಹೇಳಿದರು.

ಸಂಡೂರು ತಾಲ್ಲೂಕಿನಲ್ಲಿ ಸ್ಕಿಲ್ ಪಾರ್ಕ್/ಅಕಾಡೆಮಿ ಸ್ಥಾಪಿಸುವ ಸಂಬಂಧ ಮೈನಿಂಗ್ ಮತ್ತು ಸ್ಟೀಲ್ ಇಂಡಸ್ಟ್ರೀಸ್ ಹಾಗೂ ಪಾಲುದಾರರ ಜೊತೆ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಸಮಾಲೋಚನಾ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದ ' ವಿದ್ಯಾರ್ಥಿಗಳಿಗೆ ಕೌಶಲ್ಯ ತರಬೇತಿ ನೀಡುವ ನಿಟ್ಟಿನಲ್ಲಿ ಕೈಗಾರಿಕೆ–ಪಾಲುದಾರರೊಂದಿಗೆ ಸಮಾಲೋಚನಾ ಸಭೆ ಆಯೋಜಿಸಲಾಗಿದ್ದು, ಕೈಗಾರಿಕೆಗಳು ಮತ್ತು ಪಾಲುದಾರರ ನಡುವಿನ ಅಂತರವನ್ನು ಕಡಿಮೆ ಮಾಡಲು ಹಾಗೂ ಉದ್ಯೋಗ ಕ್ಷೇತ್ರದಲ್ಲಿನ ಬೇಡಿಕೆಗಳನ್ನು ಪೂರೈಸಲು ಸಹಯೋಗ, ಸಹಭಾಗಿತ್ವ, ನಾವೀನ್ಯತೆ ಮತ್ತು ಕೌಶಲ್ಯ ಅಭಿವೃದ್ಧಿಯನ್ನು ಉತ್ತೇಜಿಸಬೇಕಿದೆ ಎಂದು ತಿಳಿಸಿದರು.

ಪ್ರಸ್ತುತದಲ್ಲಿ ವಿದ್ಯಾರ್ಥಿಗಳು ಕೇವಲ ಅಂಕಪಟ್ಟಿಗಳಿಗೆ ಸೀಮಿತವಾಗಿದ್ದಾರೆ. ಬದಲಾಗಿ ಅವರಿಗೆ ಕೌಶಲ್ಯತೆ ಆಧಾರಿತ ಶಿಕ್ಷಣ ಮೌಲ್ಯವು ನೀಡಬೇಕಿದೆ. ಹಾಗಾಗಿ ಇದಕ್ಕೆ ಕೈಗಾರಿಕೆಗಳ ಸಹಭಾಗಿತ್ವವೂ ಅವಶ್ಯಕತೆ ಇದೆ ಎಂದು ಅಭಿಪ್ರಾಯ ಪಟ್ಟರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಮಾತನಾಡಿ, ಜಿಲ್ಲೆಯಲ್ಲಿ ಕೈಗಾರಿಕಾ ವಲಯಗಳು ಹೆಚ್ಚಾಗಿದ್ದು, ಉದ್ಯೋಗದಾತರು ಕೌಶಲ್ಯ ಶಿಕ್ಷಣ ಅಳವಡಿಸಬೇಕು. ಜೊತೆಗೆ ಸುರಕ್ಷತೆ ಮತ್ತು ದಕ್ಷತೆಗೆ ಆದ್ಯತೆ ನೀಡಬೇಕು. ಇದಕ್ಕೆ ಬೇಕಾದ ಎಲ್ಲಾ ಅಗತ್ಯ ಸಹಕಾರ ಜಿಲ್ಲಾಡಳಿತ ನೀಡಲಿದೆ ಎಂದು ಹೇಳಿದರು.

ಇದೇ ವೇಳೆ ಸಭೆಯಲ್ಲಿ ಭಾಗವಹಿಸಿದ್ದ ವಿವಿಧ ಕಾರ್ಖಾನೆಗಳ ವ್ಯವಸ್ಥಾಪಕರು ಮತ್ತು ಪಾಲುದಾರರು, ಈ ಭಾಗದ ಯುವಜನತೆಯು ಕೌಶಲ್ಯಾಧಾರಿತ ಶಿಕ್ಷಣ ಹೆಚ್ಚು ಅಳವಡಿಸಿಕೊಳ್ಳಬೇಕಿದೆ ಎಂದು ಅನಿಸಿಕೆ ಹಾಗೂ ಅಭಿಪ್ರಾಯ ಹಂಚಿಕೊಂಡರು.

ಈ ಸಂದರ್ಭದಲ್ಲಿ ಬೆಂಗಳೂರಿನ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ವ್ಯವಸ್ಥಾಪಕ ನಿರ್ದೇಶಕ ಡಾ.ದಿನೇಶ್ ಕುಮಾರ್ ವೈ.ಕೆ., ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಬಿ.ಸೋಮಶೇಖರ ಸೇರಿದಂತೆ ಜಿಲ್ಲೆಯ ವಿವಿಧ ಮೈನಿಂಗ್ ಮತ್ತು ಸ್ಟೀಲ್ ಕಾರ್ಖಾನೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಕುಡಿಯುವ ನೀರಿನ ಮೂಲಗಳ ಸುರಕ್ಷತೆ ಸಾರ್ವಜನಿಕರ ಆದ್ಯತೆಯೂ ಹೌದು

# ಸಾರ್ವಜನಿಕರು ಕುದಿಸಿ ಆರಿಸಿ ಸೋಸಿದ ನೀರು ಕುಡಿಯಿರಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್‌ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.09–ನಿರಂತರ ಮಳೆಯಿಂದ ಬಡಾವಣೆಗಳಲ್ಲಿ ಕುಡಿಯುವ ನೀರಿನ ಮೂಲಗಳ ಸುರಕ್ಷತೆಯು ಸಾರ್ವಜನಿಕರ ಆದ್ಯತೆಯೂ ಆಗಿದ್ದು, ಹಾಗಾಗಿ ಅವುಗಳನ್ನು ಕಾಪಾಡಿಕೊಳ್ಳುವುದರ ಜೊತೆಗೆ ಕುದಿಸಿ ಆರಿಸಿ ಸೋಸಿದ ನೀರನ್ನು ಕುಡಿಯುವ ಮೂಲಕ ಸಂಭಾವ್ಯ ವಾಂತಿ ಭೇದಿ ಪ್ರಕರಣಗಳು ಉಂಟಾಗದಂತೆ ಸಾರ್ವಜನಿಕರು ಕೈಜೋಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್‌ಬಾಬು ಅವರು ಹೇಳಿದರು.

ಬಳ್ಳಾರಿ ನಗರದ ಗೌತಮ್ ನಗರ ಕೊಳಚೆ ಪ್ರದೇಶಕ್ಕೆ ಭೇಟಿ–ಜಾಗೃತಿಯಲ್ಲಿ ಅವರು ಮಾತನಾಡಿದರು.

ಕಲುಷಿತ ನೀರು ಮತ್ತು ಕಲುಷಿತ ಆಹಾರ ಸೇವನೆಯಿಂದ ಸಾಮಾನ್ಯವಾಗಿ ವಾಂತಿ ಬೇಧಿ ಸೇರಿದಂತೆ ಟೈಫಾಯಿಡ್, ಕಾಲಾರ ಮುಂತಾದ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಇರುತ್ತವೆ. ಕಳೆದ ಕೆಲವು ದಿನಗಳಿಂದ ಮಳೆಯಾಗುತ್ತಿದೆ.

ಕುಡಿಯುವ ನೀರಿನ ಮೂಲಗಳು ಕಲುಷಿತವಾಗುವ ಸಾಧ್ಯತೆ ಇರುತ್ತವೆ ಎಂದರು.

ಮನೆಯ ಮುಂದೆ ನಳದ ಪೈಪ್‌ಗಳು ತಗ್ಗಿನಲ್ಲಿ ಕಂಡುಬರುತ್ತಿದ್ದು, ಇದರಿಂದ ಅನಗತ್ಯ ನೀರು ಸಂಗ್ರಹವಾಗಿ ಪುನಃ ನೀರಿನ ಪೈಪ್‌ಗಳಲ್ಲಿ ವಾಪಾಸ್ಸು ಹೋಗುವ ಮೂಲಕ ನೀರು ಕಲುಷಿತವಾಗುವ ಸಾಧ್ಯತೆಯಿದ್ದು, ಈ ಹಿನ್ನಲೆಯಲ್ಲಿ ನಳದ ಪೈಪ್‌ಗಳು ಮನೆಯ ಮುಂದೆ ನೆಲದ ಮೇಲ್ಮಟ್ಟದಲ್ಲಿ ಇರುವಂತೆ ಜಾಗೃತೆ ವಹಿಸಬೇಕು ಎಂದು ತಿಳಿಸಿದರು.

ಸಂಭಾವ್ಯ ವಾಂತಿ–ಭೇದಿ ಕಂಡುಬರದಂತೆ ಜಾಗ್ರತೆ ವಹಿಸಲು ಮಲ–ಮೂತ್ರ ವಿಸರ್ಜನೆಗಾಗಿ ಶೌಚಾಲಯಗಳನ್ನೇ ಬಳಸಬೇಕು. ಸಾಧ್ಯವಾದಷ್ಟು ಬಿಸಿ ಆಹಾರ ಸೇವನೆಗೆ ಆದ್ಯತೆ ನೀಡಬೇಕು. ರಸ್ತೆ ಬದಿ ತೆರೆದಿಟ್ಟ ಅಥವಾ ಕತ್ತರಿಸಿದ ಹಣ್ಣು ತಿನ್ನಬಾರದು. ಊಟದ ಮೊದಲು ಹಾಗೂ ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ ತಪ್ಪದೇ ತೊಳೆಯಬೇಕು. ಒಂದು ವೇಳೆ ವಾಂತಿ–ಭೇದಿ ಅಥವಾ ಕಾಲರಾ ಸೋಂಕಿತರಿಗೆ ಮನೆಯಲ್ಲಿ ತಯಾರಿಸಿದ ಗಂಜಿ, ಬೇಳೆ ತಿಳಿ, ನಿಂಬು ಪಾನಕ ಹಾಗೂ ಸಾಧ್ಯವಾದರೆ ಎಳೆನೀರು ಕೊಡಬೇಕು.

ಜಿಲ್ಲೆಯಲ್ಲಿ ಜಿಲ್ಲಾ ಕಾಲಾರ ನಿಯಂತ್ರಣ ತಂಡ ಈಗಾಗಲೇ ನಿರಂತರವಾಗಿ ನೀರಿನ ಮೂಲಗಳ ಪರೀಕ್ಷೆ ಕೈಗೊಳ್ಳಲಾಗುತ್ತಿದ್ದು, ಸಾರ್ವಜನಿಕರು ಸಾಂಕ್ರಾಮಿಕ ರೋಗಗಳಿಂದ ಜಾಗ್ರತೆ ವಹಿಸಬೇಕು ಎಂದು ತಿಳಿಸಿದರು.

*ಓಆರ್‌ಎಸ್ ಜೀವಜಲ ಬಳಕೆ:*

ವಾಂತಿಭೇದಿ ಉಂಟಾದ ಸಂದರ್ಭದಲ್ಲಿ ದೇಹದ ನಿರ್ಜಲೀಕರಣ ತಡೆಯಲು ಓಆರ್‌ಎಸ್ ಜೀವಜಲ ದ್ರಾವಣವು ಅತ್ಯಂತ ಪರಿಣಾಕಾ–ರಿಯಾಗಿದ್ದು, ಒಂದು ಲೀಟರ್ ನೀರಿಗೆ ಸಂಪೂರ್ಣ ಒಂದು ಪೊಟ್ಟಣದ ಪುಡಿಯನ್ನು ಸ್ವಚ್ಛವಾದ ಪಾತ್ರೆಯಲ್ಲಿ ಹಾಕುವ ಮೂಲಕ ದ್ರಾವಣ ತಯಾರಿಸಿ ಒಂದು ದಿನದ ಒಳಗಡೆ ಜೀವಜಲ ದ್ರಾವಣ ಕುಡಿಯುವ ಮೂಲಕ ಖಾಲಿ ಮಾಡಬೇಕು. 24 ಗಂಟೆಗಳ ನಂತರ ಪುನಃ ಬಳಸಬಾರದು ಎಂದು ವಿವರವಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಗೌತಮ್ ನಗರ ಬಡಾವಣೆಯ ನಮ್ಮ ಕ್ಲಿನಿಕ್ ವೈದ್ಯರಾದ ಡಾ.ಸ್ಯಾಮುವೆಲ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್.ದಾಸಪ್ಪನವರ, ಹೆಚ್‌ಐಓ ದುರ್ಗಾಪ್ರಸಾದ್, ಯೋಗಾನಂದ, ಆಶಾಕಾರ್ಯಕರ್ತೆ ಸಾಜಿಯಾ, ಗೀತಾ, ಸುಮಿತ್ರ, ವೀರಭದ್ರ ಸೇರಿದಂತೆ ಸಾರ್ವಜನಿಕರು ಹಾಜರಿದ್ದರು.

ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ–2025

# ನಾಗರಿಕ ಸೇವಾ ಕೇಂದ್ರಗಳಲ್ಲಿ ಮಾಹಿತಿ ನೀಡಲು ಜೂ.22 ರ ವರೆಗೆ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.09–ನಿವೃತ್ತ ನ್ಯಾ. ಎಚ್.ಎನ್.ನಾಗಮೋಹನ್ ಸದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗದ ನೇತೃತ್ವದಲ್ಲಿ ನಡೆಯುತ್ತಿರುವ ಒಳಮೀಸಲಾತಿಗಾಗಿ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆಯ ಅವಧಿಯನ್ನು ಜೂನ್ 22 ರ ವರೆಗೆ ವಿಸ್ತರಿಸಲಾಗಿದೆ.

ಈಗಾಗಲೇ ಜೂನ್ 08 ವರೆಗೆ ಸಮೀಕ್ಷೆ ಕೈಗೊಂಡಿದ್ದು, ಸಮೀಕ್ಷೆಯು ಪ್ರಗತಿಪಥದಲ್ಲಿದ್ದು, ಕೆಲವು ಕುಟುಂಬಗಳು ವಲಸೆ ಹೋಗಿರುವ ಪ್ರಯುಕ್ತ ಪರಿಶಿಷ್ಟ ಜಾತಿಗೆ ಸೇರಿದ ಸಂಘ–ಸಂಸ್ಥೆಗಳು ಸಮೀಕ್ಷೆಯ ಅವಧಿಯನ್ನು ಮತ್ತೆ ವಿಸ್ತರಿಸಬೇಕು ಎಂದು ಮನವಿ ಸಲ್ಲಿಸಿರುತ್ತಾರೆ. ಆದರೆ ಈಗಾಗಲೇ ಶಾಲೆಗಳು ಪ್ರಾರಂಭವಾಗಿರುವ ಹಿನ್ನೆಲೆಯಲ್ಲಿ ಸಮೀಕ್ಷೆಗೆ ಗಣತಿದಾರರನ್ನಾಗಿ ನೇಮಕ ಮಾಡಲಾಗಿದ್ದ ಶಿಕ್ಷಕರನ್ನು ಸಮೀಕ್ಷೆ ಕಾರ್ಯದಿಂದ ಬಿಡುಗಡೆಗೊಳಿಸಲಾಗಿದೆ.

ಹೀಗಾಗಿ ಪರಿಶಿಷ್ಟ ಜಾತಿ ಸಮೀಕ್ಷೆಯಲ್ಲಿ ಇದುವರೆಗೂ ಭಾಗವಹಿಸದೇ ಇರುವ ಪರಿಶಿಷ್ಟ ಜಾತಿ ಕುಟುಂಬದವರು ನಾಗರೀಕ ಸೇವಾ ಕೇಂದ್ರಗಳಾದ ಕರ್ನಾಟಕ ಒನ್ ಮತ್ತು ಗ್ರಾಮಒನ್ ಕೇಂದ್ರಗಳಿಗೆ ಭೇಟಿ ನೀಡಿ ಜೂನ್ 22ರ ವರೆಗೂ ತಮ್ಮ ಮಾಹಿತಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಮಾಹಿತಿ ನಮೂದಿಸಲು ಸಾರ್ವಜನಿಕರು ತಮ್ಮ ಆಧಾರ್ ಕಾರ್ಡ್ ಅಥವಾ ಪಡಿತರ ಚೀಟಿ ಸಂಖ್ಯೆ ಅವಶ್ಯಕವಾಗಿದೆ.

ಆನ್‌ಲೈನ್ ಲಿಂಕ್ https://schedulecastesurvey.karnataka.gov.in/self-declaration ಮೂಲಕ ಸಹ ಪರಿಶಿಷ್ಟ ಜಾತಿ ಕುಟುಂಬದವರು ಸ್ವಯಂ ಘೋಷಣೆ ಮಾಡಿಕೊಳ್ಳಲು ಜೂ.22 ರವರೆಗೆ ಕಾಲಾವಕಾಶ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೀನುಗಾರಿಕೆ ಇಲಾಖೆ: ವಿವಿಧ ಯೋಜನೆಗಳಡಿ

# ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.09–ಮೀನುಗಾರಿಕೆ ಇಲಾಖೆವತಿಯಿಂದ ಪ್ರಸ್ತಕ ಸಾಲಿಗೆ ರಾಜ್ಯವಲಯ ಯೋಜನೆಗಳಡಿ ಸಹಾಯಧನಕ್ಕಾಗಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

**ರಾಜ್ಯವಲಯ ಯೋಜನೆಗಳು:**

ಮೀನುಗಾರಿಕೆ ಸಲಕರಣೆ ಕಿಟ್ ವಿತರಣೆ ಯೋಜನೆಯಡಿ ಸಹಾಯಧನ ನೆರವು, ಮೀನುಮರಿ ಖರೀದಿಸಲು ನೆರವು ಯೋಜನೆ ಮತ್ತು ಕೆರೆ, ಜಲಾಶಯಗಳ ಅಂಚಿನ ಕೊಳೆಗಳಲ್ಲಿ ಮೀನುಮರಿ ಪಾಲನೆಗೆ ಸಹಾಯಧನ ನೆರವು ನೀಡಲಾಗುವುದು.

ಅರ್ಹ ಫಲಾನುಭವಿಗಳು ಅಗತ್ಯ ದಾಖಲೆಗಳೊಂದಿಗೆ ಆಯಾ ತಾಲ್ಲೂಕಿನ ಮೀನುಗಾರಿಕೆ ಇಲಾಖೆಯ ಕಚೇರಿಗೆ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜೂ.21 ಕೊನೆಯ ದಿನಾವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ, ಸಿರುಗುಪ್ಪ, ಕಂಪ್ಲಿ ಮತ್ತು ಕುರುಗೋಡು ತಾಲ್ಲೂಕು ವ್ಯಾಪ್ತಿಗೆ ಮೀನುಗಾರಿಕೆ ಸಹಾಯಕ ನಿರ್ದೇಶಕರಾದ ಭಾವನಾ–ಮೊ.7406508971 ಮತ್ತು ಸಂಡೂರು ಮೀನುಗಾರಿಕೆ ಸಹಾಯಕ ನಿರ್ದೇಶಕ ಮಂಜುನಾಥ–ಮೊ.7204911897 ಇವರನ್ನು ಸಂಪರ್ಕಿಸಬಹುದು ಎಂದು ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್.ಸಿ.ಪಿ–ಟಿ.ಎಸ್.ಪಿ ಅನುದಾನ ಸಮರ್ಪಕವಾಗಿ ಬಳಕೆಯಾಗಬೇಕು– ಜಿಲ್ಲಾಧಿಕಾರಿ ನಲಿನ್ ಅತುಲ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಭಿವೃದ್ಧಿಗಾಗಿ ಇರುವ ಅನುದಾನ ಜಿಲ್ಲೆಯಲ್ಲಿ ಸಮರ್ಪಕವಾಗಿ ಬಳಕೆಯಾಗಬೇಕು ಮತ್ತು ಯಾವುದೇ ಕೆಲಸ ಹಾಗೂ ಕಾಮಗಾರಿಗಳು ಪೆಂಡಿಂಗ್ ಇರದಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಅಧಿನಿಯಮ–2013 ರನ್ವಯ ಅನುಸೂಚಿತ ಜಾತಿಗಳು ಉಪಯೋಜನೆ, ಬುಡಕಟ್ಟು ಉಪಯೋಜನೆ ಹಾಗೂ ಪರಿಶಿಷ್ಟ ಜಾತಿ, ವರ್ಗದ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಹಿಂದಿನ ವರ್ಷದ ಯಾವುದೇ ಕೆಲಸ ಕಾಮಗಾರಿಗಳ ು ಬಾಕಿ ಇರದಂತೆ ನೋಡಿ ಕೊಳ್ಳಬೇಕು ಮತ್ತು ಒಂದು ವರ್ಷ ಮುಂಚಿತವಾಗಿ ಯೋಜನೆಗಳನ್ನು ರೂಪಿಸಬೇಕು, ಅಂದಾಗ ಆ ಕೆಲಸಗಳನ್ನು ಬೇಗನೆ ಮುಗಿಸಲು ಅನುಕೂಲವಾಗುತ್ತದೆ ಮತ್ತು ಯಾವುದೇ ಕೆಲಸಗಳಿಗೆ ವಿಳಂಬವಾಗುವುದಿಲ್ಲ. ಪರಿಶಿಷ್ಟ ಜಾತಿಯ ಕಾಲನಿಗಳಲ್ಲಿ ಶಾಲೆ, ಅಂಗನವಾಡಿ, ಗ್ರಂಥಾಲಯಗಳು, ರಸ್ತೆ, ಚರಂಡಿ, ನೀರು ಏನು ಅವಶ್ಯಕತೆ ಇದೆ ಅವುಗಳ ಯೋಜನೆಗಳನ್ನು ರೂಪಿಸಬೇಕೆಂದು ಹೇಳಿದರು.

ದೌರ್ಜನ್ಯಕ್ಕೆ ಒಳಗಾಗಿ ಮರಣ, ರೇಪ್ ಹಾಗೂ ಇಂಜೂರಿಯಾದ ಪರಿಶಿಷ್ಟ ಜಾತಿಯ ಫಲಾನುಭವಿಗಳಿಗೆ ಕನಿಷ್ಠ 5 ಲಕ್ಷದಿಂದ ಗರಿಷ್ಠ 10 ಲಕ್ಷಗಳವರೆಗೆ ಸಮಾಜ ಕಲ್ಯಾಣ ಇಲಾಖೆಯಿಂದ ಫಲಾನುಭವಿಗಳಿಗೆ ನೀಡುವ ಪರಿಹಾರ ಸಕಾಲದಲ್ಲಿ ಅವರಿಗೆ ಸಿಗುವಂತಾಗಲಿ. ತಮಗೆ ಅವಶ್ಯಕತೆ ಇದ್ದರೆ ಹೆಚ್ಚಿನ ಅನುದಾನವನ್ನು ನೀಡಲಾಗುವುದು. ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ನಮ್ಮ ಜಿಲ್ಲೆಗೆ ನೀಡಿದ 400 ಕೋಟಿ ಅನುದಾನದಲ್ಲಿ ಪರಿಶಿಷ್ಟ ಜಾತಿ ಹಾಗೂ ಪಂಗಡಗಳ ಅಭಿವೃದ್ಧಿಗಾಗಿ ಆ ಅನುದಾನದಲ್ಲಿ 100 ಕೋಟಿ ರೂ. ವರೆಗೆ ಉಪಯೋಗಿಸಿಕೊಳ್ಳಬಹುದಾಗಿದೆ ಎಂದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ. ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ರೇಷ್ಮಾ ಹಾನಗಲ್. ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಅಜ್ಜಪ್ಪ ಸೊಗಲದ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕೊಟ್ರೇಶ ಮರಬನಳ್ಳಿ. ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರಾದ ನಾಗರಾಜ ಸೇರಿದಂತೆ ಜಿಲ್ಲಾ ಮಟ್ಟದ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಕ್ಕಳು ಓದುವ ಹವ್ಯಾಸ ಬೆಳಸಿಕೊಳ್ಳಿ: ಮಾರುತಿ ಹೊಸಮನಿ



ಮಲ್ಲಮ್ಮ ನುಡಿ ವಾರ್ತೆ

ಕುಕುನೂರು: ವಿದ್ಯಾರ್ಥಿಗಳು ಶಾಲಾ ದಿನಗಳಿಂದಲೇ ಓದುವ ಹವ್ಯಾಸ ಬೆಳಸಿಕೊಂಡರೆ ಉತ್ತಮ ಭವಿಷ್ಯದ ಜೊತೆಗೆ ಉನ್ನತ ಸ್ಥಾನಮಾನ ನಿಮ್ಮದಾಗುತ್ತದೆ ಎಂದು ಮಾರುತಿ ಹೊಸಮನಿ ಹೇಳಿದರು.

ತಾಲೂಕಿನ ಗಾವರಾಳ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗ್ರಂಥಾಲಯ ಉದ್ಘಾಟನೆ ಮಾಡಿ ಅವರು ಮಾತನಾಡಿ, ವಿದ್ಯಾರ್ಥಿಗಳು ಹೆಚ್ಚು ಹೆಚ್ಚು ಓದುವ ಅಭಿರುಚಿ ಬೆಳಸಿಕೊಳ್ಳ ಬೇಕಿದೆ, ಪುಸ್ತಕ ಓದುವ ಮೂಲಕ ಜ್ಞಾನ ಸಂಪಾದಿಸಿಕೊಂಡಗಲೇ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ ಎಂದು ಮಾರುತಿ ಹೊಸಮನಿ ಹೇಳಿದರು. ಇದೇ ಸಂದರ್ಭದಲ್ಲಿ ಸ್ಥಳೀಯ ಗ್ರಾಮ ಪಂಚಾಯತ್ ನಿಂದ ಕೊಡಲಾಗಿರುವ ಆಟದ ಸಾಮಗ್ರಿಗಳನ್ನು ಸದಸ್ಯ ಮಹೇಶ್ ಲಕಮಾಪುರ ವಿತರಿಸಿ ಮಕ್ಕಳು ದೈಹಿಕ ಸದೃಢತೆ ಕಾಪಾಡಿಕೊಳ್ಳಲು ಕ್ರೀಡಾ ಚಟುವಟಿಕೆ ಸಹಾಯಕ ಎಂದು ಹೇಳಿದರು. ಸವಿ ನೆನಪಿಗಾಗಿ ಶಾಲಾ ಆವರಣದಲ್ಲಿ ಸಸಿಗಳನ್ನು ನೆಟ್ಟು ನೀರೇರೆಯಲಾಯಿತು.

ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಾಯ ಶರಣಪ್ಪ ಎಚ್, ಶಿಕ್ಷಕರಾದ ಬಸವರಾಜ್ ಉಪ್ಪಿನ್, ಉಮಾ ಮಹೇಶ್ವರ, ನಾಗರಾಜ್ ಹಣಸಿ, ಖಾಜಾ ಸಾಬ್ ಹೊಸಳ್ಳಿ, ಗಾಳೆಪ್ಪ ದೊಡ್ಡಮನಿ, ಮೈಲಾರಪ್ಪ ಗೊರವರ, ಹನುಮಂತಪ್ಪ ದೊಡ್ಮನಿ ,ಮಲ್ಲಪ್ಪ ಹಲಗೇರಿ ,ಹನುಮಂತಪ್ಪ ಮಾಳೆಕೊಪ್ಪ ,ರಾಮಣ್ಣ ಇಳಿಗೇರ, ಇತರರು ಉಪಸ್ಥಿತರಿದರು.

ದ್ವಿತೀಯ ಪಿ.ಯು.ಸಿ ಪರೀಕ್ಷೆ–03

# ವಿದ್ಯಾರ್ಥಿಗಳು ಪ್ರವೇಶ ಪತ್ರದೊಂದಿಗೆ ಉಚಿತವಾಗಿ ಪ್ರಯಾಣಿಸಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಜೂನ್ 09–ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳ ಪರೀಕ್ಷೆ–03 ಬೇರೆ ಬೇರೆ ಕಾಲೇಜುಗಳಲ್ಲಿ ಇರುವುದರಿಂದ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ವಿದ್ಯಾರ್ಥಿಗಳ ಹಿತವನ್ನು ಗಮನದಲ್ಲಿಟ್ಟುಕೊಂಡು 2025 ನೇ ಜೂನ್ 9 ರಿಂದ 20 ರವರೆಗೆ ಪರೀಕ್ಷೆಗಳು ನಡೆಯುವ ದಿನಾಂಕಗಳಂದು ಪರೀಕ್ಷೆಗೆ ಹಾಜರಾಗಲು ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರದವರೆಗೆ ಹೋಗುವಾಗ ಮತ್ತು ಹಿಂದಿರುಗುವಾಗ ಸಂಸ್ಥೆಯ ಸಾಮಾನ್ಯ ಸೇವೆಗಳಲ್ಲಿ ದ್ವಿತೀಯ ಪಿ.ಯು.ಸಿ ಪರೀಕ್ಷಾ ಪ್ರವೇಶ ಪತ್ರವನ್ನು ತೋರಿಸಿ, ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.

ದ್ವಿತೀಯ ಪಿ.ಯು.ಸಿ ಪರೀಕ್ಷಾ ದಿನಾಂಕಗಳಂದು ಪರೀಕ್ಷಾ ಕೇಂದ್ರಗಳ ಮಾರ್ಗಗಳಲ್ಲಿ ಕಡ್ಡಾಯವಾಗಿ ಎಲ್ಲಾ ಮಾರ್ಗಗಳನ್ನು, ಸುತ್ತುವಳಿಗಳನ್ನು ಕಾರ್ಯಾಚರಣೆಗೊಳಿಸಲಾಗುವುದು. ಹೆಚ್ಚುವರಿ ಸುತ್ತುವಳಿಗಳ ಕಾರ್ಯಾಚರಣೆ–ಯ ಅಗತ್ಯತೆ ಕಂಡುಬಂದಲ್ಲಿ ಕಾರ್ಯಾಚರಣೆ ಮಾಡಲಾಗುವುದು. ಪರೀಕ್ಷಾ ಕೇಂದ್ರಗಳ ಬಳಿ ವಿದ್ಯಾರ್ಥಿಗಳು/ಪೋಷಕರು ಕೋರಿಕೆ ನಿಲುಗಡೆ ಕೋರಿದಲ್ಲಿ, ಕೋರಿಕೆ ನಿಲುಗಡೆ ನೀಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಬಿಎಂಟಿಸಿ ಪ್ರಕಟಣೆಯಲ್ಲಿ ತಿಳಿಸಿದೆ.

# ರಾಯಚೂರ: ಪ್ರವಾಹಕ್ಕೆ ತುತ್ತಾಗಬಹುದಾದ ಗ್ರಾಮಗಳಿಗೆ ಸೇನಾ ಅಧಿಕಾರಿಗಳ ಭೇಟಿ; ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 09–ಭಾರತೀಯ ಸೇನೆಯ ಅಧಿಕಾರಿಗಳಾದ ಮೇಜರ್ ಬಸವ ಪ್ರಭು ಹಾಗೂ ಸಂಜೀವ್ ಸಾಧುನವರ್ ಅವರ ನೇತೃತ್ವದ ತಂಡವು, ರಾಯಚೂರ ಜಿಲ್ಲೆಯಲ್ಲಿ ಪ್ರವಾಹಕ್ಕೆ ತುತ್ತಾಗಬಹುದಾದ ಗ್ರಾಮಗಳಿಗೆ ಇತ್ತೀಚಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿತು.

ಜಿಲ್ಲೆಯಲ್ಲಿ 2025ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ವರದಿ ನೀಡಿರುವ ಹಿನ್ನಲೆಯಲ್ಲಿ ಮುಂಜಾಗೃತಾ ಕ್ರಮವಾಗಿ ತಂಡವು ಈ ಕಾರ್ಯಕ್ರಮ ನಡೆಸಿತು.

ರಾಯಚೂರಿನ ತಾಲೂಕಿನ ಆತ್ಕರು, ಕುರ್ವಕರ್ದಾ, ಕುರ್ವಕಲಾ, ದೊಂಗರಾಂಪುರ, ಕಾಡೂರು ಹಾಗೂ ಗುರ್ಜಾಪೂರ, ಗುರ್ಜಾಪೂರ ಬ್ರಿಡ್ಜ್ ಕಮ್ ಬ್ಯಾರೇಜ ಹಾಗೂ ದೇವದುರ್ಗ ತಾಲೂಕಿನ ಅಪ್ರಾಳ, ಬಸವಂತಪುರ, ಹಿರೇರಾಯಕುಂಪಿ, ಚಿಕ್ಕರಾಯಕುಂಪಿ, ಗೂಗಲ್, ಗೂಗಲ್ ಬ್ರಿಡ್ಜ್ ಕಮ್ ಬ್ಯಾ–ರೇಜ್ ಸೇರಿದಂತೆ ಶಕ್ತಿನಗರದ ಹೆಲಿಪ್ಯಾಡ್ ಈ ಎಲ್ಲಾ ಕಡೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಂತರ ರಾಯಚೂರಿನ ಅಗ್ನಿಶಾಮಕದಳದ ಕಚೇರಿಗೆ ಭೇಟಿ ನೀಡಿ ಪ್ರವಾಹದ ಸಂದರ್ಭದಲ್ಲಿ ಉಪಯೋಗಿಸುವ ರಕ್ಷಣಾ ಸಾಮಗ್ರಿಗಳ ಬಗ್ಗೆ ಪರಿಶೀಲನೆ ನಡೆಸಿ, ಒಂದು ವೇಳೆ ಪ್ರವಾಹದ ಬಂದಲ್ಲಿ ಸಕಲ ರೀತಿಯಲ್ಲಿ ಸಜ್ಜಾಗಿರಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೇನಾ ಅಧಿಕಾರಿ ಅಭಯ ಕುಮಾರ್ ಹಾಗೂ ಸಂಜೀವ್ ಸಾಧುನವರ್ ಅವರು ಸೂಚಿಸಿದರು.

# ಪ್ರಾಥಮಿಕ ಹಂತದಲ್ಲೇ ಮಕ್ಕಳ ಪ್ರತಿಭೆ ಗುರುತಿಸಿ-ಮನಹಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.9-ಪ್ರತಿಮಗುವಿನ ಪ್ರತಿಭೆಯನ್ನುಪ್ರಾಥಮಿಕಹಂತದಿಂದ ಗುರುತಿಸಬೇಕಾಗಿದೆ ಅದಕ್ಕೆಗುರುಗಳ ಹಾಗೂ ಪಾಲಕರ ಸಹಕಾರ ಅಗತ್ಯವಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ವಿಶ್ರಾಂತ ಅಪರ ಆಯುಕ್ತ ಎಸ್.ಆರ್.ಮನಹಳ್ಳಿ ಹೇಳಿದರು. ತಾಲೂಕಿನ ಗದ್ದನಕೇರಿ ಗ್ರಾಮದ ಸರ್ಕಾರಿ ಕನ್ನಡ ಗಂಡು ಮಕ್ಕಳ ಶಾಲಾ ಆವರಣದಲ್ಲಿ ಇತ್ತೀಚಿಗೆ ಸದ್ಭಾವನಾ ನೌಕರರ ಸಮಾಜ ಸೇವಾ ಸಮೀತಿಯ 14ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ಎಸ್.ಎಸ್.ಎಲ್.ಸಿ. ಹಾಗೂ ಪಿ.ಯು.ಸಿ ದ್ವೀತಿಯ ವಾರ್ಷಿಕ ಪರಿಕ್ಷೇಯಲ್ಲಿ ಹೆಚ್ಚು ಅಂಕ ಗಳಿಸಿದ ಮತ್ತು ಹೊಸದಾಗಿ ನೌಕರಿಗೆ ಸೇರಿದವರು, ಕಲೆ, ಸಾಹಿತ್ಯ, ಕ್ರೀಡೆ. ವೈದ್ಯಕೀಯ ಇತರೆ ವಿಭಾಗದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಾನಿಧ್ಯ ವಹಿಸಿ ಮಾತನಾಡಿದ ಗದ್ದನಗಿರಿ ಮಳೆರಾಜೇಂದ್ರಸ್ವಾಮಿ ಮಠದ ಮೌನೇಶ ಮಹಾಸ್ವಾಮಿಗಳು, ಪ್ರತಿಯೊಬ್ಬರು ತಮ್ಮ ಮಕ್ಕಳಿಗೆ ಕನ್ನಡ ಮಾಧ್ಯಮದಲ್ಲಿ ಶಿಕ್ಷಣ ಕೊಡಿಸುವುದರೊಂದಿಗೆ ಸರಕಾರಿ ಶಾಲೆಗಳಿಗೆ ಕಳುಹಿಸಬೇಕೆಂದರು.

ಚಿಕ್ಕಶೆಲ್ಲಿಕೇರಿ ಶಿವಜ್ಞಾನ ಪ್ರಕಾಶ ಗುರುಕುಲದ ಅಡಿವೇಶ ಶಾಸ್ತ್ರಿಗಳು, ಸಿ.ಎಸ್.ಶೆಟ್ಟರ,ಶಿವನಗೌಡ ಪಾಟೀಲ, ಮಠಪತಿ, ಈರಣ್ಣ ಕುಂಬಾರ, ಮಳಿಯಪ್ಪ ಕುಂಬಾರ, ರಮೇಶ ಜಲಗೇರಿ,ಗುರು ಅಂಗಡಿ,,ಹನಮಂತ ಮನ್ನಿಕೇರಿ,,ಅಶೋಕ ಮಡಿವಾಳ, ಮಳಿಯಪ್ಪ ಚಿಂಚಲಿ,ಮಹಾಂತೇಶ ಅಂಗಡಿ,ಮಲ್ಲು ಗುಳಬಾಳ,ಶಿವಪ್ಪ ಗುಳೇದ, ಮಂಜು ಶೆಟ್ಟಪ್ಪನ್ನವರ, ಮುತ್ತು ಕರಡಿಗುಡ್ಡ ಇದ್ದರು.

# ಲಕ್ಷ್ಮಣ ಬದಾಮಿಗೆ 'ಪುಸ್ತಕ ಸೊಗಸು' ಬಹುಮಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.9-ತಾಲೂಕಿನ ಶಿರೂರ ಪಟ್ಟಣದ ಚಿತ್ರಕಲಾ ಶಿಕ್ಷಕ ಹಾಗೂ ಕಥೆಗಾರ ಲಕ್ಷ್ಮಣ ಬದಾಮಿ ಅವರಿಗೆ ಕನ್ನಡ ಪುಸ್ತಕ ಪ್ರಾಧಿಕಾರ ನೀಡುವ 'ಪುಸ್ತಕ ಸೊಗಸು' (2024ನೇ ಸಾಲಿನ) ಬಹುಮಾನ ಲಭಿಸಿದೆ.

ಲಕ್ಷ್ಮಣ ಬದಾಮಿ ಅವರ 'ಮಾತಿಗಿಳಿದ ಚಿತ್ರ' ಪುಸ್ತಕಕ್ಕೆ ಈ ಬಹುಮಾನ ಬಂದಿದ್ದು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವ ಶಿವರಾಜ ತಂಗಡಗಿ ಬೆಂಗಳೂರಿನ ರವೀಂದ್ರಕಲಾ ಕ್ಷೇತ್ರದಲ್ಲಿ ಇತ್ತೀಚೆಗೆ ನಡೆದ ಸಮಾರಂಭದಲ್ಲಿ ಲಕ್ಷ್ಮಣ ಅವರಿಗೆ ಬಹುಮಾನ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಕುವೆಂಪು ಭಾಷಾ ಭಾರತೀಯ ಅಧ್ಯಕ್ಷ ಚನ್ನಪ್ಪ ಕಟ್ಟಿ, ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಮಾನಸ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅದ್ಯಕ್ಷ ಡಾ.ಪುರಷೋತ್ತಮ ಬಿಳಿಮಲೆ, ಹಿರಿಯ ಸಾಹಿತಿ ಅರವಿಂದ ಮಾಲಗತ್ತಿ ಇದ್ದರು.

ಮಾತಿಗಿಳಿದ ಚಿತ್ರ ಪುಸ್ತಕ 18 ದೇಶಗಳ 24 ಕಲಾಪಥಗಳ ಬಗ್ಗೆ ಹೇಳುತ್ತ 30 ಜನ ಕಲಾವಿದರ ಒಂದೊಂದು ಕೃತಿಯ ಬಗ್ಗೆ ಚರ್ಚೆ ಮಾಡುವ ವಿಶಿಷ್ಟ ಕೃತಿಯಾಗಿದೆ.

# ಶಾಲಾ ಮಕ್ಕಳ ಜೊತೆ ಉಪಹಾರ ಸವಿದ ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.9-ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅವರು ವಿದ್ಯಾರ್ಥಿಗಳನ್ನು ರವಿವಾರ ತಮ್ಮ ಮನೆಗೆ ಆಹ್ವಾನಿಸಿ ಅವರ ಜೊತೆ ಉಪಹಾರ ಸವಿದರು.

ಪ್ರವಾಸೋದ್ಯಮ ಇಲಾಖೆ ಯೋಜನೆಯಡಿ ಶಾಲಾ ಮಕ್ಕಳಿಗೆ ಕರ್ನಾಟಕ ಪ್ರವಾಸ ದರ್ಶನ ಕಾರ್ಯಕ್ರಮ ಹಮ್ಮಿಕೊಂಡಿದ್ದ ಸಮಯದಲ್ಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ನಂತರ ಪ್ರವಾಸದ ಮುಗಿದ ಮೇಲೆ ಪ್ರವಾಸ ದರ್ಶನ ಕುರಿತು ಭಾಷಣ ಸ್ಪರ್ಧೆ ಏರ್ಪಡಿಸಬೇಕು. ಅದರಲ್ಲಿ ವಿಜೇತರಾದ ಮಕ್ಕಳಿಗೆ ಉಪಹಾರದ ಪಾರ್ಟಿ ಕೊಡುವುದಾಗಿ ಹೇಳಿದ್ದರು. ಭಾಷಣ ಸ್ಪರ್ಧೆಯಲ್ಲಿ ನವನಗರದ ಸರಕಾರಿ ಆದರ್ಶ ವಿದ್ಯಾಲಯದ ಪೃಥ್ವಿ ಕುಂಬಾಳಿವತಿ ಪ್ರಥಮ, ಕದಾಂಪೂರ ಆರ್.ಸಿ ಸರಕಾರಿ ಪ್ರೌಢಶಾಲೆಯ ಭಾಗ್ಯಶ್ರೀ ಇಂಗಳಗಿ ದ್ವಿತೀಯ, ನವನಗರದ ಆದರ್ಶ ವಿದ್ಯಾಲಯದ ವಿದ್ಯಾರ್ಥಿ ಶ್ರದ್ಧಾ ಹಳ್ಳೂರ ತೃತೀಯ ಸ್ಥಾನ ಪಡೆದು ವಿಜೇತರಾಗಿದ್ದು, ಆ ಮಕ್ಕಳನ್ನು ಮನೆಗೆ ಆಹ್ವಾನಿಸಿ ಸನ್ಮಾನಿಸಿ ಉಪಹಾರದ ವ್ಯವಸ್ಥೆ ಮಾಡಿ, ತಾವೂ ಅವರೊಂದಿಗೆ ಉಪಹಾರ ಸೇವಿಸಿದರು.

ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ 625 ಅಂಕಗಳಿಗೆ 624 ಅಂಕ ಪಡೆದ ಬೀಳಗಿ ಆದರ್ಶ ವಿದ್ಯಾಲಯದ ಷಫಾ ನಿಂಬಾಳ್ಕರ ಅವಳನ್ನು ಸನ್ಮಾನಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಶಾಲಾ ಶಿಕ್ಷಣ ಇಲಾಖೆಯ ಪ್ರಭಾರಿ ಉಪನಿರ್ದೇಶಕ ಎಚ್.ಜಿ.ಮಿರ್ಜಿ, ಆದರ್ಶ ವಿದ್ಯಾಲಯದ ಮುಖ್ಯಗುರು ಬಿ.ವಿ.ಪಾಟೀಲ ಇದ್ದರು.

# ಕ್ಷಯರೋಗ ಪತ್ತೆ ಹಚ್ಚುವ ನೂತನ ಉಪಕರಣದ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.9-ನಗರದ ಬಿವಿವಿ ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಹಾನಗಲ್ಲ ಶ್ರೀ ಕುಮಾರೇಶ್ವರ ಆಸ್ಪತ್ರೆಯ ಎನ್.ಟಿ.ಇ.ಪಿ ವಿಭಾಗದಲ್ಲಿ ನೂತನವಾದ 'ಟ್ರೂ ನ್ಯಾಟ್' ಎಂಬ ಕ್ಷಯರೋಗದ ಅತ್ಯಾಧುನಿಕ ಪರೀಕ್ಷಾ ಉಪಕರಣದ ಉದ್ಘಾಟನಾ ಸಮಾರಂಭ ಆಯೋಜಿಸಲಾಗಿತ್ತು.

ರಾಷ್ಟ್ರೀಯ ಟಿಬಿ ನಿರ್ಮೂಲನಾ ಕಾರ್ಯಕ್ರಮದ ಅಡಿಯಲ್ಲಿ ನೀಡಲಾದ ಈ ಉಪಕರಣವನ್ನು ಬಾಗಲಕೋಟೆ ಜಿಲ್ಲಾ ಕ್ಷಯ-ರೋಗ ನಿಯಂತ್ರಣಾಧಿಕಾರಿ ಡಾ.ಸುವರ್ಣಾ ಕುಲಕರ್ಣಿ ಉದ್ಘಾಟಿಸಿ ಮಾತನಾಡಿ, ಟಿ.ಬಿ ಕಾಯಿಲೆ ಮೈಕೋಬ್ಯಾಕ್ಟೀರಿಯಮ್ ಟ್ಯೂಬರ್ ಕ್ಯುಲೋಸಿಸ್ ಬ್ಯಾಕ್ಟೀರಿಯಾದಿಂದ ಬರುತ್ತದೆ. ಈ ಅತ್ಯಾಧುನಿಕ ಉಪಕರಣದಲ್ಲಿ ಮುಖ್ಯವಾಗಿ ಕಫ, ಅಂಗಾಂಶ ಮಾದರಿ, ಸೆರೆಬ್ರಲ್ ಸ್ಪೈನಲ್ ದ್ರವ, ಲಿಂಫ್ ನೋಡ್ ಅಸ್ಪಿರೇಶನ್ ದ್ರವ, ಚಿಕ್ಕಮಕ್ಕಳ ಜಠರದಿಂದ ಬರುವ ದ್ರವಗಳ ಮಾದರಿಯನ್ನು ಅಳವಡಿಸಿ ಅತ್ಯಂತ ಕಡಿಮೆ ಸಮಯದಲ್ಲಿ ಅಂದರೆ ಮೊದಲನೆ 1ಗಂಟೆಯಲ್ಲಿ ಮೈಕೋ ಬ್ಯಾಕ್ಟೀರಿಯಾ ಸೂಕ್ಷ್ಮ ಜೀವಿಯನ್ನು ಪತ್ತೆಹಚ್ಚಲಾಗುತ್ತದೆ ಎಂದರು.

2ನೇ ಗಂಟೆಯಲ್ಲಿ ಟಿ.ಬಿ.ರೋಗಕ್ಕೆ ನೀಡಲಾಗುವ ರಿಫಾಂಪಿಸಿನ್ ಮಾತ್ರೆಗೆ ರೆಜಿಸ್ಟನ್ಸ್‌ನ್ನು ಪತ್ತೆಹಚ್ಚುತ್ತದೆ. ವಿಶ್ವ ಆರೋಗ್ಯ ಸಂಸ್ಥೆ ಮಾನ್ಯತೆ ನೀಡಿದ ಈ ಉಪಕರಣ ರಾಷ್ಟ್ರೀಯ ಟಿ.ಬಿ. ನಿರ್ಮೂಲನಾ ಕಾರ್ಯಕ್ರಮದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತದೆ ಎಂದು ಅವರು ಹೇಳಿದರು.

ಸರ್ಕಾರಿ ಆಸ್ಪತ್ರೆಯ ತಂತ್ರಜ್ಞ ರಾಜು ಚೂಡಾಮಣಿ ನೂತನ ಯಂತ್ರದ ಪ್ರಯೋಜನ ಮತ್ತು ಉಪಯೋಗಿಸುವ ವಿಧಾನವನ್ನು ತಿಳಿಸಿದರು. ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ರಾಷ್ಟ್ರೀಯ ಟಿ.ಬಿ. ನಿರ್ಮೂಲನಾ ಕಾರ್ಯಕ್ರಮದ ಅಡಿಯಲ್ಲಿ ತರಬೇತಿ ಹೊಂದಿದ ಅನುಭವಿ ತಂತ್ರಜ್ಞರು ಈ ಉಪಕರಣದ ಸಹಾಯದಿಂದ ಟಿ.ಬಿ.ರೋಗವನ್ನು ಪತ್ತೆ ಹಚ್ಚುತ್ತಾರೆ. ಕ್ಷಯರೋಗದ ಲಕ್ಷಣಗಳಿರುವ ರೋಗಿಗಳು ಕುಮಾರೇಶ್ವರ ಆಸ್ಪತ್ರೆಯಲ್ಲಿ ಈ ಉಪಕರಣದ ಮೂಲಕ ಉಚಿತ ಪರೀಕ್ಷೆ ಮಾಡಿಸಿಕೊಂಡು ಇಲ್ಲಿನ ನುರಿತ ತಜ್ಞ ವೈದ್ಯರಿಂದ ಸೂಕ್ತ ಚಿಕಿತ್ಸೆ ಪಡೆಯಬಹುದಾಗಿದೆ ಎಂದು ತಿಳಿಸಿದರು.

ಬಿ.ವ್ಹಿ.ವ್ಹಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಅವರು ಹಾಗೂ ವೈದ್ಯಕೀಯ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ. ಅಶೋಕ ಎಮ್.ಸಜ್ಜನ (ಬೇವೂರ) ಅತ್ಯಾಧುನಿಕ ಉಪಕರಣವನ್ನು ನೀಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯನ್ನು ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ವೈದ್ಯಕೀಯ ಅಧೀಕ್ಷಕ ಡಾ. ಶ್ರೀರಾಮ ಕೋರಾ. ಎನ್.ಟಿ.ಇ.ಪಿ ಕೇಂದ್ರದ ಮೇಲ್ವಿಚಾರಕ ಡಾ.ಅಶೋಕ ಡೋರ್ಲೆ, ನೋಡಲ್ ಅಧಿಕಾರಿ ಡಾ.ಬಸವರಾಜ ಮನ್ನಾಪೂರ, ಕ್ಲೀನಿಕಲ್ ನೋಡಲ್ ಅಧಿಕಾರಿ ಡಾ.ರಾಘವೇಂದ್ರ ಮುರಾಳ, ಶ್ವಾಸಕೋಶ ವಿಭಾಗದ ಮುಖ್ಯಸ್ಥ ಡಾ.ವೀರಭದ್ರಪ್ಪ ಕುಪ್ಪಸ್ತ, ಜಿಲ್ಲಾ ಕ್ಷಯರೋಗ ನಿಯಂತ್ರಣಾ ಸಿಬ್ಬಂದಿ, ಐ.ಸಿ.ಟಿ.ಸಿ ಸಿಬ್ಬಂದಿ ಹಾಗೂ ವೈದ್ಯಕೀಯ ಮಹಾವಿದ್ಯಾಲಯದ ವಿವಿಧ ವಿಭಾಗಗಳ ಮುಖ್ಯಸ್ಥರು ಮತ್ತು ಆಸ್ಪತ್ರೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಕುಶಲಕರ್ಮಿಗಳಿಗೆ ಸುಧಾರಿತ ಸಲಕರಣೆ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.9-ಗ್ರಾಮೀಣ ಪ್ರದೇಶದ ನಿರುದ್ಯೋಗಿ ಯುವಕ, ಯುವತಿಯರಿಗೆ ಸ್ವಯಂ ಉದ್ಯೋಗ ಹಾಗೂ ವಿವಿಧ ವೃತ್ತಿಗಳಿಗೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಹೊಲಿಗೆಯಂತ್ರ, ಬಡಿಗತನ ಹಾಗೂ ಧೋಬಿ ವೃತ್ತಿಯ ಉಪಕರಣಗಳನ್ನು ಬೀಳಗಿ ಶಾಸಕ ಜೆ.ಟಿ.ಪಾಟೀಲ ಸೋಮವಾರ ವಿತರಿಸಿದರು.

ಬಾಗಲಕೋಟೆ ನಗರದ ಹಳೇ ಪ್ರವಾಸಿ ಮಂದಿರದಲ್ಲಿ ಗ್ರಾಮೀಣ ಕೈಗಾರಿಕೆ ಇಲಾಖೆ ವತಿಯಿಂದ ಬೀಳಗಿ ಮತಕ್ಷೇತ್ರದ ಫಲಾನುಭವಿಗಳಿಗೆ ವಿವಿಧ ವೃತ್ತಿಪರ ಉಪಕರಣಗಳ ವಿತರಣಾ ಕಾರ್ಯಕ್ರಮದಲ್ಲಿ ಗ್ರಾಮೀಣ ಪ್ರದೇಶದ ಕುಶಲಕರ್ಮಿಗಳಿಗೆ ಉಚಿತ ಸುಧಾರಿತ ಸಲಕರಣೆ ಸರಬರಾಜು ಯೋಜನೆಯಡಿ 45 ಹೊಲಿಗೆ ಯಂತ್ರ, 16 ಬಡಿಗತನ, 9 ಕ್ಷೌರಿಕ ಹಾಗೂ 4 ದೋಬಿ ವೃತ್ತಿಯ ಉಪಯುಕ್ತ ಉಪಕರಣಗಳನ್ನು ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜೆ.ಟಿಪಾಟೀಲ, ಸರಕಾರ ನೀಡಿರುವ ಉಪಕರಣಗಳ ಸದುಪಯೋಗ ಪಡೆದುಕೊಂಡು ತಮ್ಮ ಕುಟುಂಬದ ಆರ್ಥಿಕ ಸ್ಥಿತಿ ಸುಧಾರಿಸಿಕೊಳ್ಳಬೇಕು. ಮಹಿಳೆಯರಿಗೂ ಸಹ ಹೊಲಿಗೆ ಯಂತ್ರವನ್ನು ಉಚಿತವಾಗಿ ವಿತರಿಸಲಾಗಿದ್ದು, ಇದರ ಸದುಪಯೋಗದಿಂದ ಸ್ವಾವಲಂಬನೆ ಜೀವನ ನಡೆಸಲು ಮುಂದಾಗಬೇಕು. ಸರಕಾರ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಸಾಕಷ್ಟು ಅನುಕೂಲ ಮಾಡಿದೆ. ಇದರ ಜೊತೆಗೆ ಕೆಲವೊಂದು ವೃತ್ತಿಗಳಿಗೆ ಉತ್ತೇಜನ ನೀಡುವ ದೃಷ್ಟಿಯಿಂದ ಉಚಿತವಾಗಿ ಸಲಕರಣೆಗಳನ್ನು ಸಹ ನೀಡಲಾಗಿದೆ ಎಂದರು.

ವಿವಿಧ ವೃತ್ತಿಯ ಸಲಕರಣೆಗಳನ್ನು ಕೊಡುವದಲ್ಲದೇ ಆ ವೃತ್ತಿಯ ಬಗ್ಗೆ ಕೌಶಲ್ಯ ತರಬೇತಿಯನ್ನು ಸಹ ನೀಡಲು ಕ್ರೀಯಾ ಯೋಜನೆ ರೂಪಿಸುವಂತೆ ಇಲಾಖೆಗೆ ಸೂಚಿಸಲಾಗಿದೆ. ಉಪಕರಣಗಳ ಜೊತಗೆ ತರಬೇತಿ ನೀಡಿದಾಗ ಮಾತ್ರ ಕೊಟ್ಟಂತಹ ಉಪಕರಣಗಳ ಸರಿಯಾದ ಬಳಕೆ ಸಾದ್ಯವಾಗುತ್ತದೆ. ಸರಕಾರದಿಂದ ಉತ್ತಮ ಗುಣಮಟ್ಟದ ಸಲಕರಣೆಗಳನ್ನು ನೀಡಿದ್ದು, ಅವುಗಳ ಸರಿಯಾದ ಬಳಕೆಯಾಗಬೇಕು. ಯಾವುದೇ ರೀತಿಯಲ್ಲಿ ದುರ್ಬಳಕೆ ಮಾಡಿಕೊಳ್ಳಬಾರದೆಂದು ಜೆ.ಟಿ.ಪಾಟೀಲ ತಿಳಿಸಿದರು.

ಗ್ರಾಮೀಣ ಕೈಗಾರಿಕಾ ಇಲಾಖೆಯ ಉಪನಿರ್ದೇಶಕ ಸಿದ್ದರಾಯ ಬೆಳವಂಗೆ ಪ್ರಾಸ್ತಾವಿಕವಾಗಿ ಮಾತನಾಡಿ, ಹೊಲಿಗೆಯಂತ್ರ, ಬಡಿಗತನ ಹಾಗೂ ಧೋಬಿ ಉಪಕರಣಕ್ಕಾಗಿ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಲಾಗಿತ್ತು. ಸಾಮಾನ್ಯ ಅಭ್ಯರ್ಥಿಗಳಿಂದ 50 ಅರ್ಜಿಗಳ ಪೈಕಿ 23, ಪರಿಶಿಷ್ಟ ಜಾತಿಯ ಅರ್ಹ 22 ಅರ್ಜಿಗಳ ಪೈಕಿ 15 ಮತ್ತು ಪರಿಶಿಷ್ಟ ಪಂಗಡದ ಅರ್ಹ 9 ಅರ್ಜಿಗಳ ಪೈಕಿ 7 ಜನ ಸೇರಿ ಒಟ್ಟು 45 ಜನ ಮಹಿಳೆಯರಿಗೆ ಹೊಲಿಗೆಯಂತ್ರ, 16 ಬಡಿಗತನ, 4 ಧೋಬಿ ಉಪಕರಣಗಳನ್ನು ನೀಡಲು ಆಯ್ಕೆ ಮಾಡಲಾಗಿತ್ತು ಎಂದರು.

ಕಾರ್ಯಕ್ರಮದಲ್ಲಿ ಇಲಾಖೆಯ ಸಿಬ್ಬಂದಿಗಳು, ಆಯ್ಕೆಯಾದ ಅರ್ಹ ಫಲಾನುಭವಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಾರ್ಮಿಕರು ಕಾರ್ಮಿಕ ಕಾರ್ಡ ಪಡೆಯಬೇಕು-ರಮೇಶ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.9-ಜಿಲ್ಲೆಯಾದ್ಯಂತ ಖಾಸಗಿ ಕ್ಷೇತ್ರಗಳಲ್ಲಿ ಕೆಲಸ ಮಾಡುತ್ತಿರುವ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರು ಕಡ್ಡಾಯವಾಗಿ ಕಾರ್ಮಿಕ ಕಾರ್ಡ್ ಮಾಡಿಸಿಕೊಳ್ಳಬೇಕು ಎಂದು ಜಿಲ್ಲಾ ಕಾರ್ಮಿಕ ಇಲಾಖೆಯ ಕಾರ್ಮಿಕ ಕಲ್ಯಾಣಾಧಿಕಾರಿ ರಮೇಶ ಸುಂಬಡ ಹೇಳಿದರು.

ತಾಲೂಕಿನ ವೀರಾಪುರ ಗ್ರಾಮದ ಪುನರ್ವಸತಿ ಕೇಂದ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಕಾರ್ಮಿಕ ಇಲಾಖೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಜ್ಞಾನಜ್ಯೋತಿ ವಿಕಾಸ ಅಸೋಸಿಯೇಷನ್ ಮತ್ತು ವೀರಾಪುರ ಗ್ರಾಮ ವಿಕಾಸ ವೇದಿಕೆ ಜಂಟಿ-ಯಾಗಿ ಆಯೋಜಿಸಿದ್ದ ಕಾರ್ಮಿಕರ ನೋಂದಣಿ ಹಾಗೂ ಸ್ಮಾರ್ಟ್ ಕಾರ್ಡ್ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಟ್ಟಡ ಕಾರ್ಮಿಕರು, ಹೋಟೆಲ್ ಸಿಬ್ಬಂದಿ, ದಿನಗೂಲಿ ನೌಕರರು, ಇಟ್ಟಿಗೆ ಕಾರ್ಖಾನೆ ಕಾರ್ಮಿಕರು ಸೇರಿದಂತೆ ಅನೇಕ ಅಸಂಘಟಿತ ಕ್ಷೇತ್ರದ ಕಾರ್ಮಿಕರಿಗೆ ಸರ್ಕಾರದಿಂದ ವಿವಿಧ ಸೌಲಭ್ಯಗಳು ಲಭ್ಯವಾಗುತ್ತಿವೆ. ಈ ಸೌಲಭ್ಯಗಳ ಫಲಾನುಭವಿಗಳಾಗಲು ಕಾರ್ಡ್ ಪಡೆಯುವುದು ಅನಿವಾರ್ಯ. ಈಗಾಗಲೇ ಕಾರ್ಡ್ ಹೊಂದಿರುವವರು ತಮ್ಮ ಇತರ ಸಹೋದ್ಯೋಗಿಗಳಿಗೆ ಮಾಹಿತಿ ನೀಡಿ ನೋಂದಾಯಿಸಿಕೊಳ್ಳುವಂತೆ ಪ್ರೋತ್ಸಾಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀಮಂತ ಬಸವಪ್ರಭು ಸರನಾಡಗೌಡ, ಜ್ಞಾನಜ್ಯೋತಿ ವಿಕಾಸ ಸಂಸ್ಥೆ ಜಿಲ್ಲೆಯಾದ್ಯಂತ ಅರ್ಥಪೂರ್ಣ ಕಾರ್ಯಗಳನ್ನು ನಡೆಸುತ್ತಿದೆ. ಇಂತಹ ಸೇವಾ ಕಾರ್ಯಗಳಲ್ಲಿ ಎಲ್ಲರನ್ನೂ ಸೇರಿಸಿಕೊಳ್ಳಬೇಕು ಎಂದರು. ನಿವೃತ್ತ ಉಪನಿರ್ದೇಶಕ ಎಂ.ಜಿ.ದಾಸರ ಮಾತನಾಡಿ, ಕಾರ್ಮಿಕರ ಮಕ್ಕಳಲ್ಲಿ ಪ್ರತಿಭೆ ಇರುವವರು ಹೆಚ್ಚು. ಅವರು ಉತ್ತಮ ಶಿಕ್ಷಣ ಪಡೆದು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು.

ಉದ್ಯಮಿ ಸಂತೋಷ ಹೊಕ್ರಾಣಿ, ಕಾರ್ಮಿಕರು ದಿನಗೂಲಿ ಆದಾಯದಿಂದ ಸಂಸಾರ ನಡೆಸುವುದು ಕಷ್ಟ. ಅವರು ಸರ್ಕಾರದ ಸೌಲಭ್ಯಗಳನ್ನು ಪಡೆದು ಆರ್ಥಿಕ, ಶೈಕ್ಷಣಿಕ ಮತ್ತು ಸಾಮಾಜಿಕವಾಗಿ ಮುನ್ನಡೆಯಬೇಕು. ಎಂದರು. ಎಸ್‌ಎಸ್ ಎಲ್‌ಸಿಯಲ್ಲಿ ಉತ್ತಮ ಅಂಕ ಗಳಿಸಿದ ಕಾರ್ಮಿಕರ ಮಕ್ಕಳನ್ನು ಸನ್ಮಾನಿಸಲಾಯಿತು.

ಅಧ್ಯಕ್ಷ ಆರ್.ಜಿ.ಪಾಟೀಲ ಸ್ವಾಗಸಿದರು. ನಿವೃತ್ತ ಪ್ರಾಂಶುಪಾಲ ಶಿವಶಂಕರ ಚೂರಿ ವಂದಿಸಿದರು. ಗುರಣ್ಣ ಗೋಡಿ, ಬೀಳಗಿ ಕಲ್ಮಠದ ಗುರುಪಾದ ಸ್ವಾಮೀಜಿ, ಶಿವಯ್ಯ ಸ್ವಾಮೀಜಿ ಹಾಗೂ ವಿಜಯಪುರದ ರವಿ ಲೋನಿ ಸೇರಿದಂತೆ ಇತರರು ಇದ್ದರು.

# ಕೂಲಿಕಾರರು ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ : ಅಭಿವೃದ್ಧಿ ಅಧಿಕಾರಿ ಸಿದ್ದನಗೌಡ ರಬ್ಬನಗೌಡ್ರ

ಮಲ್ಲಮ್ಮ ನುಡಿ ವಾರ್ತೆ



ಕೊಪ್ಪಳ: ಕುಕನೂರ ತಾಲೂಕಿನ ರಾಜೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ನರೇಗಾ ಕಾಮಗಾರಿ ಸ್ಥಳದಲ್ಲಿ ಕೂಲಿಕಾರರಿಗೆ ಆರೋಗ್ಯ ತಪಾಸಣಾ ಶಿಭಿರ, ರೋಜಗಾರ ದಿನಾಚರಣೆ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಸಿದ್ದನಗೌಡ ರಬ್ಬನಗೌಡ್ರ ಎಲ್ಲರೂ ಆರೋಗ್ಯವಂತ ಜೀವನ ನಡೆಸಲು ಆಸ್ಪತ್ರೆಗಳು ಇವೆ ಆದ-ರೆ ಇಂದು ಒತ್ತಡದ ಬದುಕು ಸಮಯದ ಕೊರತೆಯಿಂದಾಗಿ ಆಸ್ಪತ್ರೆಗೆ ಹೋಗುವುದನ್ನ ಕಡಿಮೆ ಮಾಡಿದ್ದೇವೆ, ಅದರಲ್ಲೂ ದುಡಿಯುವ ಕೂಲಿಕಾರರು ತಮ್ಮ ದೈನಂದಿನ ಕೆಲಸದಲ್ಲಿ ತೊಡಗಿಕೊಳ್ಳುವುದರಿಂದ ಆರೋಗ್ಯದ ಖಾಳಜಿ ವಹಿಸುವುದು ಕಡಿಮೆ ಅದಕ್ಕಾಗಿ ರಾಜೂರ ಗ್ರಾಮ ಪಂಚಾಯತಿಯಿಂದ ಆರೋಗ್ಯ ಶಿಭಿರ ಏರ್ಪಡಿಸಿದ್ದು ಅದರ ಸದುಪಯೋಗ ಪಡಿಸಿಕೊಳ್ಳು ಸಲಹೆ ನೀಡದರು.

ನಂತರ ಕುಕನೂರ ತಾಲೂಕ ಐ.ಇ.ಸಿ ಸಂಯೋಜಕ ಲಕ್ಷ್ಮಣ ಕೆರಳ್ಳಿ ಮಾತನಾಡಿ ನರೇಗಾ ಯೋಜನೆಯಲ್ಲಿ ಒಂದು ಕುಟುಂಬಕ್ಕೆ ಒಂದು ಆರ್ಥಿಕವರ್ಷದಲ್ಲಿ ರೂ. 37,000/- ಗಳ ವರೆಗೆ ದುಡಿಯವ ಅವಕಾಶವಿದೆ, ಇದೊಂದು ಸರ್ಕಾರದ ಕೆಲಸ ಆಗಿರುವುದರಿಂದ ಕನಿಷ್ಠ ಅಳತೆ ಗರಿಷ್ಠ ಕೂಲಿ ಪಡೆಯಬಹುದು, ಮಹಿಳೆ ಮತ್ತು ಪುರುಷರಿಗೆ ಸಮಾನ ಕೂಲಿ ಇದೆ. ವಿಶೇಷ ಚೇತನರಿಗೆ ಅಳತೆಯ ಪ್ರಮಾಣದಲ್ಲಿ ರಿಯಾಯಿತಿಯೂ ಸಹ ಅದರ ಸದುಪಯೋಗ ಪಡಿಸಿಕೊಂಡು ಹೆಚ್ಚಿನ ಸಂಖ್ಯೆಯಲ್ಲಿ ಕೆಲಸಕ್ಕೆ ಬರಲು ಕರೆ ನೀಡಿದರು. ನಂತರ ಪ್ರಧಾನ ಮಂತ್ರಿ ಸುರಕ್ಷಾ ಭಿಮಾ ಯೋಜನೆ, ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಭಿಮಾ ಯೋಜನೆ, ಅಟಲ್ ಪೆನ್ಷನ್ ಯೋಜನೆಗಳಲ್ಲಿ ನೊಂದಣಿ ಮಾಡಿಕೊಳ್ಳುಲ್ಲು ತಿಳಿಸಿದರು.

ವೈದ್ಯಾಧಿಕಾರಿಗಳಾದ ಡಾ.ಸುಷ್ಮಾ ಜಿ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಬಸವರಾಜ ದೇವರಡ್ಡಿ, ಓಅಆ ಅಧಿಕಾರಿಗಳಾದ ಕೃಷ್ಣಾ ದೇಶಪಾಂಡೆ, ಅಊಔ ಅಧಿಕಾರಿಗಳಾದ ಮೇಘಾ ದೇಸಾಯಿ, ಖಿಏಖಿಏ ಆಪ್ತ ಸಮಾಲೋಚಕರಾದ ಕಳಕಪ್ಪ ಬಂಡಿ, ಂಃ-ಕಒಎಜ,ಅಭಂಖಏ ಯೋಜನೆಯ ಆರೋಗ್ಯ ಮಿತ್ರರಾದ ಗೋವಿಂದರಾವ್ ಮರಾಠಿ ,ಗ್ರಾಮ ಪಂಚಾಯತಿ ಸಿಬ್ಬಂದಿಯವರಾದ ಬಸವರಾಜ ಹುಬ್ಬಳ್ಳಿ, ಶರಣಪ್ಪ, ರಾಜು, ಕಾಯಕ ಬಂಧುಗಳಾದ ರೇಷ್ಮಾ, ಮಲ್ಲಪ್ಪ ಹಾಗೂ ಕಾಯಕ ನರೇಗಾ ಕೂಲಿಕಾರರು ಹಾಜರಿದ್ದರು.

# ಇಪಿಎಫ್‌ಓ: ಜೂ.13 ರಂದು ಪಿಂಚಣಿ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.09-ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಜೂ.13 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಾದೇಶಿಕ ಕಚೇರಿಯ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಕೆ.ವಿ ಪ್ರವೀಣ್ ಅವರು ತಿಳಿಸಿದ್ದಾರೆ.

ಬಳ್ಳಾರಿ, ವಿಜಯನಗರ, ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇ-ರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ-ಮೇಲ್ ಮೂಲಕ ಪಿ.ಪಿ.ಓ ಸಂಖ್ಯೆ, ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪ ಹಾಗೂ ಇತ್ಯಾದಿಗಳನ್ನು ಅಂಚೆ ಪತ್ರದ ಮೂಲಕ ಜೂ.10 ರೊಳಗಾಗಿ ತಿಳಿಸಬಹುದು. ಪತ್ರ ಲಕೋಟೆ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು. ಹೆಚ್ಚಿನ ಮಾಹಿತಿಗಾಗಿ ದೂ.08392-268943ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಣಕಾಸು ಸಂಸ್ಥೆಗಳು ಹಿಂದುಳಿದವರ ಅಭಿವೃದ್ಧಿಗೆ ಶ್ರಮಿಸಬೇಕು



ಮಲ್ಲಮ್ಮ ನುಡಿ ವಾರ್ತೆ


ಬಾಗಲಕೋಟೆ,ಜೂ.9-ಹಣಕಾಸು ಸಂಸ್ಥೆಗಳು ಆರ್ಥಿಕವಾಗಿ ಹಿಂದುಳಿದವರು, ನೇಕಾರರು, ಶ್ರಮಿಕರ ಆರ್ಥಿಕ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಜಯಕುಮಾರ ಸರನಾಯಕ ಹೇಳಿದರು.

ಬಾಗಲಕೋಟ ಜಿಲ್ಲಾ ಹಟಗಾರ ಪತ್ತಿನ ಸಹಕಾರಿ ಬ್ಯಾಂಕಿನ ಮಹಾಲಿಂಗಪುರ ಶಾಖೆ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಹಣಕಾಸು ಸಂಸ್ಥೆಗಳು ಅಭಿವೃದ್ಧಿ ಹೊಂದಬೇಕಾದರೆ ನಿರ್ದೇಶಕ ಮಂಡಳಿ ಹಾಗೂ ಸಿಬ್ಬಂದಿಗಳ ಪಾರದರ್ಶಕ ವ್ಯವಹಾರ, ನಿಷ್ಠೆ ಅಗತ್ಯ. ಸಾಲಗಾರರು ಸಹ ಸಕಾಲಕ್ಕೆ ಸಾಲವನ್ನು ಮರುಪಾವತಿ ಮಾಡಿದಾಗ ಮಾತ್ರ ಸಂಸ್ಥೆಗಳ ಅಭಿವೃದ್ದಿ ಸಾಧ್ಯ. ಹಟಗಾರ ಸಮುದಾಯದ ಬ್ಯಾಂಕ ಉತ್ತರೋತ್ತರವಾಗಿ ಬೆಳೆದು, ನೇಕಾರರ ಆರ್ಥಿಕ ಅಭಿವೃದ್ದಿಗೆ ಸಹಕಾರಿಯಾಗಲಿ ಎಂದರು.

ಜಿಲ್ಲಾ ಹಟಗಾರ ಪತ್ತಿನ ಸಹಕಾರಿ ಬ್ಯಾಂಕ್ ಮಹಾಲಿಂಗಪುರ ಶಾಖೆಯನ್ನು ಉದ್ಘಾಟಿಸಿದ ಸಿದ್ಧಾರೂಢ ಬ್ರಹ್ಮವಿದ್ಯಾಶ್ರಮದ ಸಹಜಾನಂದ ಸ್ವಾಮಿಜಿ ಮಾತನಾಡಿ, ಬ್ಯಾಂಕುಗಳು ಎಲ್ಲ ವರ್ಗಗಳ ಜನರಿಗೆ ಆರ್ಥಿಕ ಸಹಕಾರ ನೀಡಬೇಕು ಎಂದರು.

ಬಾಗಲಕೋಟ ಬ ಸವೇಶ್ವರ ಸಹಕಾರಿ ಬ್ಯಾಂಕ್ ಅಧ್ಯಕ್ಷ ಪ್ರಕಾಶ ತಪಶೆಟ್ಟಿ, ಬಿಡಿಸಿಸಿ ಬ್ಯಾಂಕ್ ಮುರುಗೇಶ ಕಡ್ಲಿಮಟ್ಟಿ ಮಾತನಾಡಿದರು. ಜಿಲ್ಲಾ ಹಟಗಾರ ಪತ್ತಿನ ಸಹಕಾರಿ ಬ್ಯಾಂಕ್ ಅಧ್ಯಕ್ಷ ಮಲ್ಲಿಕಾರ್ಜುನ ಸಿಂಹಾಸನ ಕಾರ್ಯಕ್ರಮ ಅಧ್ಯಕ್ಷತೆ ವಹಿಸಿದ್ದರು. ಪುರಸಭೆ ಅಧ್ಯಕ್ಷ ಯಲ್ಲನಗೌಡ ಪಾಟೀಲ, ಪಿಕೆಪಿಎಸ್ ಅಧ್ಯಕ್ಷ ಬಸನಗೌಡ ಪಾಟೀಲ, ಪುರಸಭೆ ಮಾಜಿ ಅಧ್ಯಕ್ಷ ಬಸವರಾಜ ರಾಯರ, ಸದಸ್ಯ ಬಸವರಾಜ ಚಮಕೇರಿ, ಹಿರಿಯರಾದ ಶ್ರೀಶೈಲಪ್ಪ ಡಬಾಡಿ, ಭೀಮಸಿ ಮಗದುಮ, ರಾಮು ಭದ್ರಣ್ಣವರ ಲಕ್ಕಪ್ಪ ಚಮಕೇರಿ, ಜಿ.ಎಸ್.ಗೊಂಬಿ, ಮಲ್ಲಪ್ಪ ಭಾವಿಕಟ್ಟಿ, ಗುರುಪಾದ ಅಂಬಿ, ಅಶೋಕ ಅಂಗಡಿ ಸೇರಿದಂತೆ ಹಲವರು ಇದ್ದರು.

# ಹಾರಕೂಡ ಶ್ರೀಗಳ ತುಲಾಭಾರ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಜೂ.9: ತಾಲೂಕಿನ ಕುಮಾರ ಚಿಂಚೋಳಿ ಗ್ರಾಮದ ಶ್ರೀಕಾಂತ ಹುಣಜಿ ಅವರ ನಿವಾಸದಲ್ಲಿ ಭಾನುವಾರ ಮಾಜಿ ಸಚಿವ. ರಾಜಶೇಖರ ಪಾಟೀಲ್ ನೇತೃತ್ವದಲ್ಲಿ ಹಾರಕೂಡ ಶ್ರೀಮಠದ ಡಾ. ಚನ್ನವೀರ ಶಿವಾಚಾರ್ಯರ ತುಲಾಭಾರ ಕಾರ್ಯಕ್ರಮ ವೈಭವದಿಂದ ಜರುಗಿತು.ಧಾರ್ಮಿಕ ರವಿಧಿವಿಧಾನದಂತೆ ವಿಶೇಷ ಪೂಜೆ ಸಲ್ಲಿಸಿ ತುಲಾಭಾರ ಕಾರ್ಯಕ್ರಮ ನೆರವೇರಿಸಲಾಯಿತು. ಬಳಿಕ ಭಕ್ತಾಧಿಗಳು ಸರತಿ ಸಾಲಿನಲ್ಲಿ ನಿಂತು ಹಾರಕೂಡ ಶ್ರೀಗಳ ಪಾದ ಪೂಜೆ ನೆರವೇರಿಸಿ ದರ್ಶನ ಪಡೆದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಫ್ಸರಮಿಯ, ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಉಮೇಶ ಜಮಗಿ, ಜಿಪಂ. ಮಾಜಿ ಉಪಾಧ್ಯಕ್ಷ ಲಕ್ಷ್ಮಣರಾವ ಬುಳ್ಳಾ, ತಾಪಂ. ಮಾಜಿ ಅಧ್ಯಕ್ಷ ಶಿವರಾಜ ಗಂಗಶಟ್ಟಿ,ಉಸ್ಮಾನಖಾನ್,ಚನ್ನಬಸಪ್ಪ ಹುಣಜಿ, ಬಸವರಾಜ ಹುಣಜಿ, ಶ್ರೀನಿವಾಸ ಹುಣಜಿ, ಶಿವಕುಮಾರ ಬೆಳಕೇರಾ, ನಾಗಬಸಯ್ಯ ಸ್ವಾಮಿ, ವೈಜಿನಾಥ ದಳಪತಿ, ಬಾಬಾ ಖಾನ್ ಸೇರಿ ಅನೇಕರಿದ್ದರು.

# ಜೂ. 14ಕ್ಕೆ ಮುಖ್ಯಮಂತ್ರಿಗಳಿಂದ "ಆರೋಗ್ಯ ಆವಿಷ್ಕಾರ" ಯೋಜನೆಗಳಿಗೆ ಶಂಕುಸ್ಥಾಪನೆ : ಕಾರ್ಯಕ್ರಮ ಯಶಸ್ಸಿಗೆ ಸಾಂಘಿಕವಾಗಿ ಕಾರ್ಯನಿರ್ವಹಿಸಲು ಡಿ.ಸಿ. ಡಾ.ಬಿ.ಸುಶೀಲಾ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ,ಜೂ.9: ಯಾದಗಿರಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜೂನ್ 14 ರಂದು ಬೆಳಿಗ್ಗೆ 11 ಗಂಟೆಗೆ ಕೆ.ಕೆ.ಆರ್.ಡಿ.ಬಿ ಮಂಡಳಿಯ "ಆರೋಗ್ಯ ಆವಿಷ್ಕಾರ" ಯೋಜನೆಯಡಿ ಆರೋಗ್ಯ ಇಲಾಖೆಯ ವಿವಿಧ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಂಕುಸ್ಥಾಪನೆ ನೆರವೇರಿಸಲಿದ್ದು, ಕಾರ್ಯಕ್ರಮ ಯಶಸ್ಸಿಗೆ ಎಲ್ಲಾ ಅಧಿಕಾರಿಗಳು ಸಾಂಘಿಕವಾಗಿ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಸೂಚನೆ ನೀಡಿದರು.

ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಅಧಿಕಾರಿಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮುಖ್ಯಮಂತ್ರಿಗಳ ಜೊತೆಗೆ ರಾಜ್ಯ ಸಭೆಯ ವಿಪಕ್ಷ ನಾಯಕ ಡಾ.ಮಲ್ಲಿಕಾರ್ಜುನ ಖರ್ಗೆ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡುರಾವ್,ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷ ಡಾ.ಅಜಯ್ ಸಿಂಗ್ ಸೇರಿದಂತೆ ಪ್ರದೇಶದ ಸಚಿವರು, ಶಾಸಕರು–ಸಂಸದರು ಹಾಗೂ ಇತರೆ ಚುನಾಯಿತ ಜನಪ್ರತಿನಿಧಿಗಳು ಆಗಮಿಸುವುದರಿಂದ, ಶಿಷ್ಟಾಚಾರದಂತೆ ಗಣ್ಯರಿಗೆ ಆತಿಥ್ಯ ನೀಡಬೇಕು ಎಂದರು.

ಕೆ.ಕೆ.ಆರ್.ಡಿ.ಬಿ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಜರುಗುವ ವಿಭಾಗ ಮಟ್ಟದ ಕಾರ್ಯಕ್ರಮ ಇದಾಗಿರುವುದರಿಂದ ಎಲ್ಲಿಯೂ ಲೋಪವಾಗದಂತೆ ಅಧಿಕಾರಿಗಳು ತಮಗೆ ವಹಿಸಿದ ಕೆಲಸ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಕೇವಲ ನಾಲ್ಕೆ ದಿನ ಬಾಕಿ ಇರುವುದರಿಂದ ಯುದ್ದೋಪಾದಿಯಲ್ಲಿ ಕಾರ್ಯಕ್ರಮಕ್ಕೆ ಸಿದ್ಧತೆ ಕೈಗೊಳ್ಳಬೇಕು. ಇಲ್ಲಿ ಯಾವುದೇ ರೀತಿಯ ಅಲಕ್ಷ್ಯತನ ಸಹಿಸುವುದಿಲ್ಲ ಎಂದ ಡಿ.ಸಿ. ಅವರು, ಆರೋಗ್ಯ ಇಲಾಖೆಯ ಅಧಿಕಾರಿಗಳು ಹೆಚ್ಚಿನ ಮುತುವರ್ಜಿ ವಹಿಸಬೇಕು ಎಂದರು.

ಕಾರ್ಯಕ್ರಮ ಸುಲಿಲತವಾಗಿ ಜರುಗುವಂತೆ ಅಧಿಕಾರಿಗಳನ್ನೊಳಗೊಂಡ ಈಗಾಗಲೆ ವೇದಿಕೆ, ಆರೋಗ್ಯ, ವಾಹನ ನಿರ್ವಹಣೆ, ವಸತಿ, ಪ್ರಚಾರ ಸೇರಿದಂತೆ ಸಮಿತಿಗಳನ್ನು ರಚಿಸಲಾಗಿದ್ದು, ಆಯಾ ಸಮಿತಿ ಮುಖ್ಯಸ್ಥರು ಆಂತರಿಕವಾಗಿ ಸಭೆ ಕರೆದು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ಗಣ್ಯರಿಗೆ ಸಾರಿಗೆ, ವಸತಿ, ಊಟೋಪಚಾರ ಸರಿಯಾದ ರೀತಿಯಲ್ಲಿ ಮಾಡಬೇಕು. ಒಟ್ಟಿನಲ್ಲಿ ಎಲ್ಲಾ ರೀತಿಯ ಸಕಲ ಸಿದ್ಧತೆ ಕೈಗೊಳ್ಳಬೇಕು ಎಂದರು.

ಕಾರ್ಯಕ್ರಮಕ್ಕೆ ಸಾವಿರಾರು ಸಂಖ್ಯೆಯಲ್ಲಿ ಸಾರ್ವಜನಿಕರು ಆಗಮಿಸುವುದರಿಂದ ಸುಗಮ ಸಂಚಾರಕ್ಕೆ ಪಾರ್ಕಿಂಗ್ ಸ್ಥಳ ಗುರುತಿಸಬೇಕು. ಭದ್ರತಾ ದೃಷ್ಟಿಯಿಂದ ವೇದಿಕೆ ಕಾರ್ಯಕ್ರಮದಲ್ಲಿ ಡಿ.ಜೋನ್ ಸ್ಥಾಪಿಸುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಅಗತ್ಯ ಕ್ರಮ ವಹಿಸಬೇಕು. ವೇದಿಕೆಯ ಮೇಲುಸ್ತುವಾರಿ ಲೋಕೋಪಯೋಗಿ ಇಲಾಖೆ ನೋಡಿಕೊಳ್ಳಬೇಕು. ಕಾರ್ಯಕ್ರಮದ ಸ್ಥಳದಲ್ಲಿ ಸೈನೇಜ್ ಬೋರ್ಡ್, ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಕಲ್ಪಿಸಬೇಕು. ಸಾರ್ವಜನಿಕರಿಗೆ ಮಧ್ಯಾಹ್ನದ ಊಟದ ವ್ಯವಸ್ಥೆ ಮಾಡಬೇಕು ಎಂದು ಅಧಿಕಾರಿಗಳಿಗೆ ಡಿ.ಸಿ ಮ ಡಾ.ಬಿ.ಸುಶೀಲಾ ನಿರ್ದೇಶನ ನೀಡಿದರು.

ಅಧಿಕಾರಿಗಳು ಕೇಂದ್ರಸ್ಥಾನ ಬಿಡುವಂತಿಲ್ಲ:

ಜಿಲ್ಲೆಗೆ ಮುಖ್ಯಮಂತ್ರಿ ಸೇರಿ ಗಣ್ಯರು ಆಗಮಿಸುವುದರಿಂದ ಜಿಲ್ಲಾ ಮಟ್ಟದ ಅಧಿಕಾರಿಗಳು ಕೇಂದ್ರಸ್ಥಾನ ಬಿಡುವಂತಿಲ್ಲ. ತಮಗೆ ನೀಡಲಾದ ಜವಾಬ್ದಾರಿ ಚಾಚುತಪ್ಪದೆ ನಿರ್ವಹಿಸಬೇಕು. ಕೆಲಸದಲ್ಲಿ ಯಾವುದೇ ರೀತಿಯ ಅಲಕ್ಷ್ಯತನ ಸಹಿಸುವುದಿಲ್ಲ ಎಂದು ಅಧಿಕಾರಿಗಳಿಗೆ ಡಿ.ಸಿ ಎಚ್ಚರಿಕೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ ಲವೀಶ್ ಓರಡಿಯಾ, ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ ಸೇರಿದಂತೆ ಜಿಲ್ಲೆಯ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಲಗೊಂಡೆ ಮನೆಗೆ ಮಾಜಿ ಸಚಿವ ರಾಜಶೇಖರ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಜೂ.9: ತಾಲೂಕಿನ ಹಂದಿಕೇರಾ ಗ್ರಾಮದ ಕಾಂಗ್ರೆಸ್ ಮುಖಂಡ ರಾಜಕುಮಾರ ಲಗೊಂಡ ಅವರ ಮಂಜುನಾಥ ಲಗೊಂಡ ರಸ್ತೆ ಅಪಘಾತದಲ್ಲಿ ಗಾಯಗೊಂಡ ಹಿನ್ನಲೆ ಲಗೊಂಡ ಅವರ ಮನೆಗೆ ಭಾನುವಾರ ಮಾಜಿ ಸಚಿವ ರಾಜಶೇಖರ ಪಾಟೀಲ್ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು.

ಈ ಸಂದರ್ಭದಲ್ಲಿ ಅಫ್ಸರಮಿಯ, ಲಕ್ಷ್ಮಣರಾವ ಬುಳ್ಳಾ, ಉಮೇಶ ಜಮಗಿ, ಮಾಂತಯ್ಯ ತೀರ್ಥ, ರಾಜಕುಮಾರ ಲಗೊಂಡ,ಶಿವಕುಮಾರ ಬೇಳಕೇರಾ ಸೇರಿ ಅನೇಕರಿದ್ದರು.

# ಭಾರೀ ಮಳೆಗೆ ಮನೆಯ ಮೇಲ್ಛಾವಣಿ ಕುಸಿದು ಗೃಹಿಣಿ ಸಾವು



ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ:ಜೂ.9: ರಾತ್ರಿಯಿಡಿ ಭಾರೀ ಮಳೆ ಸುರಿದ ಪರಿಣಾಮ ಮನೆಯ ಮೇಲ್ಛಾವಣಿ ಕುಸಿದು ಮನೆಯಲ್ಲಿ ಮಲಗಿದ್ದ ಗೃಹಿಣಿ ಸಾವನ್ನಪ್ಪಿದ ಘಟನೆ ವಿಜಯಪುರದಲ್ಲಿ ನಡೆದಿದೆ.ವಿಜಯಪುರ ಜಿಲ್ಲೆ ತಿಕೋಟಾ ತಾಲೂಕಿನ ಬಾಬಾನಗರದಲ್ಲಿ ಘಟನೆ ನಡೆದಿದೆ. ಸಂಗೀತಾ ಗಂಡ ಬಾಳಾಸಾಹೇಬ ಪಾಟೀಲ್ (30) ಮೃತ ಮಹಿಳೆ.

ಭಾನುವಾರ ತಡರಾತ್ರಿ ಮನೆಯಲ್ಲಿ ಮಲಗಿದ್ದಾಗ ಅವಘಡ ಸಂಭವಿಸಿದೆ. ಮಳೆಯಿಂದಾಗಿ ಮನೆ ಸೋರುತ್ತಿದ್ದ ವೇಳೆ ಮನೆಯಿಂದ ಎದ್ದು ಹೊರ ಬಂದು ಪತಿ ಹಾಗೂ ಮಕ್ಕಳು ಅಪಾಯದಿಂದ ಪಾರಾಗಿದ್ದಾರೆ. ಆದರೆ ಗೃಹಿಣಿ ಸಂಗೀತಾ ಮೇಲೆ ಮೇಲ್ಛಾವಣಿ ಬಿದ್ದ ಕಾರಣ ಸ್ಥಳದಲ್ಲೆ ಸಾವನ್ನಪ್ಪಿದ್ದಾರೆ.ತದನಂತರ ಸ್ಥಳೀಯರು ಮಣ್ಣಲ್ಲಿ ಮುಚ್ಚಿಹೋಗಿದ್ದ ಸಂಗೀತಾ ಮೃತದೇಹವನ್ನು ಹೊರತೆಗೆದಿದ್ದಾರೆ.

ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ತಿಕೋಟ ತಾಲೂಕು ಆಸ್ಪತ್ರೆಗೆ ರವಾನಿಸಲಾಗಿದೆ.

ತಿಕೋಟಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ದೆಹಲಿಗೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.9: ಮುಖ್ಯಮಂತ್ರಿ ಸಿದ್ದರಾಮಯ್ಯ ಜೂನ್ 10ರಂದು ನವದೆಹಲಿಗೆ ಪ್ರಯಾಣ ಬೆಳೆಸಲಿದ್ದು, ಕಾಂಗ್ರೆಸ್ ಹೈಕಮಾಂಡ್ ಭೇಟಿ ಮಾಡಲಿದ್ದಾರೆ. ಜೂನ್ 4 ರಂದು ಸಂಭವಿಸಿದ ಕಾಲ್ತುಳಿತದಲ್ಲಿ 11 ಜನರು ಸಾವಿಗೀಡಾಗಿದ್ದು ಸೇರಿದಂತೆ ವಿವಿಧ ಬೆಳವಣಿಗೆಗಳ ಕುರಿತು ಚರ್ಚಿಸುವ ನಿರೀಕ್ಷೆಯಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ದೆಹಲಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಮುಖ್ಯಮಂತ್ರಿ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

ಸಿದ್ದರಾಮಯ್ಯ ಅವರು ದೆಹಲಿಯಲ್ಲಿ ಪಕ್ಷದ ನಾಯಕರನ್ನು ಭೇಟಿ ಮಾಡಿ ಇತ್ತೀಚಿನ ಬೆಳವಣಿಗೆಗಳ ಕುರಿತು ವಿವರಿಸಲಿದ್ದಾರೆ ಎಂದು ಅದು ಹೇಳಿದೆ.ಜೂನ್ 4 ರಂದು ಸಂಜೆ ಇಲ್ಲಿನ ಚಿನ್ನಸ್ವಾಮಿ ಕ್ರೀಡಾಂಗಣದ ಮುಂದೆ ಕಾಲ್ತುಳಿತ ಸಂಭವಿಸಿದೆ. ಈ ವೇಳೆ ಆರ್‌ಸಿಬಿ ತಂಡದ ಐಪಿಎಲ್ ವಿಜಯೋತ್ಸವದಲ್ಲಿ ಭಾಗವಹಿಸಲು ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇರಿದ್ದರು. ಘಟನೆಯಲ್ಲಿ ಹನ್ನೊಂದು ಜನರು ಸಾವಿಗೀಡಾಗಿದ್ದು, 56 ಜನರು ಗಾಯಗೊಂಡಿದ್ದರು. ಕಾಲ್ತುಳಿತ ಘಟನೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ಹೈಕಮಾಂಡ್ ತಮ್ಮಿಂದ ಮಾಹಿತಿ ಕೇಳಿದೆ ಎಂಬ ವರದಿಗಳನ್ನು ಸಿದ್ದರಾಮಯ್ಯ ಭಾನುವಾರ ನಿರಾಕರಿಸಿದ್ದರು.

# ರೈಲಿನಿಂದ ಬಿದ್ದು, ಆರು ಪ್ರಯಾಣಿಕರ ಸಾವು



ಮಲ್ಲಮ್ಮ ನುಡಿ ವಾರ್ತೆ

ಮುಂಬೈ:ಜೂ.9: ಮಹಾರಾಷ್ಟ್ರದ ಥಾಣೆ ಬಳಿಯ ದಿವಾದಲ್ಲಿ ಕಿಕ್ಕಿರಿದು ತುಂಬಿದ್ದ ಲೋಕಲ್ ರೈಲಿನಿಂದ ಬಿದ್ದು ಆರು ಮಂದಿ ಪ್ರಯಾಣಿಕರು ಸಾವನ್ನಪ್ಪಿದ್ದು, ಏಳು ಮಂದಿ ಗಾಯಗೊಂಡಿ–ದ್ದಾರೆ. ಕಾಲಿಡಲು ಜಾಗವಿಲ್ಲದಷ್ಟು ಕಿಕ್ಕಿರಿದು ತುಂಬಿದ್ದ ರೈಲು ಕಾಸರ ಕಡೆಗೆ ಹೋಗುತ್ತಿದ್ದಾಗ ದಿವಾ ಮತ್ತು ಕೋಪರ್ ರೈಲು ನಿಲ್ದಾಣಗಳ ನಡುವೆ ಈ ಘಟನೆ ಸಂಭವಿಸಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ರೈಲಿನ ಬಾಗಿಲಲ್ಲಿ ನಿಂತು ನೇತಾಡುತ್ತಿದ್ದ ಪ್ರಯಾಣಿಕರು:ಪೀಕ್ ಅವರ್‌ನಲ್ಲಿ ಹೆಚ್ಚಿನ ಪ್ರಯಾಣಿಕರಿಂದ ತುಂಬಿದ ರೈಲಿನಲ್ಲಿ ಅನೇಕ ಜನರು ಬಾಗಿಲುಗಳಲ್ಲಿ ನಿಂತು ನೇತಾಡುತ್ತಿದ್ದರು. ರೈಲು ಚಲಿಸುತ್ತಿದ್ದಂತೆಯೇ 10 ಪ್ರಯಾಣಿಕರು ಕೆಳಗೆ ಬಿದ್ದಿದ್ದಾರೆ. ಈ ಪೈಕಿ ಆರು ಮಂದಿ ಸಾವನ್ನಪ್ಪಿದ್ದು, ಉಳಿದವರು ಗಾಯಗೊಂಡು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗಳಿಗೆ ದಾಖಲಾಗಿದ್ದಾರೆ. ಬೆಳಗ್ಗೆ 9.30 ರ ಸುಮಾರಿನಲ್ಲಿ ಥಾಣೆಯ ದಿವಾದಲ್ಲಿ ಈ ದುರ್ಘಟನೆ ನಡೆದಿದೆ. ಪ್ರಯಾಣಿಕರು ಸ್ಥಳೀಯ ರೈಲಿನ ಬಾಗಿಲುಗಳ ಮೇಲೆ ನಿಂತಿದ್ದರು. ಮೃತರೆಲ್ಲರೂ 30 ರಿಂದ 35 ವರ್ಷ ವಯಸ್ಸಿನವರು ಎನ್ನಲಾಗಿದೆ.ಪ್ರಯಾಣಿಕರು ತಾವಾಗಿಯೇ ಕೆಳಗೆ ಬಿದ್ದಿದ್ದಾರೆಯೇ ಅಥವಾ ಬ್ಯಾಗ್‌ಗಳಿಂದಾಗಿ ಅಥವಾ ಯಾರಾದರೂ ತಳ್ಳಿದ್ದಾರೆಯೇ ಎಂಬುದು ಗೊತ್ತಾಗಲು ತನಿಖೆ ನಡೆಸಬೇಕು ಎಂದು ಶಿವಸೇನೆ ಸಂಸದ ನರೇಶ್ ಮ್ಹಾಸ್ಕೆ ಒತ್ತಾಯಿಸಿದ್ದಾರೆ. ಇದು ಅತ್ಯಂತ ದುರದೃಷ್ಟಕರ ಘಟನೆ ಎಂದು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಹೇಳಿದ್ದಾರೆ ಮತ್ತು ಗಾಯಾಳುಗಳು ಹತ್ತಿರದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಘಟನೆಯ ಬಗ್ಗೆ ರೈಲ್ವೇ ತನಿಖೆ ಆರಂಭಿಸಿದೆ ಎಂದೂ ಅವರು ಮಾಹಿತಿ ನೀಡಿದ್ದಾರೆ.ಆರಂಭದಲ್ಲಿ ರೈಲಿನಿಂದ ಕೆಳಗೆ ಬಿದ್ದ ಪ್ರಯಾಣಿಕರು ಮುಂಬೈ–ಲಖನೌ–ಪುಷ್ಪಕ್ ಎಕ್ಸ್‌ಪ್ರೆಸ್‌ನಿಂದ ಬಂದವರು ಎಂದು ತಿಳಿಸಲಾಯಿತು. ತದನಂತರ ಈ ಪ್ರಯಾಣಿಕರು ಮುಂಬೈ ಲೋಕಲ್ ರೈಲಿನಿಂದ ಬಂದವರು ಎಂಬುದು ಗೊತ್ತಾಗಿದೆ ಎಂದು ಕೇಂದ್ರ ರೈಲ್ವೆ ಸಾರ್ವಜನಿಕ ಸಂಪರ್ಕ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

# ರಾಜೇಶ್ವರ ನಿವಾಸಕ್ಕೆ ಮಾಜಿ ಸಚಿವ ಪಾಟೀಲ್ ಭೇಟಿ



ಮಲ್ಲಮ್ಮನುಡಿ ವಾರ್ತೆ ಹುಮನಾಬಾದ್ ಜೂ.9: ತಾಲೂಕಿನ ಕಲ್ಲೂರ್ ಗ್ರಾಮದ ಕಾಂಗ್ರೆಸ್ ಮುಖಂಡ ಸಂಜುಕುಮಾರ ರಾಜೇಶ್ವರ ಅವರು ಅನಾರೋಗ್ಯದಿಂದ ಬಹಳಲುತ್ತಿರುವ ಹಿನ್ನಲೆ ಭಾನುವಾರ ಅವರ ಮನೆಗೆ ಮಾಜಿ ಸಚಿವ ರಾಜಶೇಖರ ಪಾಟೀಲ್ ಆರೋಗ್ಯ ವಿಚಾರಿಸಿದರು.ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಫ್ಸರಮಿಯ, ಶಾಂತವೀರಯ್ಯ ಸ್ವಾಮಿ, ಸಚೀನ ದಾಡಗಿ, ಉಮೇಶ ದಾಡಗಿ, ಅನಿಲ ದೊಡ್ಡಿ ಸೇರಿ ಅನೇಕರಿದ್ದರು.

# ಯೋಧ ಗಟ್ಟಿಯಾದರೆ ದೇಶ ಸುಭದ್ರ : ಕರಬಸವೇಶ್ವರ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.9–ನಗರದ ಕಸ್ತೂರಿಮಠದಲ್ಲಿ ಯೋಧ ಸಿಂಧೂರ ಕಾರ್ಯಕ್ರಮ ಏರ್ಪಡಿಸಿ ಯೋಧ ದಂಪತಿಗಳನ್ನು ಸತ್ಕರಿಸಲಾಯಿತು.

ಸತ್ಕರಿಸಿ ಮಾತನಾಡಿದ ಶ್ರೀಮಠದ ಕರಬಸವೇಶ್ವರ ಶಿವಾಚಾರ್ಯರು, ಯೋಧರ ಮನೆ ಗಟ್ಟಿಯಿದ್ದರೆ ಯೋಧ ಗಟ್ಟಿಯಾಗಿರುತ್ತಾನೆ. ಯೋಧ ಗಟ್ಟಿಯಾದರೆ ದೇಶ ಸುಭದ್ರವಾಗುವುದು ಎಂದು ಹೇಳಿದರು.

ಅತಿಥಿಗಳಾಗಿ ಆಗಮಿಸಿದ್ದ ಆರ್.ವಿ.ಕವಡಿಮಟ್ಟಿ,ನಾರಾಯಣ ಹಣಗಿ,ಮಲ್ಲಿಕಾರ್ಜುನ ಕಾಂಬಳೆ, ಗೀತಾ ಗಿರಿಜಾ, ರೇಣುಕಾ ನ್ಯಾಮಗೌಡ,ನಿವೃತ್ತ ಯೋಧರಾದ ರಾಚಯ್ಯ ಮಠ, ಸುಬೇದಾರ ಗದಿಗೆಪ್ಪ ಅರಕೇರಿ, ಕ್ಯಾಪ್ಟನ್ ಅರ್ಜುನ ಕೋರಿ, ಶಂಕರ ಮಲ್ಲಾಪೂರ, ಸಿದ್ದಲಿಂಗಯ್ಯ ವಸ್ತ್ರದ,ವಿ.ಜಿ.ಪಾಟೀಲ,ಸುರೇಶ ವಸ್ತ್ರದ, ಅಶೋಕ ಜಾಲವಾದಿ, ನಾಗಯ್ಯ ವಸ್ತ್ರದ, ಆನಂದ ಬೇವೂರ್,ಮುತ್ತನಗೌಡ ಪಾಟೀಲ, ಸುರೇಶ ಬದಾಮಿ ಅವರುಗಳು ಪೂಜ್ಯರೊಂದಿಗೆ ಸೇರಿ ಜ್ಯೋತಿ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ನಿವೃತ್ತ ಯೋಧ ಶಂಕ್ರಯ್ಯ ವಿಭೂತಿ ಮಾತನಾಡಿ, ಸರ್ಕಾರ ಮಾಡಬೇಕಿದ್ದ ಕಾರ್ಯವನ್ನು ಶ್ರೀಮಠದ ಪೂಜ್ಯರು ನೆರವೇರಿಸಿದ್ದಾರೆ. ಎಲ್ಲ ಯೋಧ ಬಳಗ ಅವರಿಗೆ ಚಿರಋಣಿಯಾಗಿರುತ್ತೇವೆ ಎಂದರು.

ಕಾರ್ಯಕ್ರಮದಲ್ಲಿ ಆಪರೇಶನ್ ಸಿಂಧೂರ ಕಾರ್ಯಾಚರಣೆಯಲ್ಲಿದ್ದ ಬಸವರಾಜ ಸುಂಕದ, ಹಣಮಂತ ಕಾರಬಾನ ಸೇರಿ ಎಲ್ಲ ಯೋಧರಿಗೆ ಹಾಗೂ ನಿವೃತ್ತ ಯೋಧರು, ವೀರಮರಣ ಹೊಂದಿದ ಯೋಧ ಕುಟುಂಬಕ್ಕೆ ಸತ್ಕರಿಸಲಾಗಿಯಿತು. ನಂತರ ಯೋಧ ಮಡದಿಯರಿಗೆ ಸಿಂಧೂರಾರ್ಪಣ ಮಾಡಿ ಸತ್ಕರಿಸಿ ಗೌರವಿಸಲಾಯಿತು.

ಅನು ಮ್ಯೂಜಿಕ್ ಪೌಂಡೇಶನ್ ಹಾಗೂ ಕುಬೇರಲಕ್ಷ್ಮೀ ಮ್ಯೂಜಿಕ್ ತಂಡದವರಿಂದ ಯೋಧ ಗೀತನಮನ ನಡೆಯಿತು. ಶ್ರೀಮಠದ ಉತ್ತರಾಧಿಕಾರಿ ಓಹಿಲೇಶ ಗುರು ಪ್ರಾಸ್ತಾವಿಕ ಮಾತನಾಡಿದರು. ಆರ್.ಡಿ.ಬಾಬು ನಿರೂಪಿಸಿದರು, ರೇವಣಸಿದ್ದ ದೇವರು ವಂದಿಸಿದರು.

# ಸರ್ಕಾರಿ ಮನೆ ಮಂಜೂರು: ಅಧ್ಯಕ್ಷರ ಪತಿ ವಿರುದ್ಧ ಭ್ರಷ್ಟಾಚಾರ ಆರೋಪ ಮಾಡಿದ ಗ್ರಾಮಸ್ಥರು



ಮಲ್ಲಮ್ಮನುಡಿ ವಾರ್ತೆ ಯಾದಗಿರಿ :ಜೂ.9: ನಾವೂ ಹಲವಾರು ವರ್ಷಗಳಿಂದ ಸರ್ಕಾರಿ ಮನೆಗಳಿಲ್ಲದೇ ತೊಂದರೆಯಲ್ಲಿ ಜೀವನ ಸಾಗಿಸುತ್ತಿದ್ದೇವೆ, ನಾವೂ ಪ್ರಯತ್ನ ಮಾಡಿ, ಪ್ರಧಾನ ಮಂತ್ರಿ ಅವಾಸ್ ಯೋಜನೆಯಡಿ ಅರ್ಜಿ ಹಾಕಿ, 2–3 ವರ್ಷಗಳು ಕಳೆದಿವೆ, ಈಗ 145 ಮನೆಗಳಿಗೆ ಮಂಜೂರಾತಿ ಸಿಕ್ಕಿದೆ, ಆದರೆ ಗ್ರಾಮ ಪಂಚಾಯತ ಅಧ್ಯಕ್ಷೆ ಅನ್ನಪೂರ್ಣಮ್ಮ ಅವರ ಪತಿ ಅಮೀರನರಡ್ಡಿ ಬಿಳ್ಹಾರ ಹಾಗೂ ಪಂಚಾಯತ ಅಭಿವೃದ್ಧಿ ಅಧಿಕಾರಿ ನಿಂಗಣ್ಣ ನಮ್ಮನ್ನು ಕರೆಯಿಸಿ, ಕೆಲ ದಾಖಲಾತಿಗಳನ್ನು ಪಡೆಯುವ ನೆಪದಲ್ಲಿ ಪ್ರತಿಯೊಬ್ಬ ಫಲಾನುಭವಿಗಳಿಂದ 10–15 ಸಾವಿರ ರೂ. ಲಂಚ ಪಡೆದುಕೊಳ್ಳುತ್ತಿದ್ದಾರೆ ಎಂದು ಸಾರ್ವಜನಿಕವಾಗಿಯೇ ದೂರಿದರು.ಈ ವಿಷಯವನ್ನು ಅಧಿಕಾರಿ ಮುಂದೆ ಅಲ್ಲಗಳೆಯಲು ಯತ್ನಿಸಿದ ಬಿಳ್ಹಾರ ಅವರನ್ನು ಹಣ ಕೊಟ್ಟ ಫಲಾನುಭವಿಗಳು ನಿರ್ಭಯದಿಂದ ಹಣ ತೆಗೆದುಕೊಂಡಿ–ದ್ದಾರೆ, ಇನ್ನೂ ಕೆಲವರಲ್ಲಿ ಕೇಳುತ್ತಿದ್ದಾರೆ, ಕೆಲ ದಿನಗಳ ಹಿಂದೆ ಬೆಂಗಳೂರಿಗೆ ತಮ್ಮ ಹೊಟ್ಟೆಪಾಡಿಗಾಗಿ ದುಡಿಯಲು ತೆರಳಿದ ಹಲವಾರು ಕುಟುಂಬಗಳಲ್ಲಿ ಕೆಲ ಕುಟುಂಬಗಳಿಗೆ ಮನೆಗಳು ಮಂಜೂರಾಗಿದ್ದು, ಬೆಂಗಳೂರಿಗೆ ತೆರಳಿ ಅಲ್ಲಿ 3 ದಿನಗಳ ಕಾಳ ತಂಗಿ, ಹಲವಾರು ಜನರಿಂದ ಹಣ ವಸೂಲಿ ಮಾಡಿದ್ದಾನೆ ಎಂದು ತರಾಟೆಗೆ ತೆಗೆದುಕೊಂಡರು.ಈ ಸಂದರ್ಭದಲ್ಲಿ ತೀವ್ರ ನೋವು ವ್ಯಕ್ತಪಡಿಸಿದ ಮುಖಂಡರೊಬ್ಬರು ಅಮೀನರಡ್ಡಿ ಯವರೇ ನಿಮಗೆ ಹಣದ ಆಸೆ ಹೆಚ್ಚಿದೆ, ನೀನೂ ಏನು ಕೆಲಸ ಮಾಡಿಲ್ಲ, ಒಮ್ಮೆ ಗ್ರಾಮದ ಜನರಿಗೆ ನೀರು ಪೂರೈಸುವ ನೀರು ಸಂಗ್ರಹ ಘಟಕದಲ್ಲಿ ಒಂದು ಬಾಟಲ್ ವಿಷ ಹಾಕಿ, ಒಮ್ಮೆ ಎಲ್ಲರನ್ನೂ ಸಾಯಿಸಿ ಬಿಡಿ, ನಮ್ಮೆಲ್ಲರ ಆಸ್ತಿ, ನಿಮ್ಮ ಹೆಸರಿಗೆ ಮಾಡಿಕೊಂಡು ಸುಖವಾಗಿ ಬಾಳಿರೀ ಎಂದು ಚಾಟಿಬೀಸಿದರು.ನೀವೂ ಪಂಚಾಯತ ಅಭಿವೃದ್ಧಿ ಅಧಿಕಾರಿ ಮೊದಲು ಜನರಿಗೆ ಗೌರವ ಕೊಡುವುದನ್ನು ಕಲಿಯುವ ಜೊತೆಗೆ ಸಮಸ್ಯೆ ಪರಿಹಾರಕ್ಕೆ ಯತ್ನಿಸಿ, ಇಲ್ಲದಿದ್ದರೇ ನಿಮಗೆ ಗ್ರಾಮದ ಜನರು ಹಾಕುವ ಶಾಪ ತಟ್ಟುತ್ತದೆ ಎಂದು ಎಚ್ಚರಿಸಿದರು.

ನಂತರ ಗ್ರಾಮದ ಪ್ರಮುಖ ಮುಖಂಡರ ನಿಯೋಗ ಯಾದಗಿರಿಗೆ ಆಗಮಿಸಿ, ಗುರುಮಿಠಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಅವರನ್ನು ಭೇಟಿಯಾಗಿ, ಗ್ರಾಮದ ಸಮಸ್ಯೆಗಳನ್ನು ಹಾಗೂ ಪಿಡಿಒ–ಅಧ್ಯಕ್ಷರ ಪತಿ ನಡೆಸಿರುವ ಭ್ರಷ್ಟಾಚಾರ ಆಡಳಿತ ವಿವರಿಸಿ, ಪಿಡಿಒ ವರ್ಗಾವಣೆಗೆ ಒತ್ತಾಯಿಸಿದರು.

# ಅಂಬೇಡ್ಕರ್ ಮೂರ್ತಿ ಅನಾವರಣ ಭಿತ್ತಿ ಪತ್ರ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಜೂ.9: ದುಬಲಗುಂಡಿ ಗ್ರಾಮದಲ್ಲಿ ಜೂ. 15ರಂದು ಜರುಗಲಿರುವ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ನೂತನ ಮೂರ್ತಿ ಅನಾವರಣ ಕಾರ್ಯಕ್ರಮದ ಭಿತ್ತಿ ಪತ್ರ ಹುಮನಾನಾದ್ ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರು ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಲಕ್ಷ್ಮಣರಾವ ಬುಳ್ಳಾ, ಲಕ್ಷ್ಮಿಪುತ್ರ ಮಾಳಗೆ, ಮಲ್ಲಿಕಾರ್ಜುನ್ ಮಹೇಂದ್ರಕರ್, ಅಫ್ಸರಮಿಯ, ಬಾಬು ಟೈಗರ್, ದತ್ತಕುಮಾರ ಚಿದ್ರಿ, ಪ್ರಭುರಾವ ತಾಳಮಡಗಿ, ಅಶೋಕಕುಮಾರ ಚಳಕಾಪೂರೆ, ರಮೇಶ ಚಾಂದೆ, ಶ್ರೀರಂಗ ಭೋಲಾ, ಇಂದ್ರಜಿತ್ ಮಿತ್ರಾ, ರವಿ ಭಾಗ್ಯಕರ್, ಸುರೇಶ ಘಾಂಗ್ರೆ, ಅಂಬ್ರೇಶ ಮಿತ್ರಾ, ಸತೀಷ ರತ್ನಾಕರ್, ರಾಹುಲ್ ಹುದ್ದಾ, ಅಮರ ಚಾಂದೆ, ಚಂದು ಮಿತ್ರಾ ಸೇರಿ ಅನೇಕರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.